ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1816

ಸದಸ್ಯರ ಹೆಸರು : ಶ್ರೀ ಅಮೃತ್ ಅಯ್ಯಪ್ಪ ದೇಸಾಯಿ (ಧಾರವಾಡ)

ಉತ್ತರಿಸುವವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17.03.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೋವಿಡ್-19ರ ಲಾಕ್ ಡೌನ್ ಅವಧಿಯಲ್ಲಿ ಹೂ ಬೆಳೆಗಾರರಿಗೆ ಮಾರುಕಟ್ಟೆ ಸೌಲಭ್ಯದ ಅನಾನುಕೂಲದಿಂದ ಉಂಟಾದ ಹಾನಿಗೆ ಪರಿಹಾರ ರೂ.126.85 ಲಕ್ಷಗಳ ಅನುದಾನ ಬಾಕಿ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ನಿಯಮಾನುಸಾರ ಬೆಳೆ ಸಮೀಕ್ಷೆಯಲ್ಲಿ ನಮೂದಾಗಿರುವ ಎಲ್ಲಾ ಅರ್ಹ ಫಲಾನುಭವಿಗಳಿಗೆ ಬೆಳೆ ಪರಿಹಾರ ಜಮೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.
ಆ)	ಬಂದಿದ್ದಲ್ಲಿ, ಅಂದಾಜು ರೂ.126.85 ಲಕ್ಷಗಳ ಬಾಕಿ ಅನುದಾನವನ್ನು ಬಿಡುಗಡೆಗೊಳಿಸಲು ಕೈಗೊಂಡ ಕ್ರಮವೇನು;	
ಇ)	ಎಷ್ಟು ದಿನಗಳಲ್ಲಿ ಬಾಕಿ ಅನುದಾನವನ್ನು ಬಿಡುಗಡೆಗೊಳಿಸಲಾಗುವುದು?	

ಸಂಖ್ಯೆ: HORTI 142 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ : 1817

ವಿಧಾನ ಸಭೆ ಸದಸ್ಯರ ಹೆಸರು : ಶ್ರೀ.ಅಮೃತ್ ಅಯ್ಯಪ್ಪ ದೇಸಾಯಿ (ಧಾರವಾಡ)

ಉತ್ತರಿಸುವ ಸಚಿವರು : ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರಸಂ	ಪ್ರಶ್ನೆ	ಉತ್ತರ
ಅ)	ಮಾವಿನ ತೋಪುಗಳು ಆಕಸ್ಮಿಕ ಬೆಂಕಿ ತಗುಲಿ ಸುಟ್ಟು ಹೋದಂತಹ ಸಂಧರ್ಭದಲ್ಲಿ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇತ್ತೀಚಿಗೆ ಧಾರವಾಡ ಮತಕ್ಷೇತ್ರದ ವೆಂಕಟಾಪುರ ಗ್ರಾಮದಲ್ಲಿ ಆಕಸ್ಮಿಕ ಬೆಂಕಿ ತಗುಲಿ ಮಾವಿನ ತೋಪು ಸಂಪೂರ್ಣ ಸುಟ್ಟು ಹೊಗಿದ್ದು ಸರ್ಕಾರದಿಂದ ಯಾವುದೇ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಸರ್ಕಾರದ ಗಮನಕ್ಕೆ ಬಂದಿದೆ.
ಆ)	ಬಂದಿದ್ದಲ್ಲಿ, ಇಲಾಖೆಯಿಂದ ರೈತರಿಗೆ ಪರಿಹಾರ ನೀಡಲು ಕೈಗೊಂಡ ಕ್ರಮವೇನು;	ಈ ಕುರಿತು ಕಂದಾಯ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸಮೀಕ್ಷೆ ಮಾಡಿದ್ದು, ವರದಿಯನ್ನು ಕಂದಾಯ ಇಲಾಖೆಗೆ ಸಲ್ಲಿಸಲಾಗಿದೆ. ಈ ರೀತಿ ಪ್ರಕರಣದಲ್ಲಿ ರೈತರಿಗೆ ಪರಿಹಾರ ನೀಡಲು ತೋಟಗಾರಿಕೆ ಇಲಾಖೆಯಲ್ಲಿ ಯಾವುದೇ ಯೋಜನೆ ಇರುವುದಿಲ್ಲ.

ಸಂಖ್ಯೆ: HORTI 143 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1823
ಸದಸ್ಯರ ಹೆಸರು : ಡಾ॥ ಅಂಜಲಿ ಹೇಮಂತ್ ನಿಂಬಾಳ್ಕರ್
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಖಾನಾಪೂರ ತಾಲ್ಲೂಕಿನಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳ ಸಂಖ್ಯೆ ಕಡಿಮೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೋವಿಡ್-19ರ ಸಾಂಕ್ರಾಮಿಕ ರೋಗದಿಂದಾಗಿ ಖಾನಾಪೂರ ತಾಲ್ಲೂಕಿನ ಕೆಲ ಮಾರ್ಗಗಳಲ್ಲಿ ಸಾರಿಗೆ ಕಾರ್ಯಾಚರಣೆ ವ್ಯತ್ಯಯಗೊಂಡಿರುತ್ತದೆ. ಪ್ರಸ್ತುತ ಲಾಕ್‌ಡೌನ್ ತೆರವುಗೊಳಿಸಿರುವುದರಿಂದ ಹಾಗೂ ಹಂತಹಂತವಾಗಿ ಶಾಲಾ-ಕಾಲೇಜುಗಳು ಪ್ರಾರಂಭವಾಗಿರುವುದರಿಂದ, ಸಾರ್ವಜನಿಕರು/ ವಿದ್ಯಾರ್ಥಿಗಳಿಗೆ ಅಗತ್ಯಕ್ಕೆ ಅನುಗುಣವಾಗಿ ಅವಶ್ಯಕ ಸರತಿಗಳನ್ನು ಕಾರ್ಯಾಚರಿಸಲಾಗುತ್ತಿದೆ.
ಆ)	ಈ ತಾಲ್ಲೂಕಿನಲ್ಲಿ ಸಾರ್ವಜನಿಕರ ಮತ್ತು ವಿದ್ಯಾರ್ಥಿಗಳ ಸಂಚಾರಕ್ಕಾಗಿ ಅಗತ್ಯವಿರುವ ಬಸ್‌ಗಳ ಸಂಖ್ಯೆ ಎಷ್ಟು;	ಖಾನಾಪೂರ ಘಟಕದಿಂದ ಪ್ರಸ್ತುತ 56 ಬಸ್‌ಗಳಿಂದ ತಾಲ್ಲೂಕಾ ವ್ಯಾಪ್ತಿಯ ಗ್ರಾಮಗಳಿಗೆ ಹಾಗೂ ಇತರೆ ದೂರ ಮಾರ್ಗಗಳಿಗೆ ಹೋಗುವ/ಬರುವ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಅವಶ್ಯಕತೆಗನುಗುಣವಾಗಿ ಸಾರಿಗೆ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ.
ಇ)	ಪ್ರಸ್ತುತ ಈ ತಾಲ್ಲೂಕಿನೊಳಗೆ ಸಂಚರಿಸಲು ನಿಗದಿಪಡಿಸಿರುವ ಬಸ್‌ಗಳೆಷ್ಟು;	ಖಾನಾಪೂರ ಹಾಗೂ ತಾಲೂಕಿನ ವ್ಯಾಪ್ತಿಯ ಗ್ರಾಮಗಳಿಗೆ, ಬೆಳಗಾವಿ ವಿಭಾಗದ 102 ಹಾಗೂ ಇತರೆ ವಿಭಾಗ/ಸಂಸ್ಥೆಗಳಿಂದ 53 ಅನುಸೂಚಿ ಸೇರಿದಂತೆ ಒಟ್ಟು 155 ಸಾರಿಗೆ ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿದ್ದು, ಪ್ರತಿ ದಿನ ಬೆಳಗಾವಿ ವಿಭಾಗ ಮತ್ತು ಇತರೆ ವಿಭಾಗ/ಸಂಸ್ಥೆಗಳಿಂದ ಒಟ್ಟು 616 ಸಾರಿಗೆ ಸುತ್ತುಗಳನ್ನು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ ಹಾಗೂ ಖಾನಾಪೂರ-ಬೆಳಗಾವಿ ಮಾರ್ಗದಲ್ಲಿ ಕಾರ್ಯಾಚರಿಸಲಾಗುತ್ತಿದೆ.
ಈ)	ಹೆಚ್ಚುವರಿ ಬಸ್‌ಗಳನ್ನು ಖಾನಾಪೂರ ತಾಲ್ಲೂಕಿನೊಳಗಿನ ಸಂಚಾರಕ್ಕೆ ಒದಗಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ?	ಖಾನಾಪೂರ ತಾಲೂಕಿನ ವ್ಯಾಪ್ತಿಯ ಗ್ರಾಮಗಳಿಂದ ಬಂದಂತಹ ಬೇಡಿಕೆಗಳನ್ನು ಕಾಲಕಾಲಕ್ಕೆ ಆದ್ಯತೆಯ ಮೇರೆಗೆ ಪರಿಶೀಲಿಸಿ ಅಗತ್ಯವಿರುವ ಸಮಯಗಳಲ್ಲಿ ಹೆಚ್ಚುವರಿ ಸಾರಿಗೆ ಸುತ್ತುಗಳನ್ನು ಅಳವಡಿಸುವ ಕ್ರಮ ಜಾರಿಯಲ್ಲಿರುತ್ತದೆ.

ಸಂಖ್ಯೆ: ಟಿಡಿ 97 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 1826

ಉತ್ತರಿಸಬೇಕಾದ ಸಚಿವರು : ಮಾನ್ಯ ಕೃಷಿ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ.ಸಂ	ಪ್ರಶ್ನೆ	ಉತ್ತರ
ಅ	ವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿರುವ ಕೃಷಿ ವಿಜ್ಞಾನ ಕೇಂದ್ರುದಲ್ಲಿ ಕೃಷಿ ಮತ್ತು ಡಿಪ್ಲೊಮೋ ತೋಟಗಾರಿಕೆ(ವಿಷಯ) ವೃತ್ತಿಪರ ಕೋರ್ಸುಗಳು ಇಲ್ಲದೇ ಇರುವುದರಿಂದ ಸದರಿ ವಿಷಯಗಳಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ.
ಆ	ಬಂದಿದ್ದಲ್ಲಿ, ಡಿಪ್ಲೊಮೋ ವಿಷಯದಲ್ಲಿ ಕೃಷಿ ಮತ್ತು ಡಿಪ್ಲೊಮೋ ತೋಟಗಾರಿಕೆ(ವಿಷಯ) ವೃತ್ತಿಪರ ಕೋರ್ಸುಗಳನ್ನು ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು;	ಈಗಾಗಲೇ ಧಾರವಾಡ ಕೃಷಿ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿರುವ ವಿಜಯಪುರದಲ್ಲಿ ಡಿಪ್ಲೋಮಾ (ಕೃಷಿ) ಮಹಾವಿದ್ಯಾಲಯವನ್ನು ಪ್ರಾರಂಭಿಸಿದ್ದು, ಇಂಡಿ ತಾಲ್ಲೂಕಿನ ವಿದ್ಯಾರ್ಥಿಗಳನ್ನೊಳಗೊಂಡು ವಿಜಯಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.
ಇ	ಈ ವೃತ್ತಿಪರ ಕೋರ್ಸುಗಳನ್ನು ಕೃಷಿ ವಿಜ್ಞಾನ ಕೇಂದ್ರ ಹೊಂದಿರುವ ಇಂಡಿ ಪಟ್ಟಣದಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು? (ವಿವರ ನೀಡುವುದು)	ಉದ್ಭವಿಸುವುದಿಲ್ಲ.

ಸಂಖ್ಯೆ:AGRI-AUD/13/2021

(ಬಿ.ಸಿ ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1832
ಸದಸ್ಯರ ಹೆಸರು	ಶ್ರೀ ಸಂಜೀವ ಮಠಂದೂರ್ (ಪುತ್ತೂರು)
ಉತ್ತರಿಸಬೇಕಾದ ದಿನಾಂಕ	17.03.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವ್ಯಾಪ್ತಿಯ ರಸ್ತೆಯನ್ನು ಲೋಕೋಪಯೋಗಿ ರಸ್ತೆಯಾಗಿ ಮೇಲ್ದರ್ಜೆಗೇರಿಸಿದ ಗ್ರಾಮೀಣ ರಸ್ತೆಗಳ ನಿರ್ವಹಣೆ ಹಾಗೂ ಅಭಿವೃದ್ಧಿಗೆ ಸರ್ಕಾರದಿಂದ ಅನುದಾನ ನೀಡಲಾಗಿದೆಯೇ; ನೀಡಿದ್ದಲ್ಲಿ, ಯಾವಾಗಿನಿಂದ ನಿರ್ವಹಣೆ ಕಾರ್ಯ ಆರಂಭವಾಗಲಿದೆ;	ಸರ್ಕಾರಿ ಆದೇಶ ಸಂಖ್ಯೆ: ಲೋಇ: ಇಐ85/5:ಇಎಪಿ:2020 ದಿನಾಂಕ 01.09.2020 ರಂದು 2020-21 ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ 59 ಸಂಖ್ಯೆಯ 872.85 ಕಿ.ಮೀ. ಉದ್ದದ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳಲು ಅನುಮೋದನೆ ನೀಡಲಾಗಿದೆ. • ಈ ಪೈಕಿ ಪುತ್ತೂರು ತಾಲ್ಲೂಕಿನ 7 ಸಂಖ್ಯೆಯ 112.50 ಕಿ.ಮೀ. ಉದ್ದದ ರಸ್ತೆಯು ಒಳಗೊಂಡಿರುತ್ತದೆ. • ಪುತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೇಲ್ದರ್ಜೆಗೇರಿಸಿದ ರಸ್ತೆಗಳು ಹಸ್ತಾಂತರ ಪ್ರಕ್ರಿಯೆ ಇರುವುದರಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.
ಆ.	ಹಾಗಿದ್ದಲ್ಲಿ, ಪುತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೇಲ್ದರ್ಜೆಗೇರಿಸಿದ ರಸ್ತೆಗಳ ನಿರ್ವಹಣೆ ಹಾಗೂ ಅಭಿವೃದ್ಧಿಗೆ ಸರ್ಕಾರದಿಂದ ಕಳೆದ 3 ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)	

ಕಡತ ಸಂಖ್ಯೆ: ಗ್ರಾಅಪ:ಅಧಿ-15-9/20:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1835

ಸದಸ್ಯರ ಹೆಸರು : ಸಂಜೀವ್ ಮಠಂದೂರ್ (ಪುತ್ತೂರು).

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ತೋಟಗಾರಿಕೆ ಇಲಾಖೆಯಲ್ಲಿನ ಹನಿ ನೀರಾವರಿಗೆ ಸಂಬಂಧಿಸಿದ ಕೃಷಿ ಸಿಂಚಾಯಿ ಯೋಜನೆಗೆ ಪುತ್ತೂರು ವಿಧಾನಸಭಾ ಕ್ಷೇತ್ರದಿಂದ ಎಷ್ಟು ರೈತರನ್ನು ಆಯ್ಕೆ ಮಾಡಲಾಗಿದೆ; ಹಾಗೂ ಪುತ್ತೂರು ಕ್ಷೇತ್ರಕ್ಕೆ ಈ ಯೋಜನೆಯಡಿಯಲ್ಲಿ ಇದುವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ? (ವಿವರ ನೀಡುವುದು)	ತೋಟಗಾರಿಕೆ ಇಲಾಖೆಯಲ್ಲಿನ ಹನಿ ನೀರಾವರಿಗೆ ಸಂಬಂಧಿಸಿದ ಕೃಷಿಸಿಂಚಾಯಿ ಯೋಜನೆಗೆ ಪುತ್ತೂರು ವಿಧಾನಸಭಾ ಕ್ಷೇತ್ರದಲ್ಲಿ 2020-21ನೇ ಸಾಲಿನಲ್ಲಿ 66 ರೈತರನ್ನು ಆಯ್ಕೆ ಮಾಡಲಾಗಿರುತ್ತದೆ.ಪುತ್ತೂರು ಕ್ಷೇತ್ರಕ್ಕೆ 2020-21ನೇ ಸಾಲಿಗೆ ರೂ.8.742 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಸಂಖ್ಯೆ: HORTI 146 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **1843**

ಸದಸ್ಯರ ಹೆಸರು : ಶ್ರೀ ರಘುಮೂರ್ತಿ ಟಿ.
(ಚಳ್ಳಕೆರೆ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಚಿತ್ರದುರ್ಗ ಜಿಲ್ಲೆಯಲ್ಲಿ ಒಂದೇ ಪ್ರಾದೇಶಿಕ ಸಾರಿಗೆ ಕಛೇರಿ ಇದ್ದು, ವಾಹನಗಳ ನೋಂದಣಿ, ತಪಾಸಣೆ, ಡ್ರೈವಿಂಗ್ ಲೈಸೆನ್ಸ್ ನೀಡುವಿಕೆ ಮತ್ತು ಅಪಘಾತ ವಾಹನಗಳ ತಪಾಸಣೆ ಮಾಡಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸಾರ್ವಜನಿಕ ಹಿತದೃಷ್ಟಿಯಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ ಪ್ರತಿ ತಿಂಗಳು 8ನೇ ಹಾಗೂ 22ನೇ ದಿನಾಂಕಗಳೊಂದು ಮತ್ತು ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಪ್ರತಿ ತಿಂಗಳು 16ನೇ ದಿನಾಂಕದಂದು ಶಿಬಿರ ಕರ್ತವ್ಯಗಳನ್ನು ನಿರ್ವಹಿಸಲಾಗುತ್ತಿದೆ. ವಾಹನಗಳ ನೋಂದಣಿ, ತಪಾಸಣೆ, ಡ್ರೈವಿಂಗ್ ಲೈಸೆನ್ಸ್ ನೀಡುವಿಕೆ ಮತ್ತು ಅಪಘಾತ ವಾಹನಗಳ ತಪಾಸಣೆ ಮಾಡಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
(ಆ)	ಬಂದಿದ್ದಲ್ಲಿ, ಈ ಜಿಲ್ಲೆಯ ಆಂಧ್ರ ಗಡಿಭಾಗದ, ತಾಲ್ಲೂಕುಗಳಾದ ಚಳ್ಳಕೆರೆ ಮತ್ತು ಮೊಳಕಾಲ್ಮೂರು ಭಾಗದ ಕೊನೆಯ ಗ್ರಾಮದ ವಾಹನ ನೋಂದಣಿ ಮತ್ತು ತಪಾಸಣೆ ಮಾಡುವ ಸಲುವಾಗಿ ಚಳ್ಳಕೆರೆ ನಗರದಲ್ಲಿ RTO ಕಛೇರಿ ಪ್ರಾರಂಭ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಹಿರಿಯೂರು ತಾಲ್ಲೂಕುಗಳನ್ನು ಒಳಗೊಂಡಂತೆ ಚಳ್ಳಕೆರೆ ತಾಲ್ಲೂಕಿನಲ್ಲಿ ಪ್ರಾದೇಶಿಕ/ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ ತೆರೆಯುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.
(ಇ)	ಹಾಗಿದ್ದಲ್ಲಿ, ಜಿಲ್ಲೆಯ ಚಳ್ಳಕೆರೆ, ಮೊಳಕಾಲ್ಮೂರು, ಹಿರಿಯೂರು ತಾಲ್ಲೂಕುಗಳನ್ನು ಸೇರಿಸಿ ಚಳ್ಳಕೆರೆ ನಗರದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿ ಪ್ರಾರಂಭ ಮಾಡಲು ಸರ್ಕಾರವು ಯಾವ ಕ್ರಮ ವಹಿಸುತ್ತದೆ; (ಸಂಪೂರ್ಣ ಮಾಹಿತಿ ನೀಡುವುದು)	

ಟಿಡಿ 50 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1845
ಸದಸ್ಯರ ಹೆಸರು	ಶ್ರೀ ಸುರೇಶ್ ಗೌಡ (ನಾಗಮಂಗಲ)
ಉತ್ತರಿಸುವ ದಿನಾಂಕ	17.03.2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ನಾಗಮಂಗಲ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಾಗಿ ಜಮೀನು ಹಾಗೂ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೇ; (ವಿವರ ನೀಡುವುದು)	ನಾಗಮಂಗಲ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಾಗಿ ನಾಗಮಂಗಲ ತಾಲ್ಲೂಕು ಕಸಬಾ ಹೋಬಳಿಯ ಸರ್ವೆ ನಂಬರ್ 434ರಲ್ಲಿ 07 (ಏಳು) ಗುಂಟೆ ಖಾಲಿ ನಿವೇಶನ ಮಂಜೂರಾಗಿರುತ್ತದೆ. 2020-21ನೇ ಸಾಲಿನಲ್ಲಿ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಯಾಗಿರುವುದಿಲ್ಲ.
ಆ)	ಬಿಡುಗಡೆ ಮಾಡಿದ್ದರೆ, ಇದುವರೆವಿಗೂ ಕಾಮಗಾರಿ ಪ್ರಾರಂಭ ಮಾಡದೇ ಇರಲು ಕಾರಣವೇನು;	ಅನ್ವಯಿಸುವುದಿಲ್ಲ.
ಇ)	ಇನ್ನಾದರೂ ಕಾಮಗಾರಿ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	2021-22ನೇ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ ಕ್ರಮವಹಿಸಲಾಗುವುದು.

ಸಂಖ್ಯೆ: AGRI-ACT/51/ 2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 1847
ಉತ್ತರಿಸಬೇಕಾದ ದಿನಾಂಕ – 17-03-2021
ಸದಸ್ಯರ ಹೆಸರು – ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳು ಮತ್ತು ಯೋಜನೆಗಳು ಯಾವುವು; (ಸಂಪೂರ್ಣ ವಿವರ ನೀಡುವುದು)	2020-21ನೇ ಸಾಲಿನಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಅಧಿಸೂಚಿತವಲ್ಲದ ಅಲ್ಪಸಂಖ್ಯಾತರ ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಉದ್ದೇಶಕ್ಕಾಗಿ ರೂ.200.00 ಕೋಟಿಗಳನ್ನು ಮೀಸಲಿಡಲಾಗಿದ್ದು, ಪರಿಷ್ಕೃತ ಆಯವ್ಯಯದಲ್ಲಿ ರೂ.48.00 ಕೋಟಿ ಅನುದಾನವನ್ನು ಮಾತ್ರ ಬಿಡುಗಡೆ ಮಾಡಲಾಗಿದೆ. ಹಾಗೂ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು: 1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ. 2.ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು. 3.ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು. 4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.)
ಆ)	2017-18ನೇ ಅವಧಿಯಿಂದ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನವೆಷ್ಟು; ಹಾಗೂ ಅದರಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; (ವಿವರ ನೀಡಲಾಗುವುದು)	2017-18ನೇ ಅವಧಿಯಿಂದ ಇಲ್ಲಿಯವರೆಗೆ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ಯಾವುದೇ ಅನುದಾನ ಖರ್ಚು ಮಾಡಿರುವುದಿಲ್ಲ.
ಇ)	ಚಾಮರಾಜನಗರ ಜಿಲ್ಲೆಯಲ್ಲಿ ಇರುವ ಸ್ಲಂಗಳ ಸಂಖ್ಯೆ ಎಷ್ಟು; ಈ ಸ್ಲಂಗಳ ಅಭಿವೃದ್ಧಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;	ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ನಂ.2ನೇ ಉಪವಿಭಾಗ, ಮೈಸೂರು ರವರು ನೀಡಿರುವ ಮಾಹಿತಿಯ ಪ್ರಕಾರ ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 66 ಸ್ಲಂಗಳಿರುತ್ತವೆ
ಈ)	ಈ ಜಿಲ್ಲೆಗೆ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಖರ್ಚು ಮಾಡಲಾಗಿರುವ ಹಣ ಎಷ್ಟು? (ವಿವರ ನೀಡುವುದು)	– ಇಲ್ಲ –.

MWD 107 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

58(b)

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1849
2. ಸದಸ್ಯರ ಹೆಸರು : ಶ್ರೀನಿವಾಸಮೂರ್ತಿ ಕೆ. ಡಾ|| (ನೆಲಮಂಗಲ)
3. ಉತ್ತರಿಸಬೇಕಾದ ದಿನಾಂಕ : 17-03-2021
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಬೆಂಗಳೂರಿನ ಜಿಂದಾಲ್‌ನಿಂದ ನೆಲಮಂಗಲದವರೆಗೆ ಮೆಟ್ರೋ ರೈಲು ಮಾರ್ಗ ನಿರ್ಮಾಣ ಮಾಡಲು ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;	ಬೆಂಗಳೂರಿನ ಜಿಂದಾಲ್‌ನಿಂದ ನೆಲಮಂಗಲದವರೆಗೆ ಮೆಟ್ರೋ ರೈಲು ಮಾರ್ಗ ನಿರ್ಮಾಣ ಮಾಡಲು ಬೆಂಗಳೂರು ಮೆಟ್ರೋ ರೈಲು ನಿಗಮದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
ಆ)	ಈ ಯೋಜನೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರ ನೀಡಿದ ಅನುದಾನವೆಷ್ಟು; (ವಿವರ ನೀಡುವುದು)	ಈ ಯೋಜನೆಗೆ ರಾಜ್ಯ ಮತ್ತು ಕೇಂದ್ರ ಸರ್ಕಾರ ಅನುದಾನವನ್ನು ನೀಡಿರುವುದಿಲ್ಲ.
ಇ)	ಮೆಟ್ರೋ ರೈಲು ಮಾರ್ಗ ಹಾಗೂ ನಿಲ್ದಾಣಗಳ ಕಾಮಗಾರಿಗಳನ್ನು ಯಾವಾಗ ಪ್ರಾರಂಭ ಮಾಡಲಾಗುವುದು;	ಪ್ರಶ್ನೆ ಉದ್ಭವಿಸುವುದಿಲ್ಲ.
ಈ)	ಈ ಮಾರ್ಗದಲ್ಲಿ ಒಟ್ಟು ಎಷ್ಟು ನಿಲ್ದಾಣಗಳನ್ನು ಗುರುತಿಸಲಾಗಿದೆ; (ವಿವರ ನೀಡುವುದು)	
ಉ)	ಜಿಂದಾಲ್‌ನಿಂದ ನೆಲಮಂಗಲದವರೆಗೆ ಮೆಟ್ರೋ ರೈಲು ಮಾರ್ಗ ನಿರ್ಮಾಣ ಮಾಡುವುದಕ್ಕೆ ಆರ್ಥಿಕ ಇಲಾಖೆ ಮತ್ತು ಸಚಿವ ಸಂಪುಟದಲ್ಲಿ ಅಂಗೀಕಾರ ದೊರಕಿದೆಯೇ? (ವಿವರ ನೀಡುವುದು)	

ಕಡತ ಸಂಖ್ಯೆ: ನಅಇ 76 ಪಿ.ಆರ್.ಜೆ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿಗಳು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 2523
ಸದಸ್ಯರ ಹೆಸರು	: ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಉತ್ತರಿಸುವ ಸಚಿವರು	: ತೋಟಗಾರಿಕೆ ಮತ್ತು ರೇಷ್ಮೆ ಸಚಿವರು
ಉತ್ತರಿಸಬೇಕಾದ ದಿನಾಂಕ	: 17.03.2021

ಪ್ರಶ್ನೆ	ಉತ್ತರ
ಅ) ತೋಟಗಾರಿಕೆ ಇಲಾಖೆ ಮುಖಾಂತರ ರೈತರಿಗೆ ಯಂತ್ರ ಖರೀದಿಗೆ ಸಹಾಯಧನ (ರಿಯಾಯಿತಿ) ನೀಡುವ ಯೋಜನೆ ಜಾರಿಯಲ್ಲಿದೆಯೇ;	ಜಾರಿಯಲ್ಲಿದೆ
ಆ) ಹಾಗಿದ್ದಲ್ಲಿ, ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನಲ್ಲಿ ರೈತರಿಗೆ ಈ ಯೋಜನೆಯಡಿ ಸಹಾಯಧನ (ರಿಯಾಯಿತಿ) ನೀಡಲು ಅನುದಾನ ಲಭ್ಯವಿದೆಯೇ;	ಕಿತ್ತೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲಕ್ಕೆ ರೂ.3.57 ಲಕ್ಷಗಳು ಮತ್ತು ಕಿತ್ತೂರು ತಾಲ್ಲೂಕಿಗೆ ರೂ.2.91 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದ್ದು, ಒಟ್ಟಾರೆ ರೂ.6.48 ಲಕ್ಷಗಳ ಅನುದಾನವನ್ನು ರೈತರಿಗೆ ವಿತರಿಸಲಾಗಿದೆ.
ಇ) ಇಲ್ಲದಿದ್ದಲ್ಲಿ, ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ರೈತರಿಗೆ ಕೃಷಿ ಯಂತ್ರ ಖರೀದಿಗೆ ಸಹಾಯಧನ (ರಿಯಾಯಿತಿ) ನೀಡುವ ಯೋಜನೆಗೆ ಅನುದಾನ ನೀಡಲು ಸರ್ಕಾರದ ಕ್ರಮವೇನು;	ಅನ್ವಯಿಸುವುದಿಲ್ಲ.
ಈ) ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು?	ಅನ್ವಯಿಸುವುದಿಲ್ಲ.

ಸಂಖ್ಯೆ: HORTI 148 HGM 2021

(ಆರ್.ಶಂಕರ್)

ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2524
ಸದಸ್ಯರ ಹೆಸರು	:	ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.
ಉತ್ತರಿಸುವ ದಿನಾಂಕ	:	17.03.2021

ಕ್ರ. ಸಂ	ಪ್ರಶ್ನೆ	ಉತ್ತರ
ಅ)	2016ನೇ ಸಾಲಿನಲ್ಲಿ 0-6 ವರ್ಷದ ಮಕ್ಕಳಿಗೆ ಆಧಾರಕಾರ್ಡ್ ಮಾಡಿಕೊಡಲು ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೇಲ್ವಿಚಾರಕಿಯರು ಕರ್ತವ್ಯ ನಿರ್ವಹಿಸಿದ್ದಾರೆಯೇ;	0-5 ವರ್ಷದ ಮಕ್ಕಳಿಗೆ ಆಧಾರ್ ಕಾರ್ಡ್ ಮಾಡುವ ನಿಟ್ಟಿನಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಇ-ಆಡಳಿತ) ಯಿಂದ 2000 ಟ್ಯಾಬ್ಲೆಟ್ ಗಳನ್ನು ಖರೀದಿಸಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿಯರಿಗೆ ವಿತರಿಸಲಾಗಿತ್ತು. ಒಟ್ಟು 1657 ಮೇಲ್ವಿಚಾರಕಿಯರು ಈ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಿರುತ್ತಾರೆ.
ಆ)	ಹಾಗಿದ್ದಲ್ಲಿ, ಇವರಿಗೆ ಈ ಯೋಜನೆಯನ್ನು ಯಾವ ಆಧಾರದ ಮೇಲೆ ವಹಿಸಿಕೊಡಲಾಗಿತ್ತು;	ಭಾರತ ವಿಶಿಷ್ಟ ಗುರುತು ಪ್ರಾಧಿಕಾರ, ಭಾರತ ಸರ್ಕಾರ ರವರ ಪತ್ರ ಸಂಖ್ಯೆ:ಆರ್-12012/362/2014-ಆರ್‌ಓಬಿ/2014-15/1674, ದಿನಾಂಕ:05.11.2011 ರನ್ವಯ ಆಧಾರ್ ಕಾರ್ಡ್ ಮಾಡಿಕೊಡುವ ಕಾರ್ಯವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ವಹಿಸಿಕೊಡಲಾಗಿತ್ತು.
ಇ)	ಕರ್ತವ್ಯ ನಿರ್ವಹಿಸಿದ ಮೇಲ್ವಿಚಾರಕಿಯರಿಗೆ ಗೌರವಧನ ಪಾವತಿಸಲಾಗಿದೆಯೇ;	ಇ-ಆಡಳಿತ ಇಲಾಖೆಯಿಂದ ಕರ್ತವ್ಯ ನಿರ್ವಹಿಸಿದ 299 ಮೇಲ್ವಿಚಾರಕಿಯರಿಗೆ ಒಟ್ಟು ರೂ.19,25,744/- ಗಳನ್ನು ಪಾವತಿಸಲಾಗಿದೆ. ಉಳಿದ 884 ಮೇಲ್ವಿಚಾರಕಿಯರಿಗೆ ರೂ.59,25,744/- ಗಳ ಪ್ರೋತ್ಸಾಹಧನವನ್ನು ಪಾವತಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಉಳಿದಂತೆ 474 ಮೇಲ್ವಿಚಾರಕಿಯರಿಗೆ ಪ್ರೋತ್ಸಾಹಧನ ನೀಡುವುದು ಬಾಕಿ ಇರುತ್ತದೆ.
ಈ)	ಇಲ್ಲದಿದ್ದಲ್ಲಿ, ಗೌರವಧನ ಪಾವತಿಸಲು ಸರ್ಕಾರದ ಕ್ರಮವೇನು? (ವಿವರ ನೀಡುವುದು).	ನೇರ ನಗದು ವರ್ಗಾವಣೆ (ಡಿಬಿಟಿ)ಯ ಮುಖಾಂತರ ಪ್ರೋತ್ಸಾಹಧನ ಪಾವತಿಸಲು ಇ-ಆಡಳಿತ ಇಲಾಖೆಯಿಂದ ಕ್ರಮವಹಿಸಲಾಗುತ್ತಿದೆ.

ಸಂ. ಮಮಇ 97 ಎಸ್‌ಜಿಡಿ 2021

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು	:	ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2525
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	17.03.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಳೆದ ಎರಡು ವರ್ಷಗಳ ಅವಧಿಯಲ್ಲಿ "ಜವಳಿ ಪಾರ್ಕ್" ಗಳನ್ನು ನಿರ್ಮಿಸಲಾಗಿದೆಯೇ;	ನಿರ್ಮಿಸಿರುವುದಿಲ್ಲ
ಆ)	ಹಾಗಿದ್ದಲ್ಲಿ, ಯಾವ ಯಾವ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಯಾವ ಯಾವ ಸ್ಥಳಗಳಲ್ಲಿ ನಿರ್ಮಿಸಲಾಗಿದೆ; (ವಿವರ ನೀಡುವುದು)	ಅನ್ವಯಿಸುವುದಿಲ್ಲ
ಇ)	ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕಿನಲ್ಲಿ "ಜವಳಿ ಪಾರ್ಕ್" ನಿರ್ಮಾಣಕ್ಕೆ ಬಹಳ ದಿನಗಳಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಈ)	ಹಾಗಿದ್ದಲ್ಲಿ, 2021–22ನೇ ಸಾಲಿನಲ್ಲಿ ಕಿತ್ತೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ "ಜವಳಿ ಪಾರ್ಕ್" ನಿರ್ಮಾಣಕ್ಕೆ ಸರ್ಕಾರದ ಕ್ರಮವೇನು?	ಕಿತ್ತೂರಿನಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಅಭಿವೃದ್ಧಿಪಡಿಸಿರುವ ಪ್ರದೇಶದಲ್ಲಿ 110 ಜವಳಿ ಉದ್ದಿಮೆದಾರರಿಗೆ ಒಟ್ಟು 78 ಎಕರೆ ಜಮೀನನ್ನು ಕಾಯ್ದಿರಿಸಲು ಕೆ.ಐ.ಎ.ಡಿ.ಬಿ ಇವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕೆ.ಐ.ಎ.ಡಿ.ಬಿ ರವರು ಈಗಾಗಲೇ 09 ಉದ್ದಿಮೆದಾರರಿಗೆ 3.90 ಎಕರೆ ಕೈಗಾರಿಕಾ ನಿವೇಶನ ಹಂಚಿಕೆ ಮಾಡಿರುತ್ತಾರೆ. ಆದಾಗ್ಯೂ, ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019–24ರಡಿ ಕನಿಷ್ಠ 15 ಎಕರೆ ಜಾಗವನ್ನು ಹೊಂದಿರುವ ಪ್ರತ್ಯೇಕ ಉದ್ಯಮಿ ಅಥವಾ ಎಸ್.ಪಿ.ವಿ ರವರು ಜವಳಿ ಪಾರ್ಕ್ ಸ್ಥಾಪನೆಗೆ ಮುಂದೆ ಬಂದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ಪಾರ್ಕ್ ನ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗಾಗಿ ಪ್ರತ್ಯೇಕ ಉದ್ಯಮಿಗೆ ಯೋಜನಾ ಮೊತ್ತದ ಶೇ.25.ರಷ್ಟು ಅಥವಾ ಗರಿಷ್ಠ ರೂ.25.00 ಕೋಟಿ ಹಾಗೂ ಎಸ್.ಪಿ.ವಿ ರವರಿಗೆ ಯೋಜನಾ ಮೊತ್ತದ ಶೇ.40 ರಷ್ಟು ಅಥವಾ ಗರಿಷ್ಠ ರೂ.40.00 ಕೋಟಿ ಸಹಾಯಧನ ಒದಗಿಸಲಾಗುತ್ತದೆ.

ಸಂ: CI 68 JAKE 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2531

ಸದಸ್ಯರ ಹೆಸರು : ಶ್ರೀ ರಾಮಪ್ಪ.ಎಸ್ (ಹರಿಹರ)

ಉತ್ತರಿಸುವ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಹರಿಹರ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಕೃಷಿ ಸಸಿಗಳ ಕ್ಷೇತ್ರಗಳಿರುತ್ತವೆ;	ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಯೋಜನೆಯಡಿ ಆಯ್ಕೆಯಾದ ಯೋಜನಾ ಪ್ರದೇಶದಲ್ಲಿ ಕೃಷಿ ಸಸಿಗಳ ನರ್ಸರಿಗಳನ್ನು ಬೆಳೆಸಲಾಗುತ್ತಿದೆ. ಆದರೆ ಹರಿಹರ ಮತ ಕ್ಷೇತ್ರವು ಈ ಯೋಜನಾ ವ್ಯಾಪ್ತಿಗೆ ಒಳಪಡದ ಕಾರಣ ಈ ಕ್ಷೇತ್ರದಲ್ಲಿ ಯಾವುದೇ ಕೃಷಿ ಸಸಿಗಳ ಕ್ಷೇತ್ರ ಇರುವುದಿಲ್ಲ.
ಆ.	ಕೃಷಿ ಸಸಿಗಳ ಕ್ಷೇತ್ರ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮವೇನು;	ಉದ್ಭವಿಸುವುದಿಲ್ಲ.
ಇ.	ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಇಲ್ಲವಾದಲ್ಲಿ ಕಾರಣಗಳೇನು?	ಉದ್ಭವಿಸುವುದಿಲ್ಲ.

ಸಂಖ್ಯೆ: AGRI-AML/78/2021

(ಬಿ.ಸಿ.ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 2533
ಉತ್ತರಿಸಬೇಕಾದ ದಿನಾಂಕ – 17-03-2021
ಸದಸ್ಯರ ಹೆಸರು – ಶ್ರೀ ತಮ್ಮಣ್ಣ ಡಿ.ಸಿ. (ಮದ್ದೂರು)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	2018-19ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ನಿಡಘಟ್ಟ ಗ್ರಾಮದಲ್ಲಿ ಅಲ್ಪಸಂಖ್ಯಾತರ ಕಾಲೋನಿಯಲ್ಲಿ ಮೂಲ ಸೌಕರ್ಯ ಒದಗಿಸಲು ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ರೂ.25.00 ಲಕ್ಷ ಮಂಜೂರು ಮಾಡಿ, ಪಿ.ಆರ್.ಇ.ಡಿ ಮೂಲಕ ಕಾಮಗಾರಿಯನ್ನು ಟೆಂಡರ್ ಕರೆದು ನಿರ್ವಹಿಸುರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ)	ಹಾಗಿದಲ್ಲಿ, ಲೋಕಸಭಾ ಚುನಾವಣೆ ನೀತಿ ಸಂಹಿತೆ ಹಿನ್ನಲೆಯಲ್ಲಿ ವ್ಯಪಗತವಾಗಿರುವ ರೂ.19.67 ಲಕ್ಷ ಅನುದಾನವನ್ನು ಪೂರ್ಣಗೊಂಡ ಕಾಮಗಾರಿಗೆ ಬಿಡುಗಡೆ ಮಾಡಲು ಸರ್ಕಾರಕ್ಕೆ ಬೇಡಿಕೆ ಬಂದಿದೆಯೇ;	ಸರ್ಕಾರಕ್ಕೆ ಬೇಡಿಕೆ ಬಂದಿರುತ್ತದೆ.
ಇ)	ಬಂದಿದಲ್ಲಿ, ಪಿ.ಆರ್.ಇ.ಡಿ ಇಲಾಖೆಯಿಂದ ನಿಯಮಾನುಸಾರ ಟೆಂಡರ್ ಕರೆದು ಕಾಮಗಾರಿ ಪೂರ್ಣಗೊಳಿಸಿದ್ದರೂ ಸಹ ಚುನಾವಣಾ ನೀತಿ ಸಂಹಿತೆ ಹಿನ್ನೆಲೆಯಲ್ಲಿ ವ್ಯಪಗತವಾಗಿರುವ ರೂ.19.67 ಲಕ್ಷಗಳ ಅನುದಾನವನ್ನು ಮರು ಬಿಡುಗಡೆ ಮಾಡಲು ಸರ್ಕಾರವು ವಿಳಂಬ ಮಾಡುತ್ತಿರುವುದಕ್ಕೆ ಕಾರಣವೇನು;	ಸರ್ಕಾರಿ ಆದೇಶ ಸಂಖ್ಯೆ: ಎಂ.ಡಬ್ಲೂಡಿ/10/ಎಂಡಿಎಸ್/2021 ದಿ.22.02.2021ರಂದು ಒಂದೇ ಬಾರಿ ಬಗೆಹರಿಸುವ ಸಲುವಾಗಿ (One time Settlement) ಉಳಿಕೆ ಕಾಮಗಾರಿ ಪೂರ್ಣಗೊಳಿಸಲು ರೂ.102.00 ಕೋಟಿಗಳ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. ಈ ಅನುದಾನದಲ್ಲಿ ಉಳಿಕೆಯಾದರೆ ಹಣ ಬಿಡುಗಡೆಗೆ ಮಾಡಲು ಕ್ರಮ ವಹಿಸಲಾಗುತ್ತದೆ.
ಈ)	ತಕ್ಷಣವೇ ಸದರಿ ರೂ.19.67 ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	

MWD 109 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2534
ಸದಸ್ಯರ ಹೆಸರು : ಶ್ರೀ ರವೀಂದ್ರ ಶ್ರೀಕಂಠಯ್ಯ
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಶ್ರೀರಂಗಪಟ್ಟಣ ತಾಲ್ಲೂಕಿನ ವಿವಿಧ ಗ್ರಾಮಗಳ ಶಾಲಾ-ಕಾಲೇಜು ಮಕ್ಕಳಿಗೆ ಬಸ್ ಸೌಲಭ್ಯ ದೊರೆಯದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಶ್ರೀರಂಗಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 91 ಗ್ರಾಮಗಳಿದ್ದು, ಈ ಎಲ್ಲಾ ಗ್ರಾಮಗಳಿಗೂ ಕ.ರಾ.ರ.ಸಾ.ನಿಗಮದಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದ್ದು, ಸದರಿ ಸೌಲಭ್ಯವನ್ನು ಎಲ್ಲಾ ಗ್ರಾಮಗಳಲ್ಲಿನ ವಿದ್ಯಾರ್ಥಿಗಳು ಪಡೆಯುತ್ತಿದ್ದಾರೆ. ಅಲ್ಲದೆ, ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಖಾಸಗಿ ಸಾರಿಗೆಗಳ ಪ್ರವರ್ತಕರು ಸಹ ತಮ್ಮ ಸಾರಿಗೆಗಳನ್ನು ಕಾರ್ಯಾಚರಿಸುತ್ತಿದ್ದಾರೆ.
ಆ)	ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಜಿಲ್ಲಾ ಕೇಂದ್ರ ಹಾಗೂ ತಾಲ್ಲೂಕಿನ ಕೇಂದ್ರದ ಶಾಲೆಗಳಿಗೆ ಹೋಗಿ ಬರಲು ಸರ್ಕಾರ ಬಸ್ ಸೌಲಭ್ಯ ಒದಗಿಸುವುದೇ;	ಪ್ರಸ್ತುತ ನಿಗಮದ ವತಿಯಿಂದ ಕಲ್ಪಿಸಿರುವ ಸಾರಿಗೆ ಸೌಲಭ್ಯ ಅವಶ್ಯಕತೆಗೆ ಅನುಗುಣವಾಗಿದೆ. ಕೋವಿಡ್-19ರ ಹಿನ್ನೆಲೆಯಲ್ಲಿ ವಿಧಿಸಲಾಗಿದ್ದ ಲಾಕ್‌ಡೌನ್‌ನಿಂದಾಗಿ ಸಾರಿಗೆಗಳ ಕಾರ್ಯಾಚರಣೆ ಸ್ಥಗಿತಗೊಳಿಸಲಾಗಿತ್ತು. ಲಾಕ್‌ಡೌನ್ ತೆರವುಗೊಳಿಸಿದ ನಂತರ ಕಡಿಮೆ ಸಂಖ್ಯೆಯಲ್ಲಿ ಪ್ರಯಾಣಿಕರಿದ್ದು, ಪ್ರಸ್ತುತ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ, ಪ್ರಯಾಣಿಕರ ಲಭ್ಯತೆ/ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.
ಇ)	ಎಲ್ಲಾ ಹಳ್ಳಿಗಳಲ್ಲಿ ಶಾಲಾ ಮಕ್ಕಳು ಗಂಟೆಗಟ್ಟಲೇ ಬಸ್‌ಗಾಗಿ ಕಾಯುವುದನ್ನು ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	ಶ್ರೀರಂಗಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ನಿಗಮದ ವತಿಯಿಂದ 165 ಸುತ್ತುವಳಿಗಳಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಸದರಿ ಸಾರಿಗೆಗಳು ಅವಶ್ಯಕತೆಗೆ ಅನುಗುಣವಾಗಿದ್ದು, ವಿದ್ಯಾರ್ಥಿಗಳು ಇದರ ಅನುಕೂಲತೆಯನ್ನು ಪಡೆದುಕೊಳ್ಳುತ್ತಿರುತ್ತಾರೆ.

ಸಂಖ್ಯೆ: ಟಿಡಿ 102 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 2536
ಉತ್ತರಿಸಬೇಕಾದ ದಿನಾಂಕ – 17-03-2021
ಸದಸ್ಯರ ಹೆಸರು – ಶ್ರೀ ಪ್ರಿಯಾಂಕ್ ಎಂ. ಖರ್ಗೆ (ಚಿತ್ತಾಪುರ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಒಟ್ಟು 30 ಜಿಲ್ಲಾ ಅಧಿಕಾರಿಗಳ ಹುದ್ದೆಗಳನ್ನು ಸೃಜಿಸಲಾಗಿದ್ದು, ಕೆಪಿಎಸ್‌ಸಿ ಮುಖಾಂತರ ಮತ್ತು ವಿಲೀನದಿಂದ ಪ್ರಸ್ತುತ ಒಟ್ಟು ಎಷ್ಟು ಜಿಲ್ಲಾ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಇರುವ ಒಟ್ಟು 30 ಜಿಲ್ಲಾ ಅಧಿಕಾರಿಗಳ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ವಿವರಗಳನ್ನು ಈ ಕೆಳಗಿನಂತಿವೆ. (see table below)
ಆ)	ಹೊಸದಾಗಿ ಜಿಲ್ಲಾ ಅಧಿಕಾರಿ ಹುದ್ದೆಗೆ ಆಯ್ಕೆಗೊಂಡ ಎಷ್ಟು ಜನ ಅಭ್ಯರ್ಥಿಗಳು ನೇಮಕಾತಿ ಆದೇಶಕ್ಕೆ ಕಾಯುತ್ತಿದ್ದಾರರೆ;	ಹೊಸದಾಗಿ ಜಿಲ್ಲಾ ಅಧಿಕಾರಿ ಹುದ್ದೆಗೆ ಆಯ್ಕೆಗೊಂಡ ನೇಮಕಾತಿ ಆದೇಶ ನಿರೀಕ್ಷಣೆಯಲ್ಲಿರುವ ಅಭ್ಯರ್ಥಿಗಳ ಸಂಖ್ಯೆ-10.
ಇ)	ನೇಮಕಾತಿ ಆದೇಶ ಯಾವಾಗ ನೀಡಲಾಗುವುದು;	ಆರ್ಥಿಕ ಇಲಾಖೆಯು ಸಹಮತಿ ನೀಡಿದ ಕೂಡಲೇ ನೇಮಕಾತಿ ಆದೇಶವನ್ನು ನೀಡಲಾಗುತ್ತದೆ.
ಈ)	ಬೋಧಕ ವೃಂದದಿಂದ, ಆಡಳಿತಾತ್ಮಕ ಹುದ್ದೆಯಾದ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿ ಹುದ್ದೆಗೆ ವಿಲೀನ ಮಾಡಲಾಗಿದೆಯೇ;	ಹೌದು.
ಉ)	ಮಾಡಿದ್ದಲ್ಲಿ ವಿಲೀನ ಮಾಡಲು ಕಾನೂನಿನಲ್ಲಿ ಅವಕಾಶ ಇದೆಯೇ?	ಇದೆ.

ಕ್ರ.ಸಂ.	ವಿಷಯ	ಹುದ್ದೆಗಳ ಸಂಖ್ಯೆ
1.	ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲಾದ ಹುದ್ದೆಗಳು	15
2.	ಇತರೆ ಇಲಾಖೆಯಿಂದ ಜಿಲ್ಲಾ ಅಧಿಕಾರಿ ಹುದ್ದೆಗೆ ವಿಲೀನಗೊಂಡ ಹುದ್ದೆಗಳು	07
ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಅಧಿಕಾರಿಗಳ ಒಟ್ಟು ಸಂಖ್ಯೆ.		22

MWD 110 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಅನು:

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2542

ಸದಸ್ಯರ ಹೆಸರು : ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ)

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ. ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ; ಅವುಗಳಲ್ಲಿ ಎಷ್ಟು ಸ್ವಂತ ಕಟ್ಟಡ ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ;	ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 457 ಅಂಗನವಾಡಿ ಕೇಂದ್ರಗಳಿದ್ದು, ಈ ಪೈಕಿ 384 ಸ್ವಂತ ಕಟ್ಟಡ ಹೊಂದಿದ್ದು, 24 ಬಾಡಿಗೆ ಕಟ್ಟಡದಲ್ಲಿ ಮತ್ತು ಉಳಿದ 49 ಅಂಗನವಾಡಿ ಕೇಂದ್ರಗಳು ಇತರೆ ವ್ಯವಸ್ಥೆಯಡಿ ಕಾರ್ಯ ನಿರ್ವಹಿಸುತ್ತಿವೆ.
ಆ.	ಸದರಿ ವಿಧಾನಸಭಾ ಕ್ಷೇತ್ರಕ್ಕೆ ಹೊಸ ಅಂಗನವಾಡಿ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ 2020-21ನೇ ಸಾಲಿನಲ್ಲಿ ಈ ಕೆಳಗಿನಂತೆ ಅನುದಾನ ಬಿಡುಗಡೆಯಾಗಿರುತ್ತದೆ. ಕ್ರ.ಸಂ | ಯೋಜನೆ | ಬಿಡುಗಡೆಯಾದ ಅನುದಾನ (ಲಕ್ಷಗಳಲ್ಲಿ) | ಕಟ್ಟಡಗಳ ಸಂಖ್ಯೆ 1. | ನರೇಗಾ ಒಗ್ಗೂಡಿಸುವಿಕೆ | 5.00 | 1.00 2. | *ಆರ್.ಐ.ಡಿ.ಎಫ್.-25 | - | 4 | ಒಟ್ಟು | | 2019-20ನೇ ಸಾಲಿನಲ್ಲಿ ಮಳೆಹಾನಿಯಿಂದ ಶಿಥಿಲಗೊಂಡ ಒಟ್ಟು 842 ಅಂಗನವಾಡಿ ಕೇಂದ್ರಗಳನ್ನು ಮರುನಿರ್ಮಾಣ ಮಾಡಲು ಸರ್ಕಾರದ ಆದೇಶ ದಿನಾಂಕ 11.03.2020ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಸಂಬಂಧ 2020-21ನೇ ಸಾಲಿನಲ್ಲಿ ರೂ.5000.00ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.
ಇ.	ಹಾಗಿದ್ದಲ್ಲಿ, ಹೊಸ ಕಟ್ಟಡ ನಿರ್ಮಾಣಕ್ಕೆ ಯಾವಾಗ ಅಮದಾನ ಬಿಡುಗಡೆ ಮಾಡಲಾಗುವುದು? (ವಿವರ ನೀಡುವುದು)	ಆರ್.ಐ.ಡಿ.ಎಫ್-25ರ ಯೋಜನೆಯಡಿ ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 4 ಅಂಗವಾಡಿ ಕೇಂದ್ರಗಳಿಗೆ ಕಟ್ಟಡ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಒಟ್ಟು ರೂ 64.00 ಲಕ್ಷ ಅನುದಾನ 2021-22 ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗುವುದು.

ಸಂಖ್ಯೆ: ಮಮಇ 94 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

(4)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2545

ಸದಸ್ಯರ ಹೆಸರು : ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ)

ಉತ್ತರಿಸುವ ದಿನಾಂಕ : 17.03.2021.

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ರೈತರುಗಳು ಬೆಳೆಗಳನ್ನು ಕಾಪಾಡಿಕೊಳ್ಳಲು ಟಾರ್ಪಾಲುಗಳನ್ನು ರಿಯಾಯಿತಿ ದರದಲ್ಲಿ/ಉಚಿತವಾಗಿ ಮಂಜೂರು ಮಾಡುವಂತೆ ಕೃಷಿ ಇಲಾಖೆಗೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ)	ಬಂದಿದ್ದಲ್ಲಿ, ಯಾವಾಗ ಎಷ್ಟು ಟಾರ್ಪಾಲುಗಳನ್ನು ರೈತರುಗಳಿಗೆ ಮಂಜೂರು ಮಾಡಲಾಗುವುದು? (ವಿವರ ನೀಡುವುದ)	ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನಲ್ಲಿ 2727 ಸಂಖ್ಯೆಗಳ ಟಾರ್ಪಲೀನ್‌ಗಳ ವಿತರಣೆಗೆ ಕ್ರಿಯಾ ಯೋಜನೆ ಅನುಮೋದಿಸಲಾಗಿತ್ತು. ರೈತರಿಂದ ಹೆಚ್ಚು ಬೇಡಿಕೆ ಇರುವ ಕಾರಣದಿಂದಾಗಿ ಪ್ರಸ್ತುತ ಹೆಚ್ಚುವರಿಯಾಗಿ 5200 ಸಂಖ್ಯೆ ಟಾರ್ಪಲೀನ್‌ಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿರುತ್ತದೆ. ಇಲ್ಲಿಯವರೆಗೆ 2979 ಸಂಖ್ಯೆ ರೈತರಿಂದ ಅರ್ಜಿ ಸ್ವೀಕೃತವಾಗಿರುತ್ತದೆ. ಇದರಲ್ಲಿ, 2727 ಸಂಖ್ಯೆಗಳ ಟಾರ್ಪಲೀನ್ ಗಳನ್ನು ರೈತರಿಗೆ ವಿತರಿಸಲಾಗಿದ್ದು, ಉಳಿದ 5452 ಸಂಖ್ಯೆ ಟಾರ್ಪಲೀನ್‌ಗಳ ವಿತರಣೆ ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: AGRI-ASC/21/2021

(ಬಿ.ಸಿ.ಪಾಟೀಲ್)

ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2546
ಸದಸ್ಯರ ಹೆಸರು : ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ)
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಡಾ.ನಂಜುಂಡಪ್ಪ ಆಯೋಗದ ವರದಿ ಪ್ರಕಾರ ಕಲಘಟಗಿ ತಾಲ್ಲೂಕು ಅತೀ ಹಿಂದುಳಿದ ತಾಲ್ಲೂಕಾಗಿದ್ದು, ಈ ತಾಲ್ಲೂಕಿನಲ್ಲಿ ಇದುವರೆಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಪ್ರಸ್ತುತ ಕಲಘಟಗಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯು ಇಲಾಖೆಯ ಸ್ತ್ರೀಶಕ್ತಿ ಭವನದಲ್ಲಿ ನಡೆಯುತ್ತಿದೆ.
ಆ.	ಈ ತಾಲ್ಲೂಕಿನಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ;	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಯಾವುದೇ ಯೋಜನೆ ಮತ್ತು ಲೆಕ್ಕಶೀರ್ಷಿಕೆ ಇರುವುದಿಲ್ಲ.
ಇ.	ಯಾವ ಕಾಲಮಿತಿಯೊಳಗೆ ಈ ಕಟ್ಟಡವನ್ನು ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು?	ಉದ್ಭವಿಸುವುದಿಲ್ಲ

ಸಂಖ್ಯೆ: ಮಮಇ 116 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2550

ಸದಸ್ಯರ ಹೆಸರು : ಶ್ರೀಮತಿ ಸೌಮ್ಯ ರೆಡ್ಡಿ

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ನೌಕರರಿಗೆ ಪ್ರತಿ ತಿಂಗಳು ಸರಿಯಾಗಿ ವೇತನ ಪಾವತಿಸಲು ಹಾಗೂ ಮಹಿಳಾ ನೌಕರರಿಗೆ ಬಡ್ತಿಯನ್ನು ನೀಡುವಲ್ಲಿ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ?	ಕೋವಿಡ್-19ರ ಸಂದರ್ಭದಲ್ಲಿ ಸಾರಿಗೆ ಸಂಸ್ಥೆಗಳು ಎದುರಿಸುತ್ತಿರುವ ಆರ್ಥಿಕ ಸಂಕಷ್ಟವನ್ನು ಪರಿಗಣಿಸಿ, ಸರ್ಕಾರವು ಸಂಸ್ಥೆಗಳ ವೇತನ ಪಾವತಿಗಾಗಿ ವಿಶೇಷ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ. ಸದರಿ ಅನುದಾನ ಹಾಗೂ ಸಂಸ್ಥೆಗಳ ಆಂತರಿಕ ಸಂಪನ್ಮೂಲದಿಂದ ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ನೌಕರರಿಗೆ ಫೆಬ್ರವರಿ-21ರವರೆಗೆ ಪ್ರತಿ ತಿಂಗಳು ಪೂರ್ಣ ಪ್ರಮಾಣದಲ್ಲಿ ವೇತನ ಪಾವತಿಸಲಾಗಿರುತ್ತದೆ. ಬಿ.ಎಂ.ಟಿ.ಸಿ ಮತ್ತು ಕೆ.ಎಸ್.ಆರ್.ಟಿ.ಸಿ ಸಂಸ್ಥೆಗಳ ಬಡ್ತಿ ನಿಯಮಾವಳಿಯಲ್ಲಿ ಮಹಿಳಾ ನೌಕರರಿಗೆ ಪ್ರತ್ಯೇಕ ನಿಯಮಾವಳಿಗಳಿರುವುದಿಲ್ಲ. ಆಯಾ ವೃಂದಗಳಿಗೆ ಬಡ್ತಿ ನೀಡುವ ಸಂದರ್ಭದಲ್ಲಿ ಜೇಷ್ಠತಾ ಪಟ್ಟಿಯನ್ವಯ ಮಹಿಳಾ ನೌಕರರ ಜೇಷ್ಠತೆ ಹಾಗೂ ಅರ್ಹತೆಯ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ.

ಸಂಖ್ಯೆ: ಟಿಡಿ 105 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2551
ಸದಸ್ಯರ ಹೆಸರು	:	ಶ್ರೀಮತಿ ಸೌಮ್ಯರೆಡ್ಡಿ (ಜಯನಗರ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	17/03/2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ ಬಾಣಂತಿಯರಿಗೆ ಪ್ರತಿ ತಿಂಗಳು ಆಹಾರ ಧಾನ್ಯಗಳ ಕಿಟ್ ಒದಗಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಮಾತೃಪೂರ್ಣ ಯೋಜನೆಯಡಿ ಪ್ರತಿ ತಿಂಗಳು ಆಹಾರ ಧಾನ್ಯಗಳನ್ನು ಅವರವರ ಮನೆ ಬಾಗಿಲಿಗೆ ವಿತರಿಸಲಾಗುತ್ತಿದೆ.
ಆ.	ಹಾಗಿದ್ದಲ್ಲಿ, ಈಗ ಅಂಗನವಾಡಿ ಕೇಂದ್ರಕ್ಕೆ ಬಂದು ಆಹಾರ ಸೇವಿಸಲು ಹೇಳುತ್ತಿರುವುದರಿಂದ ಬಾಣಂತಿಯರಿಗೆ ತೊಂದರೆ ಉಂಟಾಗುತ್ತಿರುವು ದರಿಂದ ಅವರ ಮನೆಗಳಿಗೆ ಆಹಾರ ಧಾನ್ಯ ಕಿಟ್ ವಿತರಿಸುವ ಯೋಜನೆ ಸರ್ಕಾರದ ಮುಂದಿದೆಯೇ;	ಕೋವಿಡ್-19 ಸಾಂಕ್ರಾಮಿಕದಿಂದ ಮಾತೃಪೂರ್ಣ ಯೋಜನೆಯಡಿ ಪ್ರಸ್ತುತ ಅಂಗನವಾಡಿ ಕೇಂದ್ರಗಳಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಆಹಾರವನ್ನು ತಯಾರಿಸಿ ನೀಡುತ್ತಿರುವುದಿಲ್ಲ. ಬದಲಾಗಿ, ಗರ್ಭಿಣಿ ಮತ್ತು ಬಾಣಂತಿಯರಿಗೆ ಆಹಾರ ಧಾನ್ಯಗಳನ್ನು ಅವರವರ ಮನೆ ಬಾಗಿಲಿಗೆ ವಿತರಿಸಲಾಗುತ್ತಿದೆ.
ಇ.	ಅಂಗನವಾಡಿ ಕೇಂದ್ರಗಳಲ್ಲಿ ಬಾಣಂತಿಯರಿಗೆ ವಿತರಿಸುವ ಸಲುವಾಗಿ ಆಹಾರ ಒದಗಿಸುವ ಕಿಟ್‌ಗಳು ಫಲಾನುಭವಿಗಳಿಗೆ ಸರಿಯಾಗಿ ತಲುಪುತ್ತಿವೆಯೇ ? (ವಿವರ ನೀಡುವುದು.)	ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಬಾಣಂತಿಯರಿಗೆ ನಿಯಮಿತವಾಗಿ ಪ್ರತೀ ಮಾಹೆ ಅವರ ಮನೆ ಬಾಗಿಲಿಗೆ ಆಹಾರ ಧಾನ್ಯಗಳನ್ನು ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರು ವಿತರಿಸುತ್ತಿದ್ದಾರೆ. ಅಂಗನವಾಡಿ ಕೇಂದ್ರಗಳಿಗೆ ಪೂರೈಸುವ ಆಹಾರ ಪದಾರ್ಥಗಳನ್ನು ಬಾಲವಿಕಾಸ ಸಮಿತಿಯು ಪರಿಶೀಲಿಸುತ್ತಿದ್ದು, ಇದನ್ನು ಅಂಗನವಾಡಿ ಕೇಂದ್ರಗಳಿಗೆ ಉಪ ನಿರ್ದೇಶಕರು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮೇಲ್ವಿಚಾರಕಿಯರು ಭೇಟಿ ನೀಡಿ ಖಚಿತಪಡಿಸಿಕೊಳ್ಳುತ್ತಿದ್ದಾರೆ.

ಸಂಖ್ಯೆ: ಮಮಇ 115 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2553
ಸದಸ್ಯರ ಹೆಸರು : ಶ್ರೀಮತಿ ಸೌಮ್ಯರೆಡ್ಡಿ (ಜಯನಗರ)
ಉತ್ತರಿಸುವ ದಿನಾಂಕ : 17.03.2021
ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಜಯನಗರ ಕ್ಷೇತ್ರದ ರಾಗಿಗುಡ್ಡ ಪ್ರದೇಶವು 1500 ಮನೆಗಳು ಹಾಗೂ 6800 ಕ್ಕೂ ಅಧಿಕ ಜನಸಂಖ್ಯೆಯನ್ನು ಹೊಂದಿದ್ದು, ಇಲ್ಲಿ ಕೇವಲ ಎರಡು ಅಂಗನವಾಡಿ ಕೇಂದ್ರಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಜಯನಗರ ಕ್ಷೇತ್ರದ ರಾಗಿಗುಡ್ಡ ಪ್ರದೇಶದಲ್ಲಿ 2 ಅಂಗನವಾಡಿ ಕೇಂದ್ರಗಳಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. 3000 ರಿಂದ 3500 ಜನಸಂಖ್ಯೆಯ ವ್ಯಾಪ್ತಿಯಲ್ಲಿ ಈ ಎರಡು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಇದಲ್ಲದೆ ಈ ಕ್ಷೇತ್ರದಲ್ಲಿ ಸ್ವಯಂಸೇವಾ ಸಂಸ್ಥೆಯ ವತಿಯಿಂದ ಒಂದು ಶಿಶು ವಿಹಾರವನ್ನು ನಡೆಸಲಾಗುತ್ತಿದೆ.
ಆ)	ಹಾಗಿದ್ದಲ್ಲಿ, ಈ ಪ್ರದೇಶದಲ್ಲಿ 4 ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	ಸದರಿ ಪ್ರದೇಶದಲ್ಲಿ ಸರ್ವೆಯನ್ನು ಕೈಗೊಂಡಿದ್ದು, ಒಂದು ಹೆಚ್ಚುವರಿ ಅಂಗನವಾಡಿ ಕೇಂದ್ರದ ಅಗತ್ಯತೆ ಕಂಡು ಬಂದಿರುತ್ತದೆ. ಹೆಚ್ಚುವರಿ ಒಂದು ಅಂಗನವಾಡಿ ಕೇಂದ್ರವನ್ನು ಮಂಜೂರು ಮಾಡಲು ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಮಂಜೂರಾತಿ ದೊರೆತ ನಂತರ ಕ್ರಮ ಕೈಗೊಳ್ಳಲಾಗುವುದು.

ಸಂ: ಮಮಇ 114 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	– 2554
ಉತ್ತರಿಸಬೇಕಾದ ದಿನಾಂಕ	– 17-03-2021
ಸದಸ್ಯರ ಹೆಸರು	– ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ)
ಉತ್ತರಿಸುವ ಸಚಿವರು	– ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಳೆದ 03 ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಎಷ್ಟು ಶಾಲೆಗಳನ್ನು ಪ್ರಾರಂಭಿಸಲಾಗಿದೆ; ಹಾಗೂ ಎಷ್ಟು ಅನುದಾನವನ್ನು ಒದಗಿಸಲಾಗಿದೆ;(ಪೂರ್ಣ ವಿವರ ನೀಡುವುದು)	ಕಳೆದ 03 ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಪ್ರಾರಂಭಿಸಲಾದ ವಸತಿ ಶಾಲೆ/ಮೌಲಾನ ಆಜಾದ್ ಮಾದರಿ ಶಾಲೆಗಳು ಮತ್ತು ಅನುದಾನದ ವಿವರಗಳು ಈ ಕೆಳಕಂಡಂತಿವೆ.

ವಿವರ	2017-18	201[illegible]	2019-20
ಮೌಲಾನಾ ಆಜಾದ್ ಮಾದರಿ ಶಾಲೆಗಳು.	100	100	0
ಅಲ್ಪಸಂಖ್ಯಾತರ ವಸತಿ ಶಾಲೆಗಳು.	27	0	5
ಒಟ್ಟು ಶಾಲೆಗಳು	**127**	**100**	**5**
ಒದಗಿಸಿದ ಒಟ್ಟು ಅನುದಾನ(ಕೋಟಿಗಳಲ್ಲಿ)	177.57	199.64	294.08

ಕ್ರ.ಸಂ	ಪ್ರಶ್ನೆ	ಉತ್ತರ
ಆ)	ಸರ್ಕಾರಿ ಮೌಲಾನಾ ಆದರ್ಶ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ? (ಪೂರ್ಣ ವಿವರ ನೀಡುವುದು)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಅಗತ್ಯ ಮೂಲಸೌಲಭ್ಯಗಳಾದ ಶುದ್ಧ ಕುಡಿಯುವ ನೀರು, ವಿದ್ಯಾರ್ಥಿಗಳಿಗೆ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಅಗತ್ಯ ಲೇಖನಾ ಸಾಮಗ್ರಿಗಳು, ನೋಟ್‌ಪುಸ್ತಕಗಳು, ಸ್ಕೂಲ್ ಬ್ಯಾಗ್, ಸಮವಸ್ತ್ರಗಳು, ಶೂ, ಸಾಕ್ಸ್, ಟೈ, ಬೆಲ್ಟ್ ಹಾಗೂ ಮಧ್ಯಾಹ್ನದ ಬಿಸಿಯೂಟ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ.

MWD 111 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2556

ಸದಸ್ಯರ ಹೆಸರು : ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ)

ಉತ್ತರಿಸುವ ದಿನಾಂಕ : 17.03.2021.

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೃಷಿ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕೃಷಿ ಯಂತ್ರೋಪಕರಣ ಖರೀದಿ ಕಾರ್ಯಕ್ರಮದ ಅಡಿಯಲ್ಲಿ ಸಣ್ಣ ಟ್ರ್ಯಾಕ್ಟರ್ ಮಾದರಿ ಸಾಮರ್ಥ್ಯದ ಮಿತಿ 25-ಅಶ್ವಶಕ್ತಿಗೆ (HP) ಒದಗಿಸುವ ಸಹಾಯಧನ ರೂ.0.75 ಲಕ್ಷಗಳಿಗೆ ಇರುವುದನ್ನು 2015 ರಲ್ಲಿ 2.00 ಲಕ್ಷಗಳಿಗೆ ಹೆಚ್ಚಿಸಲಾಗಿದ್ದರೂ, ಸದರಿ ಟ್ರ್ಯಾಕ್ಟರ್‌ಗಳು ರೈತರ ಜಮೀನಿನಲ್ಲಿ ಉಳುಮೆಗಾಗಿ ಉಪಯೋಗವಾಗುತ್ತಿಲ್ಲವೆಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೃಷಿ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕೃಷಿ ಯಂತ್ರೋಪಕರಣಗಳ ಸಹಾಯಧನ ಯೋಜನೆಗಳಡಿ ಸಣ್ಣ ಟ್ರಾಕ್ಟರ್ (25 ಪಿ.ಟಿ.ಒ ಹೆಚ್.ಪಿ ವರೆಗೆ) ಗಳಿಗೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ ಒದಗಿಸಲಾಗುತ್ತಿದ್ದ ಸಹಾಯಧನವನ್ನು 2015 ರಲ್ಲಿ ರೂ.0.75 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಲಾಗಿರುತ್ತದೆ ಹಾಗೂ 2019ನೇ ಸಾಲಿನಲ್ಲಿ 2.00 ಲಕ್ಷಗಳಿಂದ ರೂ.3.00 ಲಕ್ಷಗಳಿಗೆ ಹೆಚ್ಚಿಸಿ ಸಹಾಯಧನ ನೀಡಲಾಗುತ್ತಿದೆ. ಸದರಿ ಟ್ರ್ಯಾಕ್ಟರ್‌ಗಳು ರೈತರ ಜಮೀನಿನಲ್ಲಿ ಉಳುಮೆಗಾಗಿ ಉಪಯೋಗವಾಗುತ್ತಿಲ್ಲವೆಂಬ ಯಾವುದೇ ದೂರುಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಆ)	ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?	ಅನ್ವಯಿಸುವುದಿಲ್ಲ.

ಸಂಖ್ಯೆ: AGRI-ASC/20/2021

(ಬಿ. ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2560
2)	ಸದಸ್ಯರ ಹೆಸರು	:	ಶ್ರೀ. ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)
3)	ಉತ್ತರಿಸಬೇಕಾದ ದಿನಾಂಕ	:	17.03.2021
4)	ಉತ್ತರಿಸುವವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯಕ್ಕೆ ಕಳೆದ 3 ವರ್ಷಗಳಿಂದ ಮಂಜೂರಾದ ರೈಲು ಮಾರ್ಗಗಳು ಯಾವುವು; (ಅಂದಾಜು ಮೊತ್ತ ಹಾಗೂ ವಿಸ್ತೀರ್ಣದೊಂದಿಗೆ ಪೂರ್ಣಮಾಹಿತಿ ನೀಡುವುದು.</td><td>ಕಳೆದ 3 ವರ್ಷಗಳಲ್ಲಿ ಈ ಕೆಳಕಂಡ ರೈಲು ಮಾರ್ಗ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ.
<table>
<tr><th>ಕ್ರ ಸಂ</th><th>ಯೋಜನೆ</th><th>ಅಂದಾಜು ಮೊತ್ತ</th><th>ವಿಸ್ತೀರ್ಣ</th></tr>
<tr><td>1.</td><td>ಶಿವಮೊಗ್ಗ –ಶಿಕಾರಿಪುರ – ರಾಣೆಬೆನ್ನೂರು ನೂತನ ರೈಲು ಮಾರ್ಗಯೋಜನೆ.</td><td>956.00</td><td>102ಕಿ.ಮಿ</td></tr>
<tr><td>2.</td><td>ಧಾರವಾಡ –ಬೆಳಗಾವಿ ನೂತನ ರೈಲು ಮಾರ್ಗಯೋಜನೆ.</td><td>988.30</td><td>73 ಕಿ.ಮಿ</td></tr>
</table></td></tr>
<tr><td>ಆ</td><td>ಸದರಿ ರೈಲು ಮಾರ್ಗಗಳನ್ನು ಯಾವ ಕಾಲ ಮಿತಿಯಲ್ಲಿ ಪೂರ್ಣಗೊಳಿಸಲಾಗುವುದು. (ವಿವರ ನೀಡುವುದು)</td><td>ಈ ಯೋಜನೆಯ ಕಾಮಗಾರಿಯನ್ನು ನೈರುತ್ಯ ರೈಲ್ವೆ ಇಲಾಖೆಯು ಕೈಗೊಂಡಿದ್ದು, ಕಾಲಮಿತಿಯನ್ನು ನಿಗಧಿಪಡಿಸಲಾಗಿಲ್ಲ.</td></tr>
<tr><td>ಇ)</td><td>ರಾಜ್ಯ ಸರ್ಕಾರದ ಜಂಟಿ ಪಾಲುದಾರಿಕೆಯಲ್ಲಿ ಯಾವ ಮಾರ್ಗಗಳು ಒಳಗೊಂಡಿವೆ ಹಾಗೂ ಮೊತ್ತವೆಷ್ಟು?</td><td>ರಾಜ್ಯ ಸರ್ಕಾರದ ಜಂಟಿ ಪಾಲುದಾರಿಕೆಯಲ್ಲಿ ಕೈಗೊಳ್ಳುತ್ತಿರುವ ರೈಲ್ವೆ ಯೋಜನೆಗಳ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.</td></tr>
</table>

ಸಂಖ್ಯೆ: ಮೂಅಇ 61 ರಾರಾಹೆ 2021/ಇ

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 2566
ಉತ್ತರಿಸಬೇಕಾದ ದಿನಾಂಕ – 17-03-2021
ಸದಸ್ಯರ ಹೆಸರು – ಡಾ॥ ಯತೀಂದ್ರ ಸಿದ್ದರಾಮಯ್ಯ (ವರುಣ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಎಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲಾಗಿದೆ; (ಜಿಲ್ಲಾವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)	ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಿರುವುದಿಲ್ಲ
ಆ)	ವರುಣ ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳು ಮತ್ತು ವಸತಿ ಶಾಲೆಗಳ ಸಂಖ್ಯೆ ಎಷ್ಟು;	ವರುಣ ವಿಧಾನಸಭಾ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಯಾವುದೇ ವಿದ್ಯಾರ್ಥಿನಿಲಯಗಳು ಮತ್ತು ವಸತಿಶಾಲೆಗಳು ಇರುವುದಿಲ್ಲ.
ಇ)	ಈ ವಿದ್ಯಾರ್ಥಿ ನಿಲಯಗಳ ಮತ್ತು ವಸತಿ ಶಾಲೆಗಳ ಅಭಿವೃದ್ಧಿಗೆ ಕಳೆದ 2 ವರ್ಷಗಳಲ್ಲಿ ಮಂಜೂರು ಮಾಡಲಾದ ಅನುದಾನವೆಷ್ಟು?	

MWD 113 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2570
ಮಾನ್ಯ ವಿಧಾನ ಸಭೆ ಸದಸ್ಯರ ಹೆಸರು	:	ಶ್ರೀ ಖಾದರ್ ಯು.ಟಿ (ಮಂಗಳೂರು)
ಉತ್ತರಿಸಬೇಕಾದ ದಿನಾಂಕ	:	17.03.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ವಿಕಲಚೇತನರಿಗೆ ಯುಡಿಐಡಿ ಸ್ಮಾರ್ಟ್‌ಕಾರ್ಡ್ ವಿತರಿಸುವ ಕಾರ್ಯದಲ್ಲಿ ಸಾಧಿಸಿದ ಪ್ರಗತಿಯೇನು? (ವಿವರ ನೀಡುವುದು)	ರಾಜ್ಯದಲ್ಲಿ ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ UNIQUE DISABILITY ID ನೀಡುವ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ. ಈ ಗುರುತಿನ ಚೀಟಿಗಳಿಂದ ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿ ಕೊಳ್ಳಬಹುದಾಗಿದೆ. ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ UNIQUE DISABILITY ID ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ. ದಿನಾಂಕ: 10.03.2021 ರವರೆಗೆ 5,66,745 ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ 2,64,003 ಕಾರ್ಡ್‌ಗಳನ್ನು ವಿತರಿಸಲಾಗಿದೆ ಹಾಗೂ 29,068 ಅರ್ಜಿಗಳು ಸಮಗ್ರ ಮಾಹಿತಿ ಇಲ್ಲದ ತಿರಸ್ಕೃತವಾಗಿರುತ್ತವೆ. ಕೋವಿಡ್-19ರ ಕಾರಣ ಹಂಚಿಕೆಯಲ್ಲಿ ವಿಳಂಬವಾಗಿದ್ದು, ಪ್ರಸ್ತುತ ಹಂಚಿಕೆ ಕಾರ್ಯವು ವೇಗವಾಗಿ ನಡೆಯುತ್ತಿದೆ.

ಸಂಖ್ಯೆ ಮಮಇ 81 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 2571
ಉತ್ತರಿಸಬೇಕಾದ ದಿನಾಂಕ – 17-03-2021
ಸದಸ್ಯರ ಹೆಸರು – ಶ್ರೀ.ಖಾದರ್ ಯು.ಟಿ (ಮಂಗಳೂರು)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2019–20ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಮಂಗಳೂರು ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ವಿವಿಧ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳಿಗೆ ಆರ್ಥಿಕ ನೆರವು ಬಿಡುಗಡೆ ಮಾಡಲಾಗಿದೆಯೇ;</td><td>2019–20ನೇ ಸಾಲಿನಲ್ಲಿ ಮಂಗಳೂರು ವಿಧಾನಸಭಾ ಕ್ಷೇತ್ರಕ್ಕೆ ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿ ಸಹಾಯಧನ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಯಡಿಯಲ್ಲಿ ಆರ್ಥಿಕ ನೆರವು ಬಿಡುಗಡೆ ಮಾಡಲಾಗಿದೆ.</td></tr>
<tr><td>ಆ)</td><td>ಬಿಡುಗಡೆ ಮಾಡಿದ್ದರೆ ಯೋಜನಾವಾರು ವಿವರ ನೀಡುವುದು?</td><td>ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ.
<table><tr><th>ಯೋಜನೆಯ ಹೆಸರು</th><th>ಮೊತ್ತ (ರೂ.ಲಕ್ಷಗಳಲ್ಲಿ)</th></tr><tr><td>ಟ್ಯಾಕ್ಸಿ/ಗೂಡ್ಸ್ ವಾಹನ ಖರೀದಿ ಸಹಾಯಧನ ಯೋಜನೆ</td><td>6.00</td></tr><tr><td>ವೃತಿ ಪ್ರೋತ್ಸಾಹ ಯೋಜನೆ</td><td>3.00</td></tr></table></td></tr>
</table>

ಸಂಖ್ಯೆ:MWD 103 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2574
ಸದಸ್ಯರ ಹೆಸರು : ಶ್ರೀ ಖಾದರ್ ಯು.ಟಿ. (ಮಂಗಳೂರು)
ಉತ್ತರಿಸುವ ದಿನಾಂಕ : 17-03-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಭೂ-ಪರಿವರ್ತನೆಗೊಂಡ ಕ್ರಮಬದ್ಧ ಆಸ್ತಿಯನ್ನು ಸರ್ಕಾರದ ನಿಯಮಾವಳಿಯಂತೆ ಶುಲ್ಕವನ್ನು ಪಾವತಿಸಿ 11ಬಿ ಮೂಲಕ ಖರೀದಿಸಿದ ಜಮೀನಿನ ಖಾತಾ ಬದಲಾವಣೆಯನ್ನು ತಡೆಹಿಡಿದಿರುವುದರಿಂದ ಸಾರ್ವಜನಿಕರಿಗೆ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ. ಕೈಬರಹದ ಮೂಲಕ ಪಡೆದ ನಮೂನೆ 11ಬಿ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ಮ್ಯುಟೇಶನ್ ಮಾಡಲು ಅವಕಾಶವಿರುವುದಿಲ್ಲ. ಕೈಬರಹದ ಮೂಲಕ ಮ್ಯುಟೇಶನ್ ಮಾಡಬೇಕಾಗಿರುತ್ತದೆ. ಮೇಲ್ಕಂಡ 6 ಜಿಲ್ಲೆಗಳಲ್ಲಿ ನಮೂನೆ-11ಬಿ ಯನ್ನು ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸಲು ಕಾವೇರಿ ಮತ್ತು ಇ-ಸ್ವತ್ತು ತಂತ್ರಾಂಶವನ್ನು ಸಂಯೋಜನೆಗೊಳಿಸಿದಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ಮ್ಯುಟೇಶನ್ ಮಾಡಲು ಅವಕಾಶವಿರುತ್ತದೆ.

ಸಂ. ಗ್ರಾಅಪ 139 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2715

ಸದಸ್ಯರ ಹೆಸರು : ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)

ಉತ್ತರಿಸಬೇಕಾದ ದಿನಾಂಕ : 17-03-2021.

ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ರಾಜ್ಯದಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಿರುವ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ 200 ಕೋಟಿ ರೂ ಅನುದಾನವನ್ನು ಕಳೆದ ಬಜೆಟ್‌ನಲ್ಲಿ ಘೋಷಿಸಲಾಗಿದ್ದು, ಇದರಲ್ಲಿ ಎಷ್ಟು ಬಾಕಿ ಉಳಿದಿದೆ (ವಿವರ ನೀಡುವುದು);	ರಾಜ್ಯದಲ್ಲಿ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಿರುವ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ ರೂ.200.00 ಕೋಟಿಗಳ ಅನುದಾನವನ್ನು ಕಳೆದ ಬಜೆಟ್‌ನಲ್ಲಿ ಘೋಷಿಸಲಾಗಿದ್ದು, ಪರಿಷ್ಕೃತ ಆಯವ್ಯಯದಲ್ಲಿ ರೂ.48.00 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.
ಆ	ಸದರಿ ಅನುದಾನದಡಿ ರಾಜ್ಯದ ಅಧಿಸೂಚಿತವಲ್ಲದ ಯಾವ ಯಾವ ಕೊಳೆಚೆ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)	ಬೆಂಗಳೂರು ನಗರ ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗಾಗಿ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳನ್ನು ಗುರುತಿಸುವ ಕಾರ್ಯ ಪ್ರಗತಿಯಲ್ಲಿದೆ.

ಸಂಖ್ಯೆ: MWD 115 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

S.A. Desktop\BUDGET SESSION MARCH 2021\17-03-2021

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2719
ಸದಸ್ಯರ ಹೆಸರು	:	ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸುಗೂರು)
ಉತ್ತರಿಸಬೇಕಾದ ದಿನಾಂಕ	:	17-03-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	2018-19 ರಿಂದ 2020-21ನೇ ಸಾಲಿನವರೆಗೂ ರಾಯಚೂರು ಜಿಲ್ಲೆಯ ಲಿಂಗಸುಗೂರು ವಿಧಾನಸಭಾ ಕ್ಷೇತ್ರಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಅನುದಾನ ಎಷ್ಟು; ಬಿಡುಗಡೆಯಾಗಿರುವ ಅನುದಾನ ಎಷ್ಟು; ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು)	2018-19 ರಿಂದ 2020-21ನೇ ಸಾಲಿನವರೆಗೂ ರಾಯಚೂರು ಜಿಲ್ಲೆಯ ಲಿಂಗಸುಗೂರು ವಿಧಾನಸಭಾ ಕ್ಷೇತ್ರಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ಅನುದಾನ ಬಿಡುಗಡೆಯಾಗಿರುವ ಅನುದಾನ ಮತ್ತು ಕೈಗೆತ್ತಿಕೊಂಡಿರುವ ಕಾಮಗಾರಿಗಳ ವಿವರಗಳು ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

ಕ್ರಮ ಸಂಖ್ಯೆ	ವರ್ಷ	ಮಂಜೂರಾದ ಅನುದಾನ	ಬಿಡುಗಡೆಯಾದ ಅನುದಾನ
1	2018-19	225.00	225.00
2	2019-20	-	-
3	2020-21	-	-

ಕೈಗೆತ್ತಿಕೊಂಡಿರುವ ಕಾಮಗಾರಿಗಳು:

1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ.
2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.
3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.
4. ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.)

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಆ	ಲಿಂಗಸುಗೂರು ಪಟ್ಟಣದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)	ಲಿಂಗಸುಗೂರು ಪಟ್ಟಣದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಯ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ರವರಿಗೆ ವಹಿಸಲಾಗಿದ್ದು, ದಿನಾಂಕ:29.01.2021 ರಂದು ಕಾಮಗಾರಿಯನ್ನು ಪ್ರಾರಂಭಿಸಲು ಕಾರ್ಯದೇಶವನ್ನು ನೀಡಲಾಗಿದೆ.
ಇ	ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣದಲ್ಲಿ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;(ಮಾಹಿತಿ ನೀಡುವುದು)	ಲಿಂಗಸುಗೂರು ತಾಲ್ಲೂಕಿನ ಮುದಗಲ್ಲ ಪಟ್ಟಣದಲ್ಲಿ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ ನಿರ್ಮಾಣ ಮಾಡಲು ಪುರ ಸಭೆ ವ್ಯಾಪ್ತಿಯ ಸಿ.ಎ ನಿವೇಶನವನ್ನು ಖರೀದಿಸಲು ಕ್ರಮವಹಿಸಲಾಗುತ್ತದೆ.

ಸಂಖ್ಯೆ: MWD 116 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

S.A. Desktop\BUDGET SESSION MARCH 2021\17-03-2021

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 2720

ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಸಾರಿಗೆ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ನೌಕರರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿ ಅಥವಾ ಸ್ವಯಂ ನಿವೃತ್ತಿ ಹೊಂದಿ ಇಲಾಖೆ ಬಿಟ್ಟು ಹೋಗಿರುವ ನೌಕರರನ್ನು ಮರು ನೇಮಕ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;	ಸಾರಿಗೆ ಇಲಾಖೆಯಲ್ಲಿ ಕಾರ್ಯ ನಿರ್ವಹಿಸಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿ ಅಥವಾ ಸ್ವಯಂ ನಿವೃತ್ತಿ ಹೊಂದಿರುವ ನೌಕರರುಗಳನ್ನು ಮರು ನೇಮಕ ಮಾಡುವ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ.
(ಆ)	ಹಾಗಿದ್ದಲ್ಲಿ, ರಾಜೀನಾಮೆ ನೀಡಿ ಮರು ನೇಮಕಾತಿ ಹೊಂದಲು ಅವಕಾಶ ನೀಡಿರುವ ನೌಕರರ ವಿವರಗಳೊಂದಿಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು?	

ಟಿಡಿ 47 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **2721**

ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17–03–2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಕಬ್ಬು ಕಟಾವು ಯಂತ್ರಕ್ಕೆ (Harvestor) ವಿಧಿಸಲಾಗುತ್ತಿದ್ದ ಶೇಕಡಾ 6% ರಸ್ತೆ ತೆರಿಗೆಯನ್ನು ಶೇಕಡಾ 3%ಕ್ಕೆ ಇಳಿಸಲಾಗಿದ್ದು, ಆದರೆ ಭತ್ತ ಮತ್ತು ಜೋಳ ಕಟಾವು ಯಂತ್ರಕ್ಕೆ ಶೇಕಡಾ 6% ರಷ್ಟು ತೆರಿಗೆಯನ್ನು ವಿಧಿಸಲು ಕಾರಣಗಳೇನು;	ಕರ್ನಾಟಕ ರಾಜ್ಯದಲ್ಲಿ ಸುಮಾರು 180 ಕಬ್ಬು ಕಟ್ಟಾವು ವಾಹನಗಳಿದ್ದು, ಕಬ್ಬು ಕಟಾವು ವಾಹನದ ಮೌಲ್ಯವು ರೂ.1.00 ಕೋಟಿ ಮೇಲ್ಪಟ್ಟಿದ್ದು, ಕಬ್ಬು ಕಟ್ಟಾವು ಮಾಡಲು ಕೆಲಸಗಾರರ ಕೊರತೆಯನ್ನು ನೀಗಿಸುವ ಸಲುವಾಗಿ ಮತ್ತು ಕಬ್ಬು ಬೆಳೆಯುವ ರೈತರ ಹಿತದೃಷ್ಟಿಯಿಂದ ಕಬ್ಬು ಕಟ್ಟಾವು ವಾಹನಗಳಿಗೆ ಮಾತ್ರ ಮೌಲ್ಯದ ಮೇಲೆ ಶೇಕಡ 3% ಜೀವಾವಧಿ ರಸ್ತೆ ತೆರಿಗೆಯನ್ನು ವಿಧಿಸಲು ಅಧಿಸೂಚನೆ ಹೊರಡಿಸಲಾಗಿರುತ್ತದೆ.
ಆ	ಇದರಿಂದ ದಕ್ಷಿಣ ಕರ್ನಾಟಕ ಭಾಗದ ರೈತರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕಬ್ಬು ಕಟಾವು ಯಂತ್ರಗಳನ್ನು ಹೊರತುಪಡಿಸಿ ಇತರೆ ಭತ್ತ ಮತ್ತು ಜೋಳ ಕಟಾವು ಯಂತ್ರದ ಮೌಲ್ಯವು ಸುಮಾರು ರೂ.25.00 ರಿಂದ 30.00 ಲಕ್ಷಗಳ ವರೆಗಿರವುದರಿಂದ, ಸದರಿ ವಾಹನಗಳ ಮೌಲ್ಯದ ಮೇಲೆ ಶೇಕಡ 6% ರಸ್ತೆ ತೆರಿಗೆ ವಿಧಿಸುವುದು ಸೂಕ್ತವಾಗಿರುವ ಕಾರಣ ದಕ್ಷಿಣ ಕರ್ನಾಟಕ ಭಾಗದ ರೈತರಿಗೆ ಅನ್ಯಾಯವಾಗಿರುವುದು ಸರ್ಕಾರಕ್ಕೆ ಕಂಡುಬಂದಿರುವುದಿಲ್ಲ.
ಇ	ಹಾಗಿದ್ದಲ್ಲಿ, ಭತ್ತ ಮತ್ತು ಜೋಳ ಕಟಾವು ಯಂತ್ರವು ಸಹ ರಸ್ತೆ ತೆರಿಗೆಯನ್ನು ಶೇಕಡಾ 3%ಕ್ಕೆ ಇಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ನೀಡುವುದು)	ಪ್ರಸ್ತುತ, ಭತ್ತ ಮತ್ತು ಜೋಳ ಕಟಾವು ಯಂತ್ರಕ್ಕೆ ರಸ್ತೆ ತೆರಿಗೆಯನ್ನು ಶೇಕಡ 3%ಕ್ಕೆ ಇಳಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಟಿಡಿ 46 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2724
ಸದಸ್ಯರ ಹೆಸರು	ಶ್ರೀ ಮಹದೇವ ಕೆ
ಉತ್ತರಿಸುವ ದಿನಾಂಕ	17/03/2021
ಉತ್ತರಿಸುವವರು	ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆಗಳು	**ಉತ್ತರ**
ಅ)	ಪಿರಿಯಾಪಟ್ಟಣ ಮತ ಕ್ಷೇತ್ರದ ಕಗ್ಗುಂಡಿ ರಾವಂದೂರು ಹೋಬಳಿಯಲ್ಲಿರುವ ರೇಷ್ಮೆ ಇಲಾಖೆಯ ಜಮೀನು ಎಷ್ಟು;	ಪಿರಿಯಾಪಟ್ಟಣ ಮತ ಕ್ಷೇತ್ರದ ಕಗ್ಗುಂಡಿ ರಾವಂದೂರು ಹೋಬಳಿ ಯಲ್ಲಿ 42.20 ಎಕರೆ ವಿಸ್ತೀರ್ಣದಲ್ಲಿ ರೇಷ್ಮೆ ಇಲಾಖೆಯ ಜಮೀನು ಇರುತ್ತದೆ.
ಆ)	ಇದರಲ್ಲಿ ಇಲಾಖೆಯು ಎಷ್ಟು ಎಕರೆ ಜಮೀನನ್ನು ಬಳಸಲಾಗುತ್ತಿದೆ; ಉಳಿದ ಜಮೀನು ಎಷ್ಟು;	ಇಲಾಖೆಯ ಬಳಕೆಯಲ್ಲಿರುವ ಜಮೀನಿನ ವಿಸ್ತೀರ್ಣ 28.31 ಎಕರೆ ಹಾಗೂ ಉಳಿಕೆ ಜಮೀನಿನ ವಿಸ್ತೀರ್ಣ 13.29 ಎಕರೆ.
ಇ)	ಈ ಪೈಕಿ 20 ಎಕರೆ ಜಮೀನನ್ನು ತೋಟಗಾರಿಕೆ ಇಲಾಖೆಗೆ ನೀಡಲು ಇರುವ ತೊಂದರೆಯೇನು;	ರಾಜ್ಯದಲ್ಲಿ ಬಿತ್ತನೆ ಹಾಗೂ ವಾಣಿಜ್ಯ ಬೆಳೆಗಾರರಿಗೆ ರೇಷ್ಮೆ ಮೊಟ್ಟೆ ಪೂರೈಸುವುದು ರೇಷ್ಮೆ ಇಲಾಖೆಯ ಜವಾಬ್ದಾರಿಯಾಗಿರುತ್ತದೆ.
ಈ)	ಇದರಿಂದ ಪಿರಿಯಾಪಟ್ಟಣ ಕ್ಷೇತ್ರದಲ್ಲಿ ತೋಟಗಾರಿಕೆ ಇಲಾಖೆಯಿಂದ ಸಸಿ/ಕಸಿ ಅಭಿವೃದ್ಧಿಪಡಿಸಲು ಸಹಾಯಕವಾಗುವುದಿಲ್ಲವೇ; ಇದರ ಬಗ್ಗೆ ಸರ್ಕಾರದ ಕ್ರಮವೇನು? (ವಿವರ ನೀಡುವುದು)	ಮಿಶ್ರತಳಿ ರೇಷ್ಮೆ ಬೆಳೆಗಾರರ ರೇಷ್ಮೆ ಮೊಟ್ಟೆ ಬೇಡಿಕೆಯನ್ನು ಪೂರೈಸಲು ಬಿತ್ತನೆ ಗೂಡುಗಳನ್ನು ವಿವಿಧ ಹಂತಗಳಲ್ಲಿ ಅಂದರೆ ಪಿ4, ಪಿ3, ಪಿ2 ಹಾಗೂ ಪಿ1 ಹಂತಗಳಲ್ಲಿ ಇಲಾಖೆಯ ನೇರ ತಾಂತ್ರಿಕ ಮಾರ್ಗದರ್ಶನದಲ್ಲಿ ತಳಿಯ ಮೂಲ ಗುಣಲಕ್ಷಣಗಳನು ಕಾಪಾಡಲು ವೈಜ್ಞಾನಿಕವಾಗಿ ಬೆಳೆಯನ್ನು ನಿರ್ವಹಣೆ ಮಾಡಲಾಗುತ್ತಿದೆ.
		ಕಗ್ಗುಂಡಿ ರೇಷ್ಮೆ ಕೃಷಿ ಕ್ಷೇತ್ರವು ಪಿ3 ಹಂತದ ದ್ವಿತಳಿ ರೇಷ್ಮೆ ಹುಳು ಸಾಕಾಣಿಕೆಗೆ ಮೀಸಲಿಡಲಾಗಿದೆ. ಈ ಕ್ಷೇತ್ರದಲ್ಲಿ ಉತ್ಪಾದಿಸಿದ ದ್ವಿತಳಿ ಬಿತ್ತನೆ ಗೂಡುಗಳನ್ನು ಪಿ2 ಬಿತ್ತನೆ ಕೋಠಿಗಳ ಮೊಟ್ಟೆಗಳ ಉತ್ಪಾದನೆಗಾಗಿ ಸರಬರಾಜು ಮಾಡಲಾಗುತ್ತಿದೆ. ಇದರಿಂದಾಗಿ ಬಿತ್ತನೆ ವಲಯದ ರೇಷ್ಮೆ ಬೆಳೆಗಾರರು ಅವಲಂಬಿತರಾಗಿರುತ್ತಾರೆ. ಪಿ3 ಹಂತದ ಮೂಲ ಸಂತತಿ ರೇಷ್ಮೆ ಹುಳು ಸಾಕಾಣಿಕೆಗೆ ನೈರ್ಮಲ್ಯತೆಯ ಅವಶ್ಯಕತೆಯಿದ್ದು, ಈ ರೇಷ್ಮೆ ಕೃಷಿ ಕ್ಷೇತ್ರದ ಉಳಿಕೆ ಜಮೀನನ್ನು ಇತರೆ ಸಂಸ್ಥೆಗಳಿಗೆ ನೀಡಿದಲ್ಲಿ ಸೋಂಕು ಹರಡುವ ಸಾಧ್ಯತೆಯಿರುವುದರಿಂದ ಹಾಗೂ ಬಿತ್ತನೆ ಬೆಳೆಯ ಹಿತರಕ್ಷಣೆಯಿಂದ ಜಮೀನು ಹಸ್ತಾಂತರಿಸುವುದು ತಾಂತ್ರಿಕವಾಗಿ ಸೂಕ್ತವಲ್ಲವೆಂದು ರೇಷ್ಮೆ ಇಲಾಖೆಯ ಆಸ್ತಿ ಪರಿಶೀಲನಾ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಸಂಖ್ಯೆ: ರೇಷ್ಮೆ 07 ರೇಯೋವಿ 2021

(ಆರ್.ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2732

ಸದಸ್ಯರ ಹೆಸರು : ಶ್ರೀ. ರೇವಣ್ಣ ಹೆಚ್.ಡಿ.
(ಹೊಳೆ ನರಸೀಪುರ)

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17.03.2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆ ತೋಟಗಾರಿಕೆ ಬೆಳೆಗಾರರ ಹಿತದೃಷ್ಟಿಯಿಂದ ಹಿಂದಿನ ಸರ್ಕಾರದ ಅವಧಿಯಲ್ಲಿ ಹಾಸನ ಜಿಲ್ಲೆ, ಸೋಮನಹಳ್ಳಿ ಕಾವಲು ತೋಟಗಾರಿಕೆ ಕ್ಷೇತ್ರದ ಸುಮಾರು 400 ಎಕರೆ ಪ್ರದೇಶದಲ್ಲಿ ಹೊಸದಾಗಿ ತೋಟಗಾರಿಕೆ ಮಹಾವಿದ್ಯಾಲಯ ಸ್ಥಾಪನೆಗೆ ಆದೇಶ ಹೊರಡಿಸಿರುವುದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)	ಹೌದು. ಹಾಸನದ ಸೋಮನಹಳ್ಳಿ ಕಾವಲಿನಲ್ಲಿ ತೋಟಗಾರಿಕೆ ಕ್ಷೇತ್ರದಲ್ಲಿ 2019-20ನೇ ಸಾಲಿನಲ್ಲಿ ಮಹಾವಿದ್ಯಾಲಯ ಸ್ಥಾಪನೆ ಮಾಡಲು ಆದೇಶ ಮಾಡಲಾಗಿದೆ.
ಆ)	ತೋಟಗಾರಿಕೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಉತ್ತೇಜನವನ್ನು ನೀಡುವ ಸಲುವಾಗಿ ಪ್ರಸಕ್ತ ಸಾಲಿನಿಂದಲೇ ಹಾಸನ ಜಿಲ್ಲೆ, ಸೋಮನಹಳ್ಳಿ ಕಾವಲು ಮತ್ತು ವಿಜಯಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಆಲಮೇಲದಲ್ಲಿ ಲಭ್ಯವಿರುವ ಸಿಬ್ಬಂದಿಗಳು ಹಾಗೂ ಮೂಲಭೂತ ಸೌಲಭ್ಯಗಳೊಂದಿಗೆ ಒಟ್ಟು ರೂ.168.00 ಕೋಟಿಗಳ ಅನುದಾನದಲ್ಲಿ ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಅನುಮೋದನೆ ನೀಡಿ ಆದೇಶ ಹೊರಡಿಸಿರುವುದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)	ಹೌದು. ತೋಟಗಾರಿಕೆ ಮಹಾವಿದ್ಯಾಲಯ ಗಳನ್ನು ಸ್ಥಾಪಿಸಲು ಈಗಾಗಲೇ ಸರ್ಕಾರಿ ಆದೇಶ ಸಂಖ್ಯೆ: ತೋಇ 240 ತೋಇವಿ 2018, ಬೆಂಗಳೂರು, ದಿನಾಂಕ:18.07.2019 ರನ್ವಯ ಆದೇಶ ಹೊರಡಿಸಲಾಗಿರುತ್ತದೆ.
ಇ)	2019-20 ನೇ ಸಾಲಿಗೆ ಅನುದಾನವಾಗಿ ರೂ.63.00 ಕೋಟಿಗಳನ್ನು ಮೀಸಲಿಟ್ಟಿರುವುದು ನಿಜವೇ; ಈಗಾಗಲೇ ಹಾಸನದ ಲೋಕೋಪಯೋಗಿ ಇಲಾಖೆಯು ಅಂದಾಜು ಪಟ್ಟಿ ತಯಾರು ಮಾಡಿ ತಾಂತ್ರಿಕ ಮಂಡಳಿ ಅನುಮೋದನೆಯೊಂದಿಗೆ ಆಡಳಿತಾತ್ಮಕ ಅನುಮೋದನೆಗೆ ತೋಟಗಾರಿಕೆ ಇಲಾಖೆಗೆ ಕಳುಹಿಸಿರುವುದು ನಿಜವೇ;	ಹೌದು.
ಈ)	ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ನೀಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)	ಕಳೆದ ವರ್ಷದಿಂದ ಕೋವಿಡ್-19 ಪ್ರಾರಂಭವಾದ ಹಿನ್ನಲೆಯಲ್ಲಿ ಉದ್ದೇಶಿತ ತೋಟಗಾರಿಕೆ ಮಹಾ ವಿದ್ಯಾಲಯವನ್ನು ಪ್ರಾರಂಬಿಸುವ ಪ್ರಸ್ತಾವನೆಯನ್ನು ಅನಿರ್ಧಿಷ್ಟ ಕಾಲಾವಧಿವರೆಗೆ ಮುಂದೂಡಲು ಸರ್ಕಾರವು ತೀರ್ಮಾನಿಸಿದೆ.
ಉ)	2020-21 ನೇ ಶೈಕ್ಷಣಿಕ ವರ್ಷದಲ್ಲಿ ಉದ್ದೇಶಿತ ತೋಟಗಾರಿಕೆ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	

ಸಂಖ್ಯೆ: HORTI 159 HGM 2021

(ಆರ್. ಶಂಕರ್)

ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2733
ಸದಸ್ಯರ ಹೆಸರು : ಶ್ರೀ ರೇವಣ್ಣ ಹೆಚ್.ಡಿ
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	2020ನೇ ಸಾಲಿನಲ್ಲಿ ಕೊರೋನಾ-2019 ಲಾಕ್‌ಡೌನ್ ಹಿನ್ನೆಲೆಯಲ್ಲಿ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಪ್ರದೇಶದಲ್ಲಿ ಸಂಚರಿಸುತ್ತಿದ್ದ ಕೆ.ಎಸ್.ಆರ್.ಟಿ.ಸಿ ಬಸ್‌ಗಳ ಸಂಚಾರವನ್ನು ನಿಲ್ಲಿಸಿರುವುದು ನಿಜವೇ;	ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ರಾಷ್ಟ್ರವ್ಯಾಪಿ ಲಾಕ್‌ಡೌನ್ ಘೋಷಿಸಿದ ರಾಷ್ಟ್ರವ್ಯಾಪಿ ಲಾಕ್‌ಡೌನ್ ಘೋಷಿಸಿದ್ದರಿಂದ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಿಗೆ ಕಾರ್ಯಾಚರಣೆಯಲ್ಲಿದ್ದ 72 ಸಾಮಾನ್ಯ ಸಾರಿಗೆಗಳ ಕಾರ್ಯಾಚರಣೆಯನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು.
ಆ)	ಪ್ರಸ್ತುತ ಶಾಲಾ ಕಾಲೇಜುಗಳು ಪುನರಾರಂಭಗೊಂಡಿದ್ದು, ರೈತರ ದೈನಂದಿನ ಚಟುವಟಿಕೆಗಳು ಸಹಜ ಸ್ಥಿತಿಗೆ ಮರಳಿದ್ದರೂ ಸಹ ಗ್ರಾಮೀಣ ಪ್ರದೇಶಗಳಲ್ಲಿ ಈ ಹಿಂದೆ ಸಂಚರಿಸುತ್ತಿದ್ದ ಬಸ್‌ಗಳ ಸಂಚಾರವನ್ನು ಪುನರ್ ಆರಂಭಗೊಳಿಸದೆ ಇರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ರೈತರಿಗೆ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;	ಲಾಕ್‌ಡೌನ್ ಸಡಿಲಗೊಂಡ ನಂತರ ಸಾರ್ವಜನಿಕರು/ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಯಾಣಿಕರ ಲಭ್ಯತೆ/ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳ ಕಾರ್ಯಾಚರಣೆಯನ್ನು ಪುನರಾರಂಭಗೊಳಿಸಿದ್ದು, ಪ್ರಸ್ತುತ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 62 ಸಾಮಾನ್ಯ ಸಾರಿಗೆಗಳಿಂದ 548 ಸಾಮಾನ್ಯ ಸುತ್ತುವಳಿಗಳು ಕಾರ್ಯಾಚರಣೆಯಲ್ಲಿದ್ದು, ಇದು ಅವಶ್ಯಕತೆಗೆ ಅನುಗುಣವಾಗಿದೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ, ಪ್ರಯಾಣಿಕರು/ವಿದ್ಯಾರ್ಥಿಗಳ ಲಭ್ಯತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.
ಇ)	ಹಾಗಿದ್ದಲ್ಲಿ, ನಿಲ್ಲಿಸಲಾಗಿದ್ದ ಬಸ್ ಸಂಚಾರವನ್ನು ಗ್ರಾಮೀಣ ಪ್ರದೇಶದಲ್ಲಿ ಕೂಡಲೇ ಪುನರ್ ಆರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	

ಸಂಖ್ಯೆ: ಟಿಡಿ 108 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 2734
ಉತ್ತರಿಸಬೇಕಾದ ದಿನಾಂಕ – 17–03–2021
ಸದಸ್ಯರ ಹೆಸರು – ಶ್ರೀ.ರೇವಣ್ಣ ಹೆಚ್.ಡಿ. (ಹೊಳೇನರಸೀಪುರ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	2020–21ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಶ್ರಮಶಕ್ತಿ ಯೋಜನೆಯಡಿಯಲ್ಲಿ ನೀಡಿರುವ ಗುರಿಯು ತುಂಬಾ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	–ಹೌದು–
ಆ)	ಹಾಗಿದ್ದಲ್ಲಿ, ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದವರಿಗೆ ಸಬ್ಸಿಡಿ ಸಾಲ ದೊರೆಯದೆ ತೊಂದರೆಯಾಗಿರುವುದರಿಂದ ಶ್ರಮಶಕ್ತಿ ಯೋಜನೆಯಡಿಯಲ್ಲಿ ಗುರಿಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ನೀಡುವುದು)	ಪ್ರಸ್ತುತ ಕೋವಿಡ್–19ರ ಹಿನ್ನೆಲೆಯಲ್ಲಿ ಶ್ರಮಶಕ್ತಿ ಯೋಜನೆಯಡಿಯಲ್ಲಿ ಗುರಿಯನ್ನು ಹೆಚ್ಚಿಸಲು ಸಾಧ್ಯವಿರುವುದಿಲ್ಲ.

ಸಂಖ್ಯೆ:MWD 102 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2739
2) ಸದಸ್ಯರ ಹೆಸರು : ಶ್ರೀ. ವೆಂಕಟರಮಣಯ್ಯ ಟಿ
3) ಉತ್ತರಿಸಬೇಕಾದ ದಿನಾಂಕ : 17.03.2021
4) ಉತ್ತರಿಸುವವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	ದೊಡ್ಡಬಳ್ಳಾಪುರ ರೈಲ್ವೆ ನಿಲ್ದಾಣದಿಂದ ಖಾಸಬಾಗ್ ಮೂಲಕ ನಗರಸಭೆಗೆ ಹೋಗಲು ಬಂದು ರೈಲ್ವೆ ಕೆಳ ಸೇತುವೆ ಇದ್ದು, ಒಂದೇ ಮಾರ್ಗದಲ್ಲಿ ಹೆಚ್ಚು ದಟ್ಟಣೆಯಿಂದ ವಾಹನಗಳು ಸಂಚರಿಸುತ್ತಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಈ ಕುರಿತು ಯಾವುದೇ ಪ್ರಸ್ತಾವನೆಯು ರೈಲ್ವೆ ಇಲಾಖೆಯಿಂದ ಸ್ವೀಕೃತವಾಗಿರುವುದಿಲ್ಲ.
ಆ	ಹಾಗಿದ್ದಲ್ಲಿ, ಸಾರ್ವಜನಿಕರು ಮತ್ತು ಸಾರ್ವಜನಿಕ ವಾಹನಗಳು ಮುಕ್ತವಾಗಿ ಸಂಚರಿಸಲು ಸದರಿ ಮಾರ್ಗದಲ್ಲಿ ದ್ವಿಮುಖ ಕೆಳಸೇತುವೆ ನಿರ್ಮಾಣ ಮಾಡಲು ಮಾಡಲು ಸರ್ಕಾರವು ಕ್ರಮ ಕೈಗೊಳ್ಳವುದೇ;	ಉದ್ಭವಿಸುವುದಿಲ್ಲ.

ಸಂಖ್ಯೆ: ಮೂಅಇ 61 ರಾರಾಹೆ 2021/ಇ

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2747
ಸದಸ್ಯರ ಹೆಸರು : ಶ್ರೀ ಶಿವಣ್ಣ ಬಿ. (ಆನೇಕಲ್)
ಉತ್ತರಿಸುವ ದಿನಾಂಕ : 17/03/2021
ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಆನೇಕಲ್ ತಾಲ್ಲೂಕಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಮಂಜೂರಾದ ಒಟ್ಟು ಕೃಷಿ ಅಧಿಕಾರಿಗಳ ಹುದ್ದೆಗಳು ಎಷ್ಟು; (ಪೂರ್ಣ ಮಾಹಿತಿ ನೀಡುವುದು)	ಆನೇಕಲ್ ತಾಲ್ಲೂಕಿನ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಒಟ್ಟು 09 ಕೃಷಿ ಅಧಿಕಾರಿಗಳ ಹುದ್ದೆ ಮಂಜೂರಾಗಿರುತ್ತದೆ. (ಪೂರ್ಣ ಮಾಹಿತಿ ಈ ಕೆಳಕಂಡಂತಿದೆ)
ಆ)	ಈ ಹುದ್ದೆಗಳ ಪೈಕಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು ಎಷ್ಟು? (ಪೂರ್ಣ ಮಾಹಿತಿ ನೀಡುವುದು.	

ಕ್ರ. ಸಂ.	ಕಛೇರಿ	ಕೃಷಿ ಅಧಿಕಾರಿ		
		ಮಂಜೂರು	ಭರ್ತಿ	ಖಾಲಿ
1	ಸಕೃನಿ ಕಛೇರಿ, ಆನೇಕಲ್	9	7	2

ಸಂಖ್ಯೆ: AGRI-AGS-67/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು : ಶ್ರೀ ರಾಘವೇಂದ್ರ ಬಸವರಾಜ್ ಹಿಟ್ನಾಳ್ ಕೆ. (ಕೊಪ್ಪಳ)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2757
3. ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯಕ್ಕೆ ಸರ್ಕಾರ ಯಾವ ಯಾವ ಸಂದರ್ಭಗಳಲ್ಲಿ 100 ದಿನಗಳಿಂದ ಮಾನವ ದಿನಗಳನ್ನು 150 ದಿನಗಳವರೆಗೆ ಹೆಚ್ಚಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ; (ಮಾಹಿತಿ ನೀಡುವುದು)	ರಾಜ್ಯದಲ್ಲಿ ಪ್ರವಾಹ ಮತ್ತು ಬರ ಪರಿಸ್ಥಿತಿ ಉಂಟಾದ ಸಂದರ್ಭಗಳಲ್ಲಿ ಕಂದಾಯ ಇಲಾಖೆ ಗುರುತಿಸಿದ ಬರಪೀಡಿತ ಪ್ರದೇಶಗಳೆಂದು ಅಧಿಸೂಚನೆ ಹೊರಡಿಸುವ ತಾಲ್ಲೂಕುಗಳಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅಲ್ಲಿನ ಜನರಿಗೆ ಹೆಚ್ಚುವರಿ ಉದ್ಯೋಗ ಕಲ್ಪಿಸಿ ಅವರ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ನಿಟ್ಟಿನಲ್ಲಿ ಹೆಚ್ಚುವರಿ 50 ಮಾನವ ದಿನಗಳನ್ನು ಒದಗಿಸಲು ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುತ್ತದೆ.
ಆ)	ಯಾವ ಯಾವ ವರ್ಷಗಳಲ್ಲಿ 100 ದಿನಗಳಿಗಿಂತ ಹೆಚ್ಚಿಗೆ ಮಾನವ ದಿನಗಳ ಉದ್ಯೋಗ ಸೃಜಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ? (ವಿವರ ನೀಡುವುದು)	ವರ್ಷವಾರು 150 ಮಾನವ ದಿನಗಳ ಅನುಮೋದನೆ ದೊರೆತ ಮಾಹಿತಿ ಈ ಕೆಳಕಂಡಂತಿದೆ.

ಕ್ರ. ಸಂ.	ವರ್ಷ	ಬರ/ಪ್ರವಾಹ ಪೀಡಿತ ತಾಲ್ಲೂಕುಗಳ ಸಂಖ್ಯೆ	ಕೇಂದ್ರ ಸರ್ಕಾರದಿಂದ 150 ಮಾನವ ದಿನಗಳ ಅನುಮೋದನೆ ಪಡೆದ ಅಧಿಸೂಚನೆ ಮತ್ತು ಅದರ ದಿನಾಂಕದ ವಿವರ
1	2015-16	136	J-11018/1/2/2015/MGNREGA-IV, ದಿನಾಂಕ: 21-09-2015
2	2016-17	62	No. J-11018/1/2/2015/MGNREGA-IV (pt-2), ದಿನಾಂಕ: 18-05-2016
		139	No. J-11018/1/3/2016/MGNREGA-IV, ದಿನಾಂಕ: 30-12-2016
3	2017-18	25	No. J-11018/1/1/2017/MGNREGA-IV, ದಿನಾಂಕ: 18-08-2017
		86	No. J-11018/1/1/2017/MGNREGA (IV), ದಿನಾಂಕ: 08-11-2018
		14	No. J-11018/1/1/2017/MGNREGA(IV), ದಿನಾಂಕ: 03-12-2018
4	2018-19	45	No. J-110060/64/2018-RE(IV) (364785), ದಿನಾಂಕ: 10-01-2019
		31	No. J-11018/1/1/2017-MGNREGA(IV) (355861), ದಿನಾಂಕ: 18-03-2019
5	2019-20	103	No. J-11019/02/2019-RE (IV) (368500) ದಿನಾಂಕ: 31-10-2019
		34	No. J-11019/02/2019-RE (IV) (368500) ದಿನಾಂಕ: 18-12-2019.
6	2020-21	130	No. J-11019/01/2020-RE (IV) (371680) ದಿನಾಂಕ: 02-12-2020.
7	2020-21	43	No. J-11019/01/2020-RE (IV) (371680) ದಿನಾಂಕ: 12-01-2021.

ಸಂಖ್ಯೆ: ಗ್ರಾಅಪ 38(356) ಉಖಾಯೋ 2019

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2760
ಸದಸ್ಯರ ಹೆಸರು	:	ಶ್ರೀ ತನ್ವೀರ್ ಸೇಠ್ (ನರಸಿಂಹರಾಜ)
ಉತ್ತರಿಸಬೇಕಾದ ದಿನಾಂಕ	:	17-03-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕಾಗಿ ನೀಡುತ್ತಿದ್ದ ವಿದ್ಯಾರ್ಥಿ ವೇತನ ಯೋಜನೆಯನ್ನು ಪುನರ್ ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಸಂಪೂರ್ಣ ವಿವರ ನೀಡುವುದು)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಜಾರಿಯಲ್ಲಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಫಲಾನುಭವಿ ಆಧಾರಿತ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕಾಗಿ ವಿದ್ಯಾರ್ಥಿವೇತನ ನೀಡುವ ಯೋಜನೆಗಳು ಈ ಕೆಳಗಿನಂತಿದೆ:- 1. ಮೆಟ್ರಿಕ್ ನಂತರ ವಿದ್ಯಾರ್ಥಿವೇತನ ಯೋಜನೆ- ರಾಜ್ಯ ವಲಯ ಮತ್ತು ಕೇಂದ್ರ ಪುರಸ್ಕೃತ ಯೋಜನೆ. 2. ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ ಯೋಜನೆ- ರಾಜ್ಯ ವಲಯ ಮತ್ತು ಕೇಂದ್ರ ಪುರಸ್ಕೃತ ಯೋಜನೆ. 3. ಶುಲ್ಕ ಮರುಪಾವತಿ ಯೋಜನೆ- ರಾಜ್ಯ ವಲಯ ಯೋಜನೆ. 4. ಎಂ.ಫಿಲ್ ಮತ್ತು ಪಿ.ಎಚ್‌ಡಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ. 5. ವಿದೇಶದಲ್ಲಿ ಉನ್ನತ ವ್ಯಾಸಂಗ ಪಡೆಯಲು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಯೋಜನೆ. ಮೇಲಿನ ಯೋಜನೆಗಳಲ್ಲಿ ಕ್ರಮ ಸಂಖ್ಯೆ (1) ರಿಂದ (4)ರವರೆಗಿನ ಯೋಜನೆಗಳು ಪ್ರಸ್ತುತ ಜಾರಿಯಲ್ಲಿರುತ್ತವೆ. ಕ್ರಮ ಸಂಖ್ಯೆ (5) ರ ಯೋಜನೆಗೆ ಅನುದಾನದ ಕೊರತೆಯಿಂದ ಹೊಸ ಅರ್ಜಿಗಳನ್ನು ಆಹ್ವಾನಿಸಲಾಗಿರುವುದಿಲ್ಲ
ಆ	2021-22 ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಬಹುದಾದ ಅನುದಾನವೆಷ್ಟು; (ವಿವರಗಳನ್ನು ನೀಡುವುದು)	2021-22 ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮಗಳಿಗೆ ರೂ.100.00ಕೋಟಿಗಳನ್ನು ಆಯವ್ಯಯದಲ್ಲಿ ನಿಗದಿಪಡಿಸಲಾಗಿದೆ.

ಸಂಖ್ಯೆ: MWD 117 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2762
ಸದಸ್ಯರ ಹೆಸರು : ಶ್ರೀ ನಾಗನಗೌಡ ಕಂದ್‌ಕೂರ್
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರಗಳು</th></tr>
<tr><td>ಅ)</td><td>ಯಾದಗಿರಿ ವಿಭಾಗದ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ನೌಕರರ ನಿವೃತ್ತಿಯಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಘಟಕವಾರು ನೌಕರರ ವಿವರ ನೀಡುವುದು)</td><td>ಹೌದು.

ಯಾದಗಿರಿ ವಿಭಾಗದ ಘಟಕವಾರು ಖಾಲಿ ಇರುವ ನೌಕರರ ವಿವರ ಈ ಕೆಳಗಿನಂತಿದೆ:-

<table>
<tr><th>ಕ್ರ ಸಂ</th><th>ಘಟಕ</th><th>ಖಾಲಿ ಸ್ಥಾನ</th></tr>
<tr><td>1</td><td>ಯಾದಗಿರಿ</td><td>23</td></tr>
<tr><td>2</td><td>ಶಹಾಪುರ</td><td>17</td></tr>
<tr><td>3</td><td>ಗುರುಮಿಠಕಲ್</td><td>21</td></tr>
<tr><td>4</td><td>ಸುರಪುರ</td><td>00</td></tr>
<tr><td colspan="2">ಒಟ್ಟು</td><td>61</td></tr>
</table></td></tr>
<tr><td>ಆ)</td><td>ನೌಕರರ ಕೊರತೆಯಿಂದ ವಿಭಾಗದ ಎಲ್ಲಾ ಮಾರ್ಗಗಳಲ್ಲಿ ಬಸ್ ಸೌಲಭ್ಯವನ್ನು ಒದಗಿಸದ ಕಾರಣ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಯಾದಗಿರಿ ವಿಭಾಗದಲ್ಲಿ ಕೋವಿಡ್-19ರ ಪೂರ್ವದಲ್ಲಿ ಒಟ್ಟು 336 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತಿದ್ದು, ಆದರೆ ಪ್ರಸ್ತುತ 312 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕ ಪ್ರಯಾಣಿಕರಿಗೆ ತೊಂದರೆಯಾಗದಂತೆ ಗ್ರಾಮೀಣ ಭಾಗದ ಎಲ್ಲಾ ಮಾರ್ಗಗಳಲ್ಲಿ ಬಸ್ ಸೌಲಭ್ಯಗಳನ್ನು ಪ್ರಾರಂಭಿಸಲಾಗಿದೆ.</td></tr>
<tr><td>ಇ)</td><td>ಹಾಗಿದ್ದಲ್ಲಿ, ಈ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿ ಎಲ್ಲಾ ಮಾರ್ಗಗಳಿಗೆ ಬಸ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ಒದಗಿಸುವುದು)</td><td>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದ ಸಂದರ್ಭದಲ್ಲಿ, ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು ನೇಮಕಾತಿ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸಲಾಗಿದ್ದು, ಸದರಿ ನಿರ್ಬಂಧ ತೆರವುಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಕ್ರಮ ವಹಿಸಲಾಗುವುದು.</td></tr>
</table>

ಸಂಖ್ಯೆ: ಟಿಡಿ 113 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2763
ಸದಸ್ಯರ ಹೆಸರು : ಶ್ರೀ ನಾಗನಗೌಡ ಕಂದ್ ಕೂರ್ (ಗುರ್‌ಮಿಠ್ ಕಲ್)
ಉತ್ತರಿಸುವ ದಿನಾಂಕ : 17-03-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಕೈ ಎತ್ತುವ ಮೂಲಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)	ಗ್ರಾಮ ಪಂಚಾಯತ್ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಕೈ ಎತ್ತುವ ಮೂಲಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.
(ಆ)	ಹಾಗಿದ್ದಲ್ಲಿ, ಪ್ರಸ್ತುತ ಗೌಪ್ಯ (ಬ್ಯಾಲೇಟ್) ಮತದಾನದ ಮೂಲಕ ಆಯ್ಕೆ ಮಾಡುವುದರಿಂದ ಅವಿದ್ಯಾವಂತ ಸದಸ್ಯರು ಮತದಾನ ಮಾಡುವಾಗ ಕೆಲವು ಮತ ಪತ್ರ ಆಸಿಂಧುವಾಗುತ್ತಿರುವುದರಿಂದ ಕೈ ಎತ್ತುವ ಮೂಲಕ ಮಾಡುವುದು ಅನುಕೂಲಕರವಲ್ಲವೆ;	ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಚುನಾವಣೆ) ನಿಯಮಗಳು, 1995 ರ ನಿಯಮ 8(11) (ಎ) ರನ್ವಯ ಮತದಾರನು ಅನಕ್ಷರಸ್ಥನಾಗಿದ್ದು, ಅಥವಾ ಕುರಡನಾಗಿದ್ದು ಮತಪತ್ರದ ಮೇಲೆ ಕ್ರಾಸ್ ಮಾಡಲು ಸಾಧ್ಯವಾಗದಿದ್ದರೆ, ಗೊತ್ತುಪಡಿಸಿದ ಅಧಿಕಾರಿಯು ಮತದಾರನ ಇಚ್ಚೆಗನುಸಾರವಾಗಿ ಮತಪತ್ರದ ಮೇಲೆ ಮತವನ್ನು ದಾಖಲು ಮಾಡಲು ಅವಕಾಶ ಕಲ್ಪಿಸಲಾಗಿದೆ.
(ಇ)	ಹಾಗಿದ್ದಲ್ಲಿ, ಕೈ ಎತ್ತುವ ಮೂಲಕ ಮತದಾನ ಆಯ್ಕೆ ಮಾಡುವ ಪದ್ಧತಿಯನ್ನು ಜಾರಿಗೆ ತರುವಲ್ಲಿ ಸರ್ಕಾರದ ಸ್ಪಷ್ಟ ನಿಲುವೇನು?	ಮೇಲಿನ (ಆ) ಪ್ರಶ್ನೆಗೆ ನೀಡಿರುವ ಉತ್ತರದಿಂದ (ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಸಂ. ಗ್ರಾಅಪ 130 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2765

ಸದಸ್ಯರ ಹೆಸರು : ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)

ಉತ್ತರಿಸುವ ದಿನಾಂಕ : 17-03-2021.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಗ್ರಾಮ ಪಂಚಾಯಿತಿಗಳಲ್ಲಿ ಇ-ಖಾತೆ ಮಾಡಿಸಲು ರೈತರು/ಸಾರ್ವಜನಿಕರು ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು);	ಬಂದಿಲ್ಲ.
(ಆ)	ಇ-ಖಾತೆ ಉಚಿತ ಖಾತಾ ಆಂದೋಲನವನ್ನು ಗ್ರಾಮಗಳಲ್ಲಿ ಹಮ್ಮಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಂತಹ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.
(ಇ)	ಇದುವರೆವಿಗೂ ಎಲ್ಲೆಲ್ಲಿ ಇ-ಖಾತೆ ಉಚಿತ ಖಾತಾ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಹಾಗೂ ಎಷ್ಟು ಫಲಾನುಭವಿಗಳು ಇದರ ಸದುಪಯೋಗವನ್ನು ಪಡೆದುಕೊಂಡಿದ್ದಾರೆ? (ತಾಲ್ಲೂಕುವಾರು ಮಾಹಿತಿ ನೀಡುವುದು)	ಇ-ಸ್ವತ್ತು ತಂತ್ರಾಂಶದ ಮೂಲಕ ಉಚಿತವಾಗಿ ನಮೂನೆ-9, 11ಎ ಮತ್ತು 11ಬಿ ನೀಡುವ ಆಂದೋಲನವನ್ನು ಹಮ್ಮಿಕೊಂಡಿರುವುದಿಲ್ಲ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ. ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.

ಸಂ. ಗ್ರಾಅಪ 136 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2766
ಸದಸ್ಯರ ಹೆಸರು	ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)
ಉತ್ತರಿಸಬೇಕಾದ ದಿನಾಂಕ	17.03.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಶೃಂಗೇರಿ ವಿಧಾನಸಭಾ ಕ್ಷೇತ್ರಕ್ಕೆ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿ ಕೈಗೊಳ್ಳಲು ರೂ.200.00 ಲಕ್ಷ ಅನುದಾನ ಅನುಮೋದನೆಯಾಗಿದ್ದರೂ ಇನ್ನೂ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಬಂದಿದೆ
ಆ.	ಅನುದಾನ ಬಿಡುಗಡೆಯಾಗದಿರಲು ಕಾರಣವೇನು; (ವಿವರ ನೀಡುವುದು)	ಮಳೆಹಾನಿಗೊಳಗಾದ ಪ್ರದೇಶಗಳ ರಸ್ತೆ ಮತ್ತು ಸೇತುವೆಗಳ ದುರಸ್ತಿ ಕಾಮಗಾರಿಗಳ ಬಾಕಿ ಬಿಲ್ಲುಗಳ ತೀರುವಳಿಗೆ ಅನುದಾನ ಬಿಡುಗಡೆ ಮಾಡುವಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅನುದಾನದ ಲಭ್ಯತೆಯನ್ನಾಧರಿಸಿ ಪೂರ್ಣಗೊಂಡಿರುವ ಕಾಮಗಾರಿಗಳ ಬಿಲ್ಲುಗಳ ತೀರುವಳಿಗೆ ಕ್ರಮ ವಹಿಸಬೇಕಿದೆ.
ಇ.	ಯಾವ ಕಾಲಮಿತಿಯೊಳಗೆ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತದೆ?	

ಕಡತ ಸಂಖ್ಯೆ: ಗ್ರಾಅಪ:ಅಧಿ-15-9/28:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2806

ಸದಸ್ಯರ ಹೆಸರು : ಶ್ರೀ ಲಿಂಗೇಶ ಕೆ.ಎಸ್. (ಬೇಲೂರು)

ಉತ್ತರಿಸುವ ದಿನಾಂಕ : 17.03.2021.

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	2021-22 ನೇ ಸಾಲಿನಲ್ಲಿ ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಕೃಷಿ ಸಂಸ್ಕರಣೆ ಯೋಜನೆ ಮತ್ತು ಕೃಷಿ ಯಾಂತ್ರೀಕರಣ ಯೋಜನೆಯಡಿ ಹೆಚ್ಚುವರಿ ಗುರಿಗಳನ್ನು ನಿಗದಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	2021-22 ನೇ ಸಾಲಿನಲ್ಲಿ ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಕೃಷಿ ಸಂಸ್ಕರಣೆ ಯೋಜನೆ ಮತ್ತು ಕೃಷಿ ಯಾಂತ್ರೀಕರಣ ಯೋಜನೆಯಡಿ ಹೆಚ್ಚುವರಿ ಗುರಿಗಳನ್ನು ನಿಗದಿಪಡಿಸುವಂತೆ ಮಾನ್ಯ ಕೃಷಿ ಸಚಿವರಿಗೆ ಸಲ್ಲಿಸಿರುವ ಪ್ರಸ್ತಾವನೆಯು ಸ್ವೀಕೃತವಾಗಿರುತ್ತದೆ
ಆ)	ಇದ್ದಲ್ಲಿ, ಸದರಿ ಪ್ರಸ್ತಾಪನೆಯು ಯಾವ ಹಂತದಲ್ಲಿದೆ? (ಸಂಪೂರ್ಣ ವಿವರ ನೀಡುವುದು)	2021-22 ನೇ ಸಾಲಿಗೆ ರಾಜ್ಯ ವಲಯ ಕೃಷಿ ಯಾಂತ್ರೀಕರಣ ಯೋಜನೆ ಹಾಗೂ ಕೇಂದ್ರ ಪುರಸ್ಕೃತ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಯೋಜನೆಯಡಿ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಹೆಚ್ಚುವರಿ ಗುರಿಗಳನ್ನು ನಿಗದಿಪಡಿಸಲಾಗುತ್ತದೆ.

ಸಂಖ್ಯೆ: AGRI-ASC/25/2021

(ಬಿ. ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2807

ಸದಸ್ಯರ ಹೆಸರು : ಶ್ರೀ ಲಿಂಗೇಶ್ ಕೆ.ಎಸ್.

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 17-03-2021

ಕ್ರಸ	ಪ್ರಶ್ನೆ	ಉತ್ತರ
ಅ	ಬೇಲೂರಿನಲ್ಲಿರುವ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಜಾಗ ತುಂಬಾ ಕಿರಿದಾಗಿದ್ದು, ಬಸ್ಸುಗಳ ಸಂಚಾರಕ್ಕೆ ಹಾಗೂ ಸಾವಿರಾರು ಸಂಖ್ಯೆಯ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ	ಬಂದಿದ್ದಲ್ಲಿ, ಸದರಿ ಬಸ್ ನಿಲ್ದಾಣದ ಪಕ್ಕದಲ್ಲಿರುವ ಲೋಕೋಪಯೋಗಿ ಇಲಾಖೆಗೆ ಸೇರಿದ ಜಾಗವನ್ನು ಕೆ.ಎಸ್.ಆರ್.ಟಿ.ಸಿ.ಗೆ ಹಸ್ತಾಂತರಿಸಿಕೊಂಡು ಬಸ್ ನಿಲ್ದಾಣವನ್ನು ವಿಸ್ತರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ಹೌದು. ಸದರಿ ನಿವೇಶನವನ್ನು ಕ.ರಾ.ರ.ಸಾ.ನಿಗಮಕ್ಕೆ ಮಂಜೂರು ಮಾಡುವಂತೆ ಲೋಕೋಪಯೋಗಿ ಇಲಾಖೆಯನ್ನು ಕೋರಲಾಗಿದ್ದು, ಇದುವರೆವಿಗೂ ಸದರಿ ನಿವೇಶನವು ನಿಗಮಕ್ಕೆ ಹಸ್ತಾಂತರವಾಗಿರುವುದಿಲ್ಲ. ನಿವೇಶನವು ಹಸ್ತಾಂತರವಾದ ನಂತರ ಮುಂದಿನ ದಿನಗಳಲ್ಲಿ ನಿಗಮದ ಆರ್ಥಿಕ ಪರಿಸ್ಥಿತಿ ಉತ್ತಮಗೊಂಡ ನಂತರ ಸಾರಿಗೆ ಅವಶ್ಯಕತೆ ಅನುಸಾರ ಈ ಬಗ್ಗೆ ಪರಿಶೀಲಿಸಲಾಗುವುದು.
ಇ	ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಬೇಲೂರು ಬಸ್ ನಿಲ್ದಾಣವನ್ನು ಯಾವಾಗ ವಿಸ್ತರಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	

ಸಂಖ್ಯೆ: ಟಿಡಿ 115 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2808

ಸದಸ್ಯರ ಹೆಸರು : ಶ್ರೀ ಲಿಂಗೇಶ ಕೆ.ಎಸ್. (ಬೇಲೂರು)

ಉತ್ತರಿಸಬೇಕಾದ ದಿನಾಂಕ : 17-03-2021.

ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಾಲೋನಿಗಳು ಮೂಲಭೂತ ಸೌಕರ್ಯದಿಂದ ವಂಚಿತವಾಗಿದ್ದು, ಸದರಿ ಕಾಲೋನಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಅನುದಾನ ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	- ಇಲ್ಲ -
ಆ	ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಯಾವಾಗ ಅನುದಾನ ಮಂಜೂರು ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)	2020-21ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಿರುವುದರಿಂದ ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಾಲೋನಿಗಳಿಗೆ ಅನುದಾನ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲ.

ಸಂಖ್ಯೆ: **MWD 118 LMQ 2021**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2815
ಸದಸ್ಯರ ಹೆಸರು	:	ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)
ಉತ್ತರಿಸಬೇಕಾದ ದಿನಾಂಕ	:	17-03-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ.</td><td>ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗಾಗಿ ಈ ಹಿಂದೆ ನೀಡಲಾಗುತಿದ್ದ ವಿಶೇಷ ಅನುದಾನವನ್ನು ಮುಂದುವರಿಸಲಾಗಿದೆಯೇ; ಹಾಗಿದ್ದಲ್ಲಿ, ಕಳೆದ 3 ವರ್ಷಗಳಿಂದ ನೀಡಿರುವ ಅನುದಾನದ ವಿವರ ನೀಡುವುದು;(ಕ್ಷೇತ್ರವಾರು ಮಾಹಿತಿ ನೀಡುವುದು)</td><td>ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗಾಗಿ 2020-21ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳಲು ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.

ಕಳೆದ 03 ವರ್ಷದಲ್ಲಿ ನೀಡಿರುವ ಅನುದಾನದ ಮಾಹಿತಿಯ ವಿವರಗಳು ಈ ಕೆಳಕಂಡಂತಿರುತ್ತದೆ.
(ರೂ.ಲಕ್ಷಗಳಲ್ಲಿ)
<table>
<tr><th>ಕ್ರಮ ಸಂಖ್ಯೆ</th><th>ವಿಧಾನ ಸಭಾ ಕ್ಷೇತ್ರದ ಹೆಸರು</th><th>2017-18</th><th>2018-19</th><th>2019-20</th><th>ಒಟ್ಟು</th></tr>
<tr><td>1</td><td>ಬಾಗಲಕೋಟೆ</td><td>150.00</td><td>25.00</td><td>-</td><td>175.00</td></tr>
<tr><td>2</td><td>ಹುನಗುಂದ</td><td>150.00</td><td>25.00</td><td>-</td><td>175.00</td></tr>
<tr><td>3</td><td>ಬಾದಾಮಿ</td><td>150.00</td><td>752.00</td><td>-</td><td>902.00</td></tr>
<tr><td>4</td><td>ಬೀಳಗಿ</td><td>150.00</td><td>25.00</td><td>-</td><td>175.00</td></tr>
<tr><td>5</td><td>ಮುಧೋಳ</td><td>50.00</td><td>25.00</td><td>-</td><td>75.00</td></tr>
<tr><td>6</td><td>ಜಮಖಂಡಿ</td><td>150.00</td><td>25.00</td><td>-</td><td>175.00</td></tr>
<tr><td>7</td><td>ತೇರದಾಳ</td><td>150.00</td><td>25.00</td><td>-</td><td>175.00</td></tr>
<tr><td colspan="2">ಒಟ್ಟು</td><td>950.00</td><td>902.00</td><td>-</td><td>1852.00</td></tr>
</table>
</td></tr>
<tr><td>ಆ</td><td>ಜಮಖಂಡಿ ನಗರದಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ರಸ್ತೆಗಳು ಹಾಳಾಗಿದ್ದು, ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು)</td><td rowspan="2">2020-21ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಅಧಿಸೂಚಿತವಲ್ಲದ ಕೊಳಚೆ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಿರುವುದರಿಂದ ಜಮಖಂಡಿನಗರದ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಾಲೋನಿಗಳಿಗೆ ಅನುದಾನ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲ.</td></tr>
<tr><td>ಇ</td><td>ಯಾವಾಗ ಅನುದಾನ ಬಿಡುಗಡೆ ಮಾಡಲಾಗುವುದು;</td></tr>
</table>

ಸಂಖ್ಯೆ: MWD 119 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2816

ಸದಸ್ಯರ ಹೆಸರು : ಶ್ರೀ ಆನಂದ ಸಿದ್ದು ನ್ಯಾಮಗೌಡ (ಜಮಖಂಡಿ)

ಉತ್ತರಿಸುವ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಕೃಷಿ ಇಲಾಖೆಯಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ರದ್ದು ಪಡಿಸಲು ಕಾರಣವೇನು;	ಸರ್ಕಾರದ ಆದೇಶ ಸಂಖ್ಯೆ:ಕೃಇ 08, ಕೃಯೋಕ 2014 ದಿನಾಂಕ: 22-07-2014 ರನ್ವಯ ಕೃಷಿ ಭಾಗ್ಯ ಯೋಜನೆಯನ್ನು ಮಿಷನ್ ಮೋಡ್ ಮಾದರಿಯಲ್ಲಿ ಹಂತಹಂತವಾಗಿ ಐದು ವರ್ಷಗಳಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ. 2020-21ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಕಳೆದ ಸಾಲಿನಲ್ಲಿ ಅನುಷ್ಠಾನಗೊಂಡಿರುವ ಕೃಷಿಹೊಂಡ ಹಾಗೂ ಪೂರಕ ಘಟಕಗಳ ಬಾಕಿ ಸಹಾಯಧನ ಪಾವತಿಗೆ ರೂ.40.00 ಕೋಟಿ ಅನುದಾನ ನಿಗಧಿಯಾಗಿರುತ್ತದೆ. ಆದರೆ, ಹೊಸದಾಗಿ ಯಾವುದೇ ಚಟುವಟಿಕೆಗಳನ್ನು ತೆಗೆದುಕೊಳ್ಳುವುದಕ್ಕೆ ಅವಕಾಶವಿರುವುದಿಲ್ಲ.
ಆ.	ರೈತರಿಗೆ ಅನುಕೂಲವಾಗುವ ಕೃಷಿ ಭಾಗ್ಯ ಯೋಜನೆಯನ್ನು ಪುನಃ ಪ್ರಾರಂಭ ಮಾಡುವ ಪ್ರಸ್ತಾವನೆ ಇದೆಯೇ;	
ಇ.	ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು?	ಕ್ಷೇತ್ರ ಮಟ್ಟದಲ್ಲಿ, ಕೃಷಿ ಹೊಂಡಗಳನ್ನು ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆಯ ವತಿಯಿಂದ ನರೇಗಾ ಯೋಜನೆಯಡಿ ನಿರ್ಮಾಣ ಮಾಡಲಾಗುತ್ತಿದೆ.

ಸಂಖ್ಯೆ: AGRI-AML/81/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2818
ಸದಸ್ಯರ ಹೆಸರು	:	ಶ್ರೀ ರಾಮದಾಸ್ ಎಸ್. ಎ. (ಕೃಷ್ಣರಾಜ)
ಉತ್ತರಿಸಬೇಕಾದ ದಿನಾಂಕ	:	17-03-2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕೇಂದ್ರ ಸರ್ಕಾರ 21 ವಿಧದ ಅಂಗವಿಕಲತೆಯನ್ನು ಗೆಜೆಟ್ ಪ್ರಕಟಣೆ ಮಾಡಿದ್ದು, ರಾಜ್ಯ ಸರ್ಕಾರ ಇನ್ನೂ 12 ವಿಧದ ಅಂಗವಿಕಲತೆಯನ್ನು ಮಾತ್ರ ಪರಿಗಣಿಸುತ್ತಿರಲು ಕಾರಣವೇನು; ಉಳಿದ 9 ವಿವಿಧ ಅಂಗವಿಕಲತೆಯನ್ನು ಯಾವಾಗ ಗೆಜೆಟ್ ಪ್ರಕಟಣೆ ಮಾಡಲಾಗುವುದು;	ಅಂಗವಿಕಲ ವ್ಯಕ್ತಿಗಳ ಹಕ್ಕುಗಳನ್ನು ಸಂರಕ್ಷಿಸಿ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಅಂಗವಿಕಲ ವ್ಯಕ್ತಿಗಳ ಅಧಿನಿಯಮ 2016ನ್ನು ಜಾರಿಗೊಳಿಸಿರುತ್ತದೆ. ಈ ಅಧಿನಿಯಮದ ಪ್ರಕಾರ 21 ವಿವಿಧ ಬಗೆಯ ಅಂಗವಿಕಲತೆಯನ್ನು ಗುರುತಿಸಲಾಗಿರುತ್ತದೆ. ಈ ಅಧಿನಿಯಮವನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ಅಂಗವಿಕಲ ವ್ಯಕ್ತಿಗಳ ಅಧಿನಿಯಮಕ್ಕೆ ನಿಯಮಗಳನ್ನು ರೂಪಿಸಿ ದಿ:30-08-2019 ರಂದು ಅಧಿಸೂಚನೆ ಹೊರಡಿಸಿರುತ್ತದೆ. ಈ ನಿಯಮಗಳಲ್ಲಿ ಎಲ್ಲಾ 21 ವಿವಿಧ ಅಂಗವಿಕಲತೆಯನ್ನು ಪರಿಗಣಿಸಲಾಗುತ್ತದೆ.
ಆ	ರಾಜ್ಯದಲ್ಲಿ ಬಾಲನ್ಯಾಯ ಮಕ್ಕಳ ಪಾಲನೆ ಮತ್ತು ಪೋಷಣೆ ಅಧಿನಿಯಮ 2015ರ ಅಡಿಯಲ್ಲಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿಗಳು ಸ್ಥಾಪನೆಯಾಗಿವೆ; 2018ರ ಕೇಂದ್ರಿಯ ಅಧಿನಿಯಮ 4ರನ್ವಯ ಹಲವಾರು ಅಂಶಗಳಿಗೆ ತಿದ್ದುಪಡಿ ಮಾಡಿದ್ದು, ಅದರಂತೆ ಸದರಿ ಸದಸ್ಯರಿಗೆ ಸಭಾ ಭತ್ಯೆಯಾಗಿ ಪ್ರತಿ ದಿನಕ್ಕೆ ರೂ. 1500/- ರಂತೆ ಪಾವತಿಸಲು ಸೂಚಿಸಲಾಗಿದ್ದರೂ ರಾಜ್ಯದಲ್ಲಿ ಕಡಿಮೆ ಪಾವತಿಸಲು ಕಾರಣವೇನು; ಹೊಸ ನಿಯಮದಂತೆ ಯಾವಾಗ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು?	ಸರ್ಕಾರದ ಆದೇಶ ಸಂಖ್ಯೆ: ಮಮಇ 71 ಮಭಾಬ 2018 ದಿನಾಂಕ:26-06-2019ರಲ್ಲಿ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು ಮತ್ತು ಬಾಲನ್ಯಾಯ ಮಂಡಳಿಗಳ ಸಮಾಜ ಕಾರ್ಯಕರ್ತರ ಉಪಸ್ಥಿತಿ ಭತ್ಯೆಯನ್ನು ರೂ. 1000/- ರಿಂದ ರೂ. 1500/- ಗಳಿಗೆ ಹೆಚ್ಚಿಸಿ ಆದೇಶಿಸಿದೆ. ಅದರಂತೆ ಸದರಿ ಆದೇಶದ ದಿನಾಂಕದಿಂದ ಅನ್ವಯವಾಗುವಂತೆ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಉಪಸ್ಥಿತಿ ಭತ್ಯೆಯನ್ನು ಹೆಚ್ಚಿಸಿದ ದರ ರೂ. 1500/- ರಂತೆ ಪಾವತಿಸಲಾಗುತ್ತಿದೆ.

ಮಮಇ 70 ಸ್ಪೀಮರ 2021

(ಶಶಿಕಲಾ ಅ.ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2820
ಸದಸ್ಯರ ಹೆಸರು : ಶ್ರೀ ಕರುಣಾಕರ ರೆಡ್ಡಿ ಜಿ.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಹರಪನಹಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಗ್ರಾಮೀಣ ಬಸ್ಸುಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ, ಬಡ ರೋಗಿಗಳಿಗೆ, ಕೂಲಿ ಕಾರ್ಮಿಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹರಪನಹಳ್ಳಿ ಘಟಕವು ದಿನಾಂಕ: 01.11.2019ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಈ.ಕ.ರ.ಸಾ.ಸಂಸ್ಥೆಯ ಹೊಸಪೇಟೆ ವಿಭಾಗದ ಆಡಳಿತ ವ್ಯಾಪ್ತಿಗೆ ಹಸ್ತಾಂತರವಾಗಿರುತ್ತದೆ. ಕೋವಿಡ್-19ರ ಲಾಕ್‌ಡೌನ್ ತೆರವಿನ ನಂತರ ಹರಪನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಗ್ರಾಮಗಳಿಗೆ ಡಿಸೆಂಬರ್-2020ರ ಮಾಹೆಯ ಅಂತ್ಯದೊಳಗೆ ಉಚ್ಚಂಗಿದುರ್ಗ, ಮೈದೂರು, ಹೊಳಲು, ಉತ್ತಂಗಿ, ಬೆಂಡಿಗೆರೆ ಕೊಟ್ಟೂರು, ವಲಯಗಳಲ್ಲಿ ಬರುವ ಗ್ರಾಮಗಳಿಗೆ ದಟ್ಟಣೆಗೆ ಅನುಗುಣವಾಗಿ ಬಸ್ ಸೌಕರ್ಯ ಒದಗಿಸಿದ್ದು, ನಂತರ ಜನವರಿ-2021ರ ಮಾಹೆಯಲ್ಲಿ ಶಾಲಾ-ಕಾಲೇಜು ಪ್ರಾರಂಭವಾಗಿರುವುದರಿಂದ ಹಲವಾಗಿಲು, ತಾವರಗುಂದಿ ವಲಯದ ಗ್ರಾಮಗಳಿಗೂ ಸಹ ಬಸ್ ಸೌಕರ್ಯ ಒದಗಿಸಲಾಗಿರುತ್ತದೆ. ಸದರಿ ಸಾರಿಗೆ ಸೇವೆಗಳ ಅನುಕೂಲತೆಯನ್ನು ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿರುತ್ತಾರೆ. ಪ್ರಸ್ತುತ ಹರಪನಹಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಒಟ್ಟು 236 ಗ್ರಾಮಗಳಿದ್ದು, ಇವುಗಳಲ್ಲಿ 11 ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಒದಗಿಸಿರುವುದಿಲ್ಲ. ಸದರಿ 11 ಗ್ರಾಮಗಳಿಗೆ ಮಾರ್ಗ ಸರ್ವೆ ಕೈಗೊಂಡು ಪರಿಶೀಲಿಸಿ, ಬಸ್ ಸೇವೆ ಒದಗಿಸಲು ಕ್ರಮ ಜರುಗಿಸಲಾಗುವುದು.
ಆ)	ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಗ್ರಾಮೀಣ ಬಸ್ಸುಗಳ ಕೊರತೆಯನ್ನು ಸರಿಪಡಿಸಿ, ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು? (ಸಂಪೂರ್ಣ ವಿವರ ನೀಡುವುದು)	

ಸಂಖ್ಯೆ: ಟಿಡಿ 116 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2824
ಸದಸ್ಯರ ಹೆಸರು : ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು)
ಉತ್ತರಿಸುವ ದಿನಾಂಕ : 17-03-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಇ-ಸ್ವತ್ತು ತಂತ್ರಾಂಶದಡಿ ಸಾರ್ವಜನಿಕರುಗಳ ಆಸ್ತಿಗಳಿಗೆ ನಮೂನೆ-9 ಮತ್ತು 11ಎ, 11ಬಿಗಳನ್ನು ವಿತರಿಸುತ್ತಿದ್ದು, ಸರ್ವರ್ ಸಮಸ್ಯೆಗಳಿಂದಾಗಿ ಸರಿಯಾದ ಸಮಯಕ್ಕೆ ವಿತರಿಸಲಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ದಿನಾಂಕ: 15-01-2020 ರ ನಂತರ ಎನ್.ಐ.ಸಿ. ಡೇಟಾ ಸೆಂಟರ್‌ಗಳಲ್ಲಿರುವ ಸರ್ವರ್‌ಗಳ ಸಮಸ್ಯೆಯಿಂದಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆ 9 ಮತ್ತು 11ಎ, 11ಬಿ ಗಳನ್ನು ವಿತರಿಸಲು ಸಮಸ್ಯೆಯಾಗಿತ್ತು.
(ಆ)	ಹಾಗಿದ್ದಲ್ಲಿ, ಈ ಸರ್ವರ್ ಸಮಸ್ಯೆಗಳನ್ನು ಬಗೆಹರಿಸಿ ಸಕಾಲದಲ್ಲಿ ಸಾರ್ವಜನಿಕರಿಗೆ ಬೇಕಾದ ಅಗತ್ಯ ದಾಖಲಾತಿಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ಪ್ರಸ್ತುತ 2020 ರ ಫೆಬ್ರವರಿ ತಿಂಗಳ ಅಂತ್ಯದಲ್ಲಿ ಇ-ಸ್ವತ್ತು ತಂತ್ರಾಂಶದ ಎನ್.ಐ.ಸಿ. ಡೇಟಾ ಸೆಂಟರ್‌ನಲ್ಲಿ ಇದ್ದ ಸರ್ವರ್‌ಗಳನ್ನು ಕರ್ನಾಟಕ ರಾಜ್ಯ ಡೇಟಾ ಸೆಂಟರ್‌ಗೆ ವರ್ಗಾವಣೆ ಮಾಡಲಾಗಿ, ಈ ಮೊದಲು ನಿಗದಿಪಡಿಸಿದ್ದ ಒಂದು ಸರ್ವರ್ ಬದಲಾಗಿ ನಾಲ್ಕು ಸರ್ವರ್‌ಗಳನ್ನು ಇ-ಸ್ವತ್ತು ತಂತ್ರಾಂಶದ ನಿರ್ವಹಣೆಗಾಗಿ ನಿಗದಿಪಡಿಸಿ, ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಸಕಾಲದಲ್ಲಿ ಗ್ರಾಮ ಪಂಚಾಯತಿಗಳು ವಿತರಿಸುವಂತೆ ಕ್ರಮ ಕೈಗೊಳ್ಳಲಾಗಿದೆ.
(ಇ)	ಪಂಚಾಯಿತಿಗಳಲ್ಲಿ ಇ-ಸ್ವತ್ತು ಅರ್ಜಿ ಸ್ವೀಕರಿಸಲು ಮತ್ತು ಡಾಟಾ ಎಂಟ್ರಿಗಳನ್ನು ಮಾಡಲು ಸಿಬ್ಬಂದಿಗಳ ಕೊರತೆಯಿಂದಾಗಿ ಸಾರ್ವಜನಿಕರು ದಿನಗಟ್ಟಲೆ ಪಂಚಾಯಿತಿಗಳಿಗೆ ಅಲೆದಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿಲ್ಲ.
(ಈ)	ಹಾಗಿದ್ದಲ್ಲಿ ಅಗತ್ಯ ಸಿಬ್ಬಂದಿಗಳನ್ನು ಭರ್ತಿ ಮಾಡಿ ಈ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರದ ಮುಂದಿರುವ ಯೋಜನೆಗಳೇನು? (ವಿವರ ನೀಡುವುದು)	ಪ್ರತಿ ದಿನದ 24 ಗಂಟೆಗಳ ಅವಧಿಯಲ್ಲಿಯೂ ಗ್ರಾಮ ಪಂಚಾಯತಿಗಳ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಲಾಗಿನ್‌ನಲ್ಲಿ ಇ-ಸ್ವತ್ತು ಅರ್ಜಿ ಸ್ವೀಕೃತಿ ಮತ್ತು ಡಾಟಾ ಎಂಟ್ರಿಗಳನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸಂ. ಗ್ರಾಅಪ 135 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2826
ಸದಸ್ಯರ ಹೆಸರು : ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು)
ಉತ್ತರಿಸುವ ದಿನಾಂಕ : 17-03-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಹುಣಸೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ವಿದ್ಯುತ್ ದೀಪಗಳನ್ನು ಸರಿಯಾಗಿ ನಿರ್ವಹಣೆ ಮಾಡದೇ ಕೆಲವು ಗ್ರಾಮಗಳಲ್ಲಿ ಕತ್ತಲೆಯಲ್ಲಿಯೇ ಜನರು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿಲ್ಲ.
(ಆ)	ಬಂದಿದ್ದಲ್ಲಿ, ವಿದ್ಯುತ್ ದೀಪಗಳನ್ನು ಅಳವಡಿಸಲು ಮತ್ತು ಅವುಗಳ ಸಮರ್ಪಕ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರನ್ವಯ ಸಾಕಷ್ಟು ರಸ್ತೆ ದೀಪಗಳನ್ನು ಒದಗಿಸುವುದು ಗ್ರಾಮ ಪಂಚಾಯತಿಯ ಕಡ್ಡಾಯ ಪ್ರಕಾರ್ಯವಾಗಿರುತ್ತದೆ. ಗ್ರಾಮ ಪಂಚಾಯತಿ ಮಟ್ಟದಲ್ಲಿ ವಿದ್ಯುತ್ ಬೀದಿ ದೀಪಗಳನ್ನು ಅಳವಡಿಸಿ ನಿರ್ವಹಣೆ ಮಾಡಲಾಗುತ್ತಿದೆ.
(ಇ)	ಪ್ರತಿ ವರ್ಷ ವಿದ್ಯುತ್ ದೀಪಗಳ ಆಳವಡಿಕೆ ಮತ್ತು ನಿರ್ವಹಣೆಗಾಗಿ ಸರ್ಕಾರದಿಂದ ಪಂಚಾಯಿತಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗುತ್ತಿದೆ; (ವಿವರ ನೀಡುವುದು)	ವಿದ್ಯುತ್ ದೀಪಗಳ ಆಳವಡಿಕೆ ಮತ್ತು ನಿರ್ವಹಣೆಗಾಗಿ ಕೇಂದ್ರ ಸರ್ಕಾರದ 14 ಮತ್ತು 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಶೇ 10% ರಷ್ಟು ನಿಗದಿಪಡಿಸಲಾಗುತ್ತಿರುತ್ತದೆ. ಗ್ರಾಮ ಪಂಚಾಯತಿ ವರ್ಗ-1 ರಲ್ಲಿ ವಸೂಲಾತಿಯಾದ ಮೊತ್ತದಲ್ಲಿ ಶೇ 10 ರಷ್ಟು ಪಾವತಿಸಲು ಕ್ರಮ ವಹಿಸಲಾಗುತ್ತಿದೆ.
(ಈ)	ಪ್ರತಿ ಗ್ರಾಮಗಳಲ್ಲಿ ವಿದ್ಯುತ್ ದೀಪ ಅಳವಡಿಸಲು ಖರ್ಚಾಗುತ್ತಿರುವ ಹಣ ಎಷ್ಟು; ಯಾವ ಯಾವ ದೀಪಗಳಿಗೆ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ? (ವಿವರ ನೀಡುವುದು)	ಗ್ರಾಮ ಪಂಚಾಯತಿಯಲ್ಲಿ ನಡೆಯುವ ಗ್ರಾಮ ಸಭೆಗಳಲ್ಲಿ ಅವಶ್ಯಕತೆಗನುಗುಣವಾಗಿ ಗ್ರಾಮಗಳಿಗೆ ವಿದ್ಯುತ್ ದೀಪ ಖರೀದಿ / ಅಳವಡಿಕೆ ಬಗ್ಗೆ ತೀರ್ಮಾನ ತೆಗೆದುಕೊಂಡು ಸಾಮಾನ್ಯ ಸಭೆಯ ನಿರ್ಣಯದ ಮೇರೆಗೆ ಬೀದಿ ದೀಪ ಖರೀದಿಸಿ ಅಳವಡಿಸಲು ಕ್ರಮ ವಹಿಸಲಾಗುವುದು.

ಸಂ. ಗ್ರಾಅಪ 133 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2827
ಸದಸ್ಯರ ಹೆಸರು : ಶ್ರೀ ನಿರಂಜನ್ ಕುಮಾರ್ ಸಿ.ಎಸ್.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಗುಂಡ್ಲುಪೇಟೆ ತಾಲ್ಲೂಕಿನ ಗಡಿ ಭಾಗದ ಹಂಗಳ ಹೋಬಳಿ ಕೇಂದ್ರದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಇಲ್ಲದೇ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ	ಬಂದಿದ್ದಲ್ಲಿ, ಯಾವಾಗ ಬಸ್ ನಿಲ್ದಾಣ ನಿರ್ಮಾಣ ಮಾಡಲು ಅನುದಾನ ಮಂಜೂರು ಮಾಡಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	ಪ್ರಸ್ತುತ ಹಂಗಳ ಗ್ರಾಮ ಪಂಚಾಯಿತಿಗೆ ಸೇರಿದ ಅಸೆಸ್‌ಮೆಂಟ್ ಸಂಖ್ಯೆ: 11/12ರಲ್ಲಿ ಪೂರ್ವ-ಪಶ್ಚಿಮವಾಗಿ 99+45/2ಅಡಿ ಮತ್ತು ಉತ್ತರ-ದಕ್ಷಿಣವಾಗಿ 75+100/2 ಅಡಿ ಅಳತೆಯ ನಿವೇಶನವನ್ನು ಕ.ರಾ.ರ.ಸಾ.ನಿಗಮದ ಹೆಸರಿಗೆ ದಾಖಲೆಯಲ್ಲಿ ನಮೂದಿಸಲಾಗಿರುತ್ತದೆ. ಸದರಿ ನಿವೇಶನದ ನಿಖರವಾದ ಅಳತೆ ಮತ್ತು ಗಡಿಯನ್ನು ಗುರುತಿಸಿಕೊಡುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಲ್ಲಿ ಕೋರಲಾಗಿತ್ತು. ಅದರಂತೆ ಸ್ಥಳ ಪರಿಶೀಲನೆ ಸಂದರ್ಭದಲ್ಲಿ ಸ್ಥಳೀಯ ಸಾರ್ವಜನಿಕರು ಆಕ್ಷೇಪ ವ್ಯಕ್ತಪಡಿಸಿರುವುದು ಕಂಡುಬಂದ ಕಾರಣ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿಯ ಸಭೆಯಲ್ಲಿ ಚರ್ಚಿಸಿ, ತದನಂತರ ಸ್ಥಳ ಪರಿಶೀಲಿಸಿ ಅಳತೆ ಮತ್ತು ಗಡಿ/ಹದ್ದುಬಸ್ತನ್ನು ನಿಗದಿಪಡಿಸಿಕೊಡುವುದಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಸದರಿ ನಿವೇಶನದ ಅಳತೆ ಮತ್ತು ಗಡಿ/ಹದ್ದುಬಸ್ತನ್ನು ನಿಗದಿಪಡಿಸಿಕೊಡುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಲ್ಲಿ ಕೋರಲಾಗಿರುತ್ತದೆ. ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದ ಪಿಡುಗಿನಿಂದಾಗಿ ನಿಗಮವು ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಯಾವುದೇ ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳಲು ಕಷ್ಟಕರವಾಗಿರುವುದರಿಂದ, ನಿವೇಶನವು ಪೂರ್ಣಪ್ರಮಾಣದಲ್ಲಿ ನಿಗಮದ ವಶಕ್ಕೆ ಬಂದ ನಂತರ, ನಿಗಮವು ಹೊರಡಿಸಿರುವ ಸುತ್ತೋಲೆ ಸಂಖ್ಯೆ: 1/2015-16, ದಿನಾಂಕ 06-06-2015ರ ಮಾರ್ಗಸೂಚಿ ಪ್ರಕಾರ ಸಾರಿಗೆ ಅವಶ್ಯಕತೆ ಹಾಗೂ ನಿಗಮದ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ ಈ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಟಿಡಿ 118 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2835

ಸದಸ್ಯರ ಹೆಸರು : ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)

ಉತ್ತರಿಸುವ ಸಚಿವರು : ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸುವ ದಿನಾಂಕ : 17/03/2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	C.H.D ಯೋಜನೆಯಡಿ ಜಮಖಂಡಿ ಮತ ಕ್ಷೇತ್ರಕ್ಕೆ ಹೆಚ್ಚುವರಿಯಾಗಿ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	C.H.D ಯೋಜನೆಯಡಿ ಜಮಖಂಡಿ ಮತ ಕ್ಷೇತ್ರಕ್ಕೆ ಹೆಚ್ಚುವರಿಯಾಗಿ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.
ಆ)	ಹಾಗಿದ್ದಲ್ಲಿ, ಜಮಖಂಡಿ ಮತ ಕ್ಷೇತ್ರದಲ್ಲಿ ದ್ರಾಕ್ಷಿ & ದಾಳಿಂಬೆ ಹೆಚ್ಚಾಗಿ ಬೆಳೆಯುತ್ತಿದ್ದು ಇಲ್ಲಿನ ರೈತರಿಗೆ ಅನುಕೂಲವಾಗುವಂತೆ C.H.D ಯೋಜನೆಯಡಿ ಹೆಚ್ಚುವರಿ ಅನುದಾನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	

ಸಂಖ್ಯೆ: HORTI 162 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2836
2)	ಸದಸ್ಯರ ಹೆಸರು	:	ಶ್ರೀ. ಜ್ಯೋತಿ ಗಣೇಶ್ ಜಿ.ಬಿ
3)	ಉತ್ತರಿಸಬೇಕಾದ ದಿನಾಂಕ	:	17.03.2021
4)	ಉತ್ತರಿಸುವವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	ತುಮಕೂರು ನಗರ ಬಡ್ಡಿಹಳ್ಳಿ ಸಮೀಪದ ರೈಲ್ವೆ ಲೇವೆಲ್ ಕ್ರಾಸಿಂಗ್ ನಂ.38 ಮತ್ತು ಒಟವಾಡಿ ಖಾದರ್‌ನಗರ ಸಮೀಪದ ರೈಲ್ವೆ ಕ್ರಾಸಿಂಗ್ ನಂ.39 ರಲ್ಲಿ ಇತ್ತೀಚಿನ ಸರ್ವೆ ಪ್ರಕಾರ 1.00 ಲಕ್ಷ ಟಿ.ವಿ.ಯು ವಾಹನ ಸಂಚಾರ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಈ ರೈಲ್ವೆ ಲೆವಲ್ ಕ್ರಾಸಿಂಗ್ ಗೇಟ್‌ಗಳ ಟ್ರೈನ್ ವೆಹಿಕಲ್ ಯುನಿಟ್ ಎಣಿಕೆ ಒಂದು ಲಕ್ಷಕ್ಕಿಂತ ಅಧಿಕವಿದ್ದು, ಇದರ ಬದಲಿಗೆ ರಸ್ತೆ ಮೇಲ್ಸೇತುವೆಗಳನ್ನು ನಿರ್ಮಿಸಲು ಶೇ. 50%ರಷ್ಟು ಅನುದಾನವನ್ನು ಒದಗಿಸಲು ಕೋರಿ ರಾಜ್ಯ ಸರ್ಕಾರಕ್ಕೆ ನೈರುತ್ಯ ರೈಲ್ವೆ ಇಲಾಖೆಯು ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಇದೇ ರೀತಿಯ 120 ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿದೆ.
ಆ	ಬಂದಿದ್ದಲ್ಲಿ, ಭೀಮಸಂದ್ರ ಗ್ರಾಮದ ಹತ್ತಿರ ಕಿರು ಕೆಳ ಸೇತುವೆ ನಿರ್ಮಾಣವಾಗದೆ ಕಿರು ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು?	ಇಲ್ಲ. ಉದ್ಭವಿಸುವುದಿಲ್ಲ.

ಸಂಖ್ಯೆ: ಮೂಅಇ 62 ರಾರಾಹೆ 2021/ಇ

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **2839**

ಸದಸ್ಯರ ಹೆಸರು : ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	2019-20ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾದಂತೆ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗಾಗಿ ಗುಂಪು ವಿಮೆ ಸೌಲಭ್ಯ, ಪೆಟ್ರೋಲ್ ಆಟೋಗಳನ್ನು ಎಲೆಕ್ಟ್ರಿಕ್ ಆಟೋಗಳಾಗಿ ಪರಿವರ್ತಿಸಲು ಸಾರಿಗೆ ಇಲಾಖೆಯ ಮೂಲಕ ರೂ.30.00 ಕೋಟಿ ಸಹಾಯಧನ ಹಾಗೂ ಬೆಂಗಳೂರಿನ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ರೂ.50.00 ಕೋಟಿ ವೆಚ್ಚದಲ್ಲಿ ಸಾರಥಿ ಸೂರು ಯೋಜನೆ ಅನುಷ್ಠಾನಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ;	2019-20ನೇ ಸಾಲಿನ ಆಯವ್ಯಯದಲ್ಲಿ ಘೋಷಣೆಯಾದಂತೆ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗಾಗಿ ಗುಂಪು ವಿಮೆ ಸೌಲಭ್ಯವನ್ನು ಕಾರ್ಮಿಕ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. 2019-20ನೇ ಸಾಲಿನಲ್ಲಿ ಪೆಟ್ರೋಲ್ ಆಟೋಗಳನ್ನು ಎಲೆಕ್ಟ್ರಿಕ್ ಆಟೋಗಳಾಗಿ ಪರಿವರ್ತಿಸಲು ಸಾರಿಗೆ ಇಲಾಖೆಯ ಮೂಲಕ ರೂ.30.00 ಕೋಟಿ ಸಹಾಯಧನ ನೀಡುವ ಯೋಜನೆಯನ್ನು ಕೈಬಿಡಲಾಗಿರುತ್ತದೆ. "ಸರ್ವರಿಗೂ ಸೂರು" ಎಂಬ ಸರ್ಕಾರದ ಧ್ಯೇಯವನ್ನು ರಾಜೀವ್ ಗಾಂಧಿ ವಸತಿ ನಿಗಮದಿಂದ ಕೇಂದ್ರ ಪುರಸ್ಕೃತ ಸರ್ವರಿಗೂ ಸೂರು - ಪ್ರಧಾನ ಮಂತ್ರಿ ಅವಾಸ್ ಯೋಜನೆ (ನಗರ) ಯನ್ನು ಕಾರ್ಯಗತಗೊಳಿಸಲಾಗುತ್ತಿದೆ.
(ಆ)	ವಿವಿಧ ವಲಯಗಳ ಚಾಲಕರ ಸೇವೆ ಗುರುತಿಸಲು ಎಲ್ಲಾ ಜಿಲ್ಲೆಗಳಲ್ಲಿ ಚಾಲಕರ ದಿನಾಚರಣೆ, ಪ್ರಮಾಣಿಕ ಹಾಗೂ ಅಪಘಾತ ರಹಿತ ವಾಹನ ಚಾಲನೆ ಮಾಡಿದ ಪ್ರತಿ ಜಿಲ್ಲೆಯ ತಲಾ 10 ಚಾಲಕರಿಗೆ ತಲಾ ರೂ.25,000/-ಗಳ ಪುರಸ್ಕಾರ ಘೋಷಣೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ? (ವಿವರ ನೀಡುವುದು)	ರಾಜ್ಯದಲ್ಲಿರುವ ವಿವಿಧ ವಲಯದಲ್ಲಿ ಪ್ರಾಮಾಣಿಕವಾಗಿ ಮತ್ತು ಅಪಘಾತ ರಹಿತವಾಗಿ ಸೇವೆ ಸಲ್ಲಿಸಿರುವ (1) ಮ್ಯಾಕ್ಸಿ ಕ್ಯಾಬ್ (2) ಬಸ್ (3) ಸರಕು ಸಾಗಣಿ ವಾಹನ (4) ಟ್ಯಾಕ್ಸಿ ಮತ್ತು (5) ಆಟೋರಿಕ್ಷಾ ಇವುಗಳಲ್ಲಿ ಇಬ್ಬರು ಚಾಲಕರ ಉತ್ತಮ ಸೇವೆಯನ್ನು ನಿಗಧಿಪಡಿಸಿರುವ ಮಾನದಂಡಗಳಂತೆ ಗುರುತಿಸಿ, ಪ್ರತಿ ಜಿಲ್ಲೆಗೆ 10 ಚಾಲಕರಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತಿಯೊಬ್ಬರಿಗೂ ರೂ.25,000/-ಗಳ ಪುರಸ್ಕಾರವನ್ನು ಸೂಕ್ತ ದಿನಾಂಕದಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಗಳು ಚಾಲಕರ ದಿನಾಚರಣೆಯನ್ನು ಆಚರಿಸಿ ಯೋಜನೆಯನ್ನು ಜಾರಿಗೊಳಿಸಲು ಅನುಮೋದನೆ ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಟಿಡಿ 44 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2846
ಸದಸ್ಯರ ಹೆಸರು	:	ಡಾ: ಅವಿನಾಶ್ ಉಮೇಶ್ ಜಾಧವ್ (ಚಿಂಚೋಳಿ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	17-03-2021

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಕಲಬುರಗಿ ಜಿಲ್ಲೆಯ ಚಿಂಚೋಳಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ; ಇವುಗಳಲ್ಲಿ ಬಾಡಿಗೆ ಹಾಗೂ ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು;	ಕಲಬುರಗಿ ಜಿಲ್ಲೆಯ ಚಿಂಚೋಳಿ ಮತಕ್ಷೇತ್ರ ವ್ಯಾಪ್ತಿಯಲ್ಲಿ 386 ಅಂಗನವಾಡಿ ಕೇಂದ್ರಗಳಿವೆ. ಈ ಪೈಕಿ 335 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 42 ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ.
ಆ.	ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಪಾವತಿಸುತ್ತಿರುವ ವಾರ್ಷಿಕವಾರು ಬಾಡಿಗೆ ಮೊತ್ತ ಎಷ್ಟು;	ಕೇಂದ್ರ ಸರ್ಕಾರದ ಪತ್ರ ಸಂಖ್ಯೆ11-36/2016-CD.I,ದಿನಾಂಕ 23.11.2017 ರನ್ವಯ ಗ್ರಾಮೀಣ ಮತ್ತು ಗುಡ್ಡಗಾಡು ಪ್ರದೇಶದ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಮಾಹೆಯಾನ ರೂ.1000/- ರಂತೆ, ವಾರ್ಷಿಕವಾರು ರೂ. 12000/- ಗಳನ್ನು ಪಾವತಿಸಲಾಗುತ್ತಿದೆ. ನಗರ ಪ್ರದೇಶದ ಅಂಗನವಾಡಿ ಕೇಂದ್ರಗಳಿಗೆ ಮಾಹೆಯಾನ ರೂ.4,000/- ರಂತೆ ವಾರ್ಷಿಕವಾರು ರೂ.48000/- ಗಳನ್ನು ಪಾವತಿಸಲಾಗುತ್ತಿದೆ. ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಮಾಹೆಯಾನ ರೂ. 6,000/- ರಂತೆ ವಾರ್ಷಿಕವಾರು ರೂ.72,000/- ಗಳನ್ನು ಪಾವತಿಸಲಾಗುತ್ತಿದೆ.
ಇ.	ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಇಲ್ಲಿಯವರೆಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಈ ಉದ್ದೇಶಕ್ಕಾಗಿ ಬಿಡುಗಡೆ ಮಾಡಿರುವ ಹಣ ಎಷ್ಟು? (ಸಂಪೂರ್ಣ ಮಾಹಿತಿ ಒದಗಿಸುವುದು)	ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ವಿಶೇಷ ಅಭಿವೃದ್ಧಿ ಯೋಜನೆಯಡಿ ಈ ಕೆಳಗಿನಂತೆ ಅನುದಾನ ಬಿಡುಗಡೆಯಾಗಿದೆ. (ಕೆಳಗಿನ ಕೋಷ್ಟಕ ನೋಡಿ) ನಿವೇಶನ ಹಾಗೂ ಅನುದಾನದ ಲಭ್ಯತೆಗೆ ಅನುಗುಣವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಕ್ರಸಂ.	ವರ್ಷ	ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)	ಕಟ್ಟಡಗಳ ಸಂಖ್ಯೆ
1.	2018-19	36.00	02
2.	2019-20	36.00	02
3.	2020-21	5.00	01
	ಒಟ್ಟು	77.00	05

ಸಂಖ್ಯೆ: ಮಮಇ 109 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2847
ಸದಸ್ಯರ ಹೆಸರು	ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ)
ಉತ್ತರಿಸಬೇಕಾದ ದಿನಾಂಕ	17.03.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	2019-20ನೇ ಸಾಲಿನಲ್ಲಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ 3054 ಲೆಕ್ಕ ಶೀರ್ಷಿಕೆಯಡಿ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು;	2019-20ನೇ ಸಾಲಿನಲ್ಲಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ 3054 ಲೆಕ್ಕ ಶೀರ್ಷಿಕೆಯಡಿ ಬಿಡುಗಡೆ ಮಾಡಲಾಗಿರುವ ಅನುದಾನದ ವಿವರ ಕೆಳಕಂಡಂತಿದೆ: (see table below)
ಆ.	2020-21ನೇ ಸಾಲಿನಲ್ಲಿ ಈ ಕ್ಷೇತ್ರಕ್ಕೆ 3054-ಟಾಸ್ಕ್‌ಫೋರ್ಸ್ ಶಾಸಕರ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ; ಬಿಡುಗಡೆ ಮಾಡಿದ್ದಲ್ಲಿ ಎಷ್ಟು ಹಣವನ್ನು ಒದಗಿಸಲಾಗಿದೆ;	• 2019-20ನೇ ಸಾಲಿನಲ್ಲಿ ಅನುಮೋದನೆಗೊಂಡ ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳ ಬಾಕಿ ಬಿಲ್ಲುಗಳ ಪಾವತಿಗಾಗಿ ಲೆ.ಶೀ. 3054-ಟಾಸ್ಕ್‌ಫೋರ್ಸ್ ರಡಿ ರೂ.273.00 ಲಕ್ಷಗಳನ್ನು 2020-21 ನೇ ಬಿಡುಗಡೆ ಮಾಡಿದೆ. • ಈ ಪೈಕಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ರೂ.64.63 ಲಕ್ಷಗಳು ಬಿಡುಗಡೆ ಗೊಂಡಿದ್ದು, ಪೂರ್ಣ ಪ್ರಮಾಣದಲ್ಲಿ ವೆಚ್ಚ ಭರಿಸಲಾಗುತ್ತಿದೆ. • 2020-21ನೇ ಸಾಲಿನಲ್ಲಿ ಲೆ.ಶೀ: 3054 ಲಿಂಕ್ ಡಾಕ್ಯೂಮೆಂಟ್ ರಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ರೂ.153.34 ಲಕ್ಷಗಳನ್ನು ಹಂಚಿಕೆ ಮಾಡಿದ್ದು, ಈ ಪೈಕಿ ಹೊಸಕೋಟೆ ತಾಲ್ಲೂಕಿಗೆ ಮಂಜೂರಾತಿ ನೀಡಿರುವ ರೂ.35.62 ಲಕ್ಷಗಳು ಒಳಗೊಂಡಿದೆ. ಇದರಲ್ಲಿ ರೂ.61.34 ಲಕ್ಷಗಳ ಅನುದಾನವನ್ನು (ಶೇ.40%) ಬಿಡುಗಡೆ ಮಾಡಿದೆ.
ಇ.	ಮೇಲ್ಕಾಣಿಸಿದ ಶೀರ್ಷಿಕೆಯಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮೂರು ತಾಲ್ಲೂಕುಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದ್ದು, ಹೊಸಕೋಟೆಗೆ ಬಿಡುಗಡೆ ಮಾಡದಿರಲು ಕಾರಣಗಳೇನು? (ವಿವರ ನೀಡುವುದು)	

ಕ್ರಸ	ಯೋಜನೆ / ಲೆ.ಶೀ	ಬಿಡುಗಡೆ ಮಾಡಲಾದ ಮೊತ್ತ (ರೂ.ಲಕ್ಷಗಳಲ್ಲಿ)
1	3054 ಸಿಎಂಜಿಎಸ್‌ವೈ	107.08
2	3054 ಸಿಎಂಜಿಎಸ್‌ವೈ ನರೇಗಾ ಒಗ್ಗೂಡಿಸುವಿಕೆ	8.92
3	ಗ್ರಾಮೀಣ ರಸ್ತೆ ನಿರ್ವಹಣೆ (ಟಾಸ್ಕ್‌ಫೋರ್ಸ್)	0.00
	ಒಟ್ಟು	116.00

ಕಡತ ಸಂಖ್ಯೆ: ಗ್ರಾಅಪ:ಅಧಿ-15-9/31:ಆರ್‌ಆರ್‌ಸಿ:2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2852

ಸದಸ್ಯರ ಹೆಸರು : ಶ್ರೀ ಅಶೋಕ್ ನಾಯಕ್ ಕೆ.ಬಿ. (ಶಿವಮೊಗ್ಗ ಗ್ರಾಮಾಂತರ)

ಉತ್ತರಿಸಬೇಕಾದ ದಿನಾಂಕ : 17-03-2021.

ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2018-19ನೇ ಸಾಲಿನಿಂದ ಇಲ್ಲಿಯವರೆಗೆ ಅಲ್ಪಸಂಖ್ಯಾತ ಕಾಲೋನಿ ಅಭಿವೃದ್ಧಿಗೆ ಮಂಜೂರಾದ ಅನುದಾನವೆಷ್ಟು; (ವರ್ಷವಾರು ಮಾಹಿತಿ ನೀಡುವುದು)	ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2018-19ನೇ ಸಾಲಿನಿಂದ ಇಲ್ಲಿಯವರೆಗೆ ಅಲ್ಪಸಂಖ್ಯಾತ ಕಾಲೋನಿ ಅಭಿವೃದ್ಧಿಗೆ ಮಂಜೂರಾದ ಅನುದಾನದ ವಿವರ ಈ ಕೆಳಕಂಡಂತಿದೆ: (see table below)
ಆ	ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಕಾಮಗಾರಿ ಅಪೂರ್ಣವಾಗಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)	ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ.
ಇ	ಈ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಕಾಲೋನಿಗಳನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವಾಗ ಅನುದಾನ ಮಂಜೂರು ಮಾಡಲಾಗುವುದು?	2020-21 ನೇ ಸಾಲಿನ ಆಯವ್ಯಯದಲ್ಲಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಬರುವ ಅಧಿಸೂಚಿತವಲ್ಲದ ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿಪಡಿಸುವ ಸಲುವಾಗಿ ಮಾತ್ರ ಅನುದಾನ ಬಿಡುಗಡೆ ಮಾಡಿರುವುದರಿಂದ ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಲು ಅವಕಾಶವಿರುವುದಿಲ್ಲ.

ಕ್ರ.ಸಂ	ವರ್ಷ	ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ)
1	2018-19	475.00
2	2019-20	-
3	2020-21	-

ಸಂಖ್ಯೆ: MWD 120 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2855
ಸದಸ್ಯರ ಹೆಸರು	:	ಶ್ರೀ ಸುಬ್ಬಾರೆಡ್ಡಿ ಎಸ್.ಎನ್.(ಬಾಗೇಪಲ್ಲಿ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	17/03/2021

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ಐ.ಸಿ.ಡಿ.ಎಸ್. ಯೋಜನೆಯಡಿ ಗರ್ಭಿಣಿಯರಿಗೆ ಯಾವ ಯಾವ ಆಹಾರ ಪದಾರ್ಥಗಳನ್ನು ವಿತರಣೆ ಮಾಡಲಾಗುತ್ತಿದೆ; (ಆಹಾರ ಪದಾರ್ಥಗಳ ವಿವರ ನೀಡುವುದು.)	ರಾಜ್ಯದಲ್ಲಿ ಐ.ಸಿ.ಡಿ.ಎಸ್. ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಗರ್ಭಿಣಿಯರಿಗೆ ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಮಾತೃಪೂರ್ಣ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ನೀಡಲಾಗುತ್ತಿದ್ದ ಬಿಸಿಯೂಟದ ಬದಲಾಗಿ ಆಹಾರ ಸಾಮಗ್ರಿಗಳಾದ ಅಕ್ಕಿ, ತೊಗರಿಬೇಳೆ, ಶೇಂಗಾಬೀಜ, ಹೆಸರುಕಾಳು, ಹಾಲಿನ ಪುಡಿ, ಬೆಲ್ಲ, ಸಕ್ಕರೆ, ಮೊಟ್ಟೆಯನ್ನು ಅವರವರ ಮನೆ ಬಾಗಿಲಿಗೆ (THR) ವಿತರಿಸಲಾಗುತ್ತಿದೆ.
ಆ.	ಈ ಎಲ್ಲಾ ಆಹಾರ ಪದಾರ್ಥಗಳನ್ನು ಬಿಡಿ ಬಿಡಿಯಾಗಿ ವಿತರಣೆ ಮಾಡಲಾಗುತ್ತಿದೆಯೇ; ಅಥವಾ ಒಂದೇ ಪ್ಯಾಕೇಟ್‌ನಲ್ಲಿ ವಿತರಣೆ ಮಾಡಲಾಗುತ್ತಿದೆಯೇ; (ವಿವರ ನೀಡುವುದು.)	ಎಲ್ಲಾ ಆಹಾರ ಪದಾರ್ಥಗಳನ್ನು ಪ್ರತ್ಯೇಕವಾಗಿ ಪ್ಯಾಕೆಟ್ ಮಾಡಿ ಸದರಿ ಎಲ್ಲಾ ಪ್ಯಾಕೇಟ್‌ಗಳನ್ನು ಒಟ್ಟಾರೆಯಾಗಿ ಮಾಸ್ಟರ್ ಪ್ಯಾಕೇಟ್ ಮಾಡಿ ಒಂದೇ ಪ್ಯಾಕೇಟ್ ಮೂಲಕ ವಿತರಣೆ ಮಾಡಲಾಗುತ್ತಿದೆ.
ಇ.	ಈ ಯೋಜನೆಯಡಿ ಮೊಟ್ಟೆ ವಿತರಣೆ ಮಾಡಲಾಗುತ್ತಿದೆಯೇ; ಇದ್ದಲ್ಲಿ ಎಷ್ಟು ಮೊಟ್ಟೆಗಳನ್ನು ಯಾವ ರೀತಿ ಖರೀದಿ ಮಾಡಲಾಗುತ್ತಿದೆ; (ವಿವರ ನೀಡುವುದು.)	ಮಾತೃಪೂರ್ಣ ಯೋಜನೆಯಡಿ ಪ್ರತೀ ಫಲಾನುಭವಿಗೆ ತಿಂಗಳಿಗೆ 25 ಮೊಟ್ಟೆಗಳನ್ನು ನೀಡಲಾಗುತ್ತಿದ್ದು, ಗರ್ಭಿಣಿಯರಿಗೆ ವಿತರಿಸುವ ಕೋಳಿಮೊಟ್ಟೆಗೆ ಹಣ ಬಿಡುಗಡೆಗೊಳಿಸಿ ಬಾಲವಿಕಾಸ ಸಮಿತಿ ಜಂಟಿ ಖಾತೆಗೆ ಜಮೆ ಮಾಡಿ ಸ್ಥಳೀಯವಾಗಿ ಮೊಟ್ಟೆ ಖರೀದಿಸಿ ಫಲಾನುಭವಿಗಳಿಗೆ ವಿತರಿಸಲಾಗುತ್ತಿದೆ.
ಈ.	ಮೊಟ್ಟೆ ಖರೀದಿ ಮಾಡಿದ ನಂತರ ಕಾರ್ಯಕರ್ತೆಯರಿಗೆ ಎಷ್ಟು ದಿನದ ನಂತರ ಹಣ ಪಾವತಿಸಲಾಗುತ್ತಿದೆ ?	ಅಂಗನವಾಡಿ ಕೇಂದ್ರಗಳಲ್ಲಿ ವಿತರಿಸುವ ಕೋಳಿಮೊಟ್ಟೆ ಖರೀದಿಗೆ ಸಂಬಂಧಿಸಿದಂತೆ ಪ್ರತಿ ತ್ರೈಮಾಸಿಕದ ಅಂತ್ಯಕ್ಕೆ ಅನುದಾನವನ್ನು ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಗಳ ಮೂಲಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ಬಿಡುಗಡೆಗೊಳಿಸಲಾಗುತ್ತಿದೆ. ನಂತರ ಸದರಿ ಅನುದಾನವನ್ನು ಫಲಾನುಭವಿಗಳಿಗೆ ಮೊಟ್ಟೆ ಖರೀದಿಸಲು ಬಾಲವಿಕಾಸ ಸಮಿತಿಯ ಜಂಟಿ ಖಾತೆಗೆ ಜಮ ಮಾಡಲಾಗುತ್ತಿದೆ. ಖಜಾನೆ-2ರಡಿಯಲ್ಲಿ ಮುಂಗಡವಾಗಿ ಹಣ ಪಾವತಿಗೆ ಅವಕಾಶವಿರುವುದಿಲ್ಲ.

ಸಂಖ್ಯೆ: ಮಮಇ 108 ಐಸಿಡಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ವಿಧಾನ ಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2856
2)	ಸದಸ್ಯರ ಹೆಸರು	:	ಶ್ರೀ. ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ)
3)	ಉತ್ತರಿಸಬೇಕಾದ ದಿನಾಂಕ	:	17.03.2021
4)	ಉತ್ತರಿಸುವವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	ಬೆಂಗಳೂರು –ಬಾಗೇಪಲ್ಲಿ –ಪುಟ್ಟಪರ್ತಿ ರೈಲು ಮಾರ್ಗ ಪ್ರಾರಂಭಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ;	ಬೆಂಗಳೂರು –ಬಾಗೇಪಲ್ಲಿ –ಪುಟ್ಟಪರ್ತಿ ರೈಲು ಮಾರ್ಗದ ಯೋಜನೆಯು ಕೇಂದ್ರ ಮಂತ್ರಾಲಯದಲ್ಲಿ 2013–14ನೇ ಸಾಲಿನಲ್ಲಿ ಮಂಜೂರಾಗಿದ್ದು, ಕೇಂದ್ರದ ಆರ್ಥಿಕ ವ್ಯವಹಾರಗಳ ಕ್ಯಾಬಿನೆಟ್ ಸಮಿತಿ (CCEA) ಅನುಮೋದನೆಯನ್ನು ನೀಡಿರುವುದಿಲ್ಲ.
ಆ	ಸಲ್ಲಿಸಿದ್ದಲ್ಲಿ, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ;	ಉದ್ಭವಿಸುವುದಿಲ್ಲ.
ಇ)	ಈ ರೈಲು ಮಾರ್ಗಕ್ಕಾಗಿ ಭೂಸ್ವಾಧೀನ ಕಾರ್ಯಕ್ಕೆ ಸರ್ವೆ ನಂಬರುಗಳನ್ನು ಗುರುತಿಸಲಾಗಿದೆಯೇ; ಇದ್ದಲ್ಲಿ, ಭೂಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ? (ಪೂರ್ಣ ವಿವರ ನೀಡುವುದು)	ಉದ್ಭವಿಸುವುದಿಲ್ಲ.

ಸಂಖ್ಯೆ: ಮೂಅಇ 63 ರಾರಾಹೆ 2021/ಇ

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2859

ವಿಧಾನಸಭೆ ಸದಸ್ಯರ ಹೆಸರು : ಶ್ರೀ. ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗಾ)

ಉತ್ತರಿಸುವ ಸಚಿವರು : ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರಸಂ	ಪ್ರಶ್ನೆ	ಉತ್ತರ
ಅ)	ತೋಟಗಾರಿಕೆಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಸಲುವಾಗಿ ಪ್ರತ್ಯೇಕವಾಗಿ ತೋಟಗಾರಿಕೆ ಮಾರುಕಟ್ಟೆಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ;	ಹೌದು
ಆ	ತೋಟಗಾರಿಕೆ ಇಲಾಖೆಯ ಕೃಷಿ ಹೊಂಡ, ಸಂಸ್ಕರಣೆ ಘಟಕ, ನೆರಳು ಪರದೆ ಯೋಜನೆಗಳಲ್ಲಿ, ಸಾಮಾನ್ಯ ವರ್ಗದವರಿಗೆ ಸಹಾಯಧನವನ್ನು ಶೇಕಡಾ 50 ರಿಂದ 75 ಕ್ಕೆ ಹೆಚ್ಚಿಸುವ ಉದ್ದೇಶ ಸರ್ಕಾರಕ್ಕಿದೆಯೇ;	ತೋಟಗಾರಿಕೆ ಇಲಾಖೆಯ ಯೋಜನೆಗಳಲ್ಲಿ, ಕೃಷಿ ಹೊಂಡ, ಸಂಸ್ಕರಣೆ ಘಟಕ, ನೆರಳು ಪರದೆ ಸಂಬಂಧಿಸಿದಂತೆ ಸಾಮಾನ್ಯ ವರ್ಗದವರಿಗೆ ಸಹಾಯಧನವನ್ನು ಶೇಕಡಾ 50 ರಿಂದ 75 ಕ್ಕೆ ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇಲ್ಲ.
ಇ	ತೋಟಗಾರಿಕೆಯಲ್ಲಿ ಸಂಸ್ಕರಣಾ ಘಟಕಗಳಿಗೆ ಹಾಗೂ ಸಂಯೋಜಿತ ತೋಟಗಾರಿಕೆ ಕೃಷಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವಲ್ಲಿ ಸರ್ಕಾರ ರೂಪಿಸಿಕೊಂಡ ಯೋಜನೆಗಳಾವುವು?	ತೋಟಗಾರಿಕೆಯಲ್ಲಿ ಸಂಸ್ಕರಣಾ ಘಟಕಗಳಿಗೆ ಹಾಗೂ ಸಂಯೋಜಿತ ತೋಟಗಾರಿಕೆ ಕೃಷಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವಲ್ಲಿ ಸರ್ಕಾರ ರೂಪಿಸಿಕೊಂಡ ಯೋಜನೆಗಳು ಈ ಕೆಳಕಂಡಂತಿದೆ. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ** "Incentives for Post-Harvest Management Activities" ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಘಟಕ ಸ್ಥಾಪನೆಗೆ ಘಟಕ ವೆಚ್ಚ ರೂ.200.00 ಲಕ್ಷಗಳಿಗೆ ಶೇ.25 ರಂತೆ ಗರಿಷ್ಠ ರೂ. 50.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತಿದೆ. **ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ** ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಘಟಕ ವೆಚ್ಚ ರೂ.25.00 ಲಕ್ಷಗಳಿಗೆ ಶೇ.40 ರಂತೆ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನ ನೀಡಲಾಗುತ್ತಿದೆ. ಸಂಯೋಜಿತ ತೋಟಗಾರಿಕೆ ಕೃಷಿಗಾಗಿ ಹನಿ ನೀರಾವರಿ ಅಳವಡಿಸಲು, ಪ್ರದೇಶ ವಿಸ್ತರಣೆ, ಕೃಷಿ ಹೊಂಡ, ಪಾಲಿಮನೆ ನಿರ್ಮಾಣ, ಸಮಗ್ರ ಕೀಟ ಮತ್ತು ರೋಗ ನಿಯಂತ್ರಣ, ಪುನಶ್ಚೇತನ, ಯಾಂತ್ರೀಕರಣ, ಪ್ಯಾಕ್ ಹೌಸ್, ಕೋಲ್ಡ್ ಸ್ಟೋರೇಜ್ ಮತ್ತು ಇನ್ನಿತರೆ ಕಾರ್ಯಕ್ರಮಗಳಡಿ ರೈತರಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ.

ಸಂಖ್ಯೆ: HORTI 164 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2862
ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸುವ ದಿನಾಂಕ : 17-03-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಬೆಳಗಾವಿ ಜಿಲ್ಲೆ, ಬೈಲಹೊಂಗಲ ಮತ ಕ್ಷೇತ್ರದಲ್ಲಿ ಬರುವ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮ ಪಂಚಾಯಿತಿ ಕಟ್ಟಡವು ತೀರಾ ಹಳೆಯ ಕಟ್ಟಡವಾಗಿದ್ದು, ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿ ಬರುವ ಸವದತ್ತಿ ತಾಲೂಕಿನ ಮುರಗೋಡ ಗ್ರಾಮ ಪಂಚಾಯತಿಯು ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.
(ಆ)	ಸದರಿ ಗ್ರಾಮ ಪಂಚಾಯಿತಿ ಕಟ್ಟಡ ದುರಸ್ತಿ ಮಾಡುವಂತೆ ಕೋರಿ ಜನಪ್ರತಿನಿಧಿಗಳು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವಲ್ಲವೇ;	ನಿಜ. ಮಾನ್ಯ ಶಾಸಕರು ದಿನಾಂಕ:06-02-2019 ರಂದು ಮುರಗೋಡ ಗ್ರಾಮ ಪಂಚಾಯತಿಯ ಕಟ್ಟಡ ದುರಸ್ತಿ ಮಾಡಲು ಅನುದಾನ ಕೋರಿ ಸರ್ಕಾರಕ್ಕೆ ಪತ್ರ ಬರೆದಿರುತ್ತಾರೆ.
(ಇ)	ಮುರಗೋಡ ಗ್ರಾಮ ಪಂಚಾಯಿತಿ ಕಟ್ಟಡ ದುರಸ್ತಿ ಮಾಡಲು ಎಷ್ಟು ಅನುದಾನದ ಅಗತ್ಯವಿದೆ; ಈ ಕುರಿತು ಅಂದಾಜು ಪಟ್ಟಿ ತಯಾರಿಸಲಾಗಿದೆಯೇ; ಮಂಜೂರು ಮಾಡಲಾದ ಅನುದಾನವೆಷ್ಟು;	ಮುರಗೋಡ ಗ್ರಾಮ ಪಂಚಾಯತಿ ಕಟ್ಟಡ ದುರಸ್ತಿಗೆ ರೂ.50.00 ಲಕ್ಷ ಅನುದಾನ ಅಗತ್ಯವಿದ್ದು ರೂ 50.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆ. ಸರ್ಕಾರದಿಂದ ಸದರಿ ಗ್ರಾಮ ಪಂಚಾಯತಿ ಕಟ್ಟಡ ದುರಸ್ತಿ/ನಿರ್ಮಾಣ/ನಿರ್ವಹಣೆಗೆ ರೂ.20.00 ಲಕ್ಷ ಅನುದಾನ ಬಿಡುಗಡೆಯಾಗಿರುತ್ತದೆ.
(ಈ)	ಪ್ರಸ್ತುತ ಮಂಜೂರು ಮಾಡಲಾದ ಅನುದಾನದಲ್ಲಿ ಕಟ್ಟಡವನ್ನು ಪೂರ್ಣ ಪ್ರಮಾಣದಲ್ಲಿ ದುರಸ್ತಿ ಮಾಡಲು ಆಗದಿರುವುದರಿಂದ ಇದಕ್ಕೆ ಬೇಕಾಗುವ ಪೂರ್ಣ ಪ್ರಮಾಣದ ಅನುದಾನ ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?	ಇಲ್ಲ.

ಸಂ. ಗ್ರಾಅಪ 132 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2864
ಸದಸ್ಯರ ಹೆಸರು : ಶ್ರೀ ರಘುಪತಿ ಭಟ್ ಕೆ.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ. ಸಂ	ಪ್ರಶ್ನೆ	ಉತ್ತರಗಳು
ಅ)	ಕೋವಿಡ್-19 ಪೂರ್ವದಲ್ಲಿ ಉಡುಪಿಯ ಗ್ರಾಮೀಣ ಭಾಗಗಳಲ್ಲಿ ಸಂಚರಿಸುತ್ತಿದ್ದ ನರ್ಮ್ ಬಸ್ಸುಗಳನ್ನು ಪುನರಾರಂಭಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೋವಿಡ್-19ರ ಪೂರ್ವದಲ್ಲಿ ಉಡುಪಿ ನಗರ ಹಾಗೂ ಗ್ರಾಮೀಣ ಭಾಗಗಳಿಗೆ ಕ.ರಾ.ರ.ಸಾ.ನಿಗಮದ ಉಡುಪಿ ಘಟಕದಿಂದ 28 ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿತ್ತು. ಕೋವಿಡ್-19ರ ಹಿನ್ನೆಲೆಯಲ್ಲಿ ನಿಗಮದ ಸಾರಿಗೆಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾದ ಪರಿಣಾಮವಾಗಿ ಹಾಗೂ ಜನದಟ್ಟಣೆ ವಿರಳವಾಗಿದ್ದರಿಂದ ನಗರ ಸಾರಿಗೆಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು.
ಆ)	ಗ್ರಾಮೀಣ ಭಾಗಗಳಲ್ಲಿ ಈ ಹಿಂದೆ ಸಂಚರಿಸುತ್ತಿದ್ದ ನರ್ಮ್ ಬಸ್ಸುಗಳಿಗೆ ಬೇಡಿಕೆ ಇರುವುದನ್ನು ಗಮನಿಸಲಾಗಿದೆಯೇ;	ಪ್ರಸ್ತುತ ಉಡುಪಿ ನಗರ ಹಾಗೂ ಗ್ರಾಮೀಣ ಭಾಗಗಳಲ್ಲಿನ ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗೆ/ ಬೇಡಿಕೆಗೆ ಅನುಗುಣವಾಗಿ 19 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
ಇ)	ನರ್ಮ್ ಬಸ್ಸುಗಳನ್ನು ಪುನರಾರಂಭಿಸುವಲ್ಲಿ ಇಲಾಖೆಯ ನಿಲುವೇನು?	ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ ಪ್ರಯಾಣಿಕರ ಲಭ್ಯತೆಗೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಖ್ಯೆ: ಟಿಡಿ 121 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2865

ಸದಸ್ಯರ ಹೆಸರು : ಶ್ರೀ.ರಘುಪತಿ ಭಟ್ ಕೆ. (ಉಡುಪಿ)

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸುವ ದಿನಾಂಕ : 17/03/2021.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ತೋಟಗಾರಿಕೆ ಬೆಳೆಗಳಿಗೆ ಸಬ್ಸಿಡಿ ದರದಲ್ಲಿ ಒದಗಿಸುತ್ತಿದ್ದ ರಸಗೊಬ್ಬರ ಮತ್ತು ಕ್ರಿಮಿನಾಶಕ ಸಕಾಲಕ್ಕೆ ಪೂರೈಕೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಗಮನಕ್ಕೆ ಬಂದಿರುವುದಿಲ್ಲ.
ಆ)	ಸಕಾಲಕ್ಕೆ ರಸಗೊಬ್ಬರ ಮತ್ತು ಕ್ರಿಮಿನಾಶಕ ಪೂರೈಸುವಲ್ಲಿ ಇರುವ ಸಮಸ್ಯೆಗಳೇನು;	ತೋಟಗಾರಿಕೆ ಬೆಳೆಗಳು ಸೇರಿದಂತೆ ರೈತರು ಬೆಳೆಯುವ ಎಲ್ಲಾ ಬೆಳೆಗಳಿಗೂ ಅವಶ್ಯವಿರುವ ರಸಗೊಬ್ಬರ ಮತ್ತು ಪೀಡೆನಾಶಕ ಪೂರೈಕೆ ಸಕಾಲಕ್ಕೆ ಕೊರತೆಯಾಗದಂತೆ ಪೂರ್ವ ಸಿದ್ದತೆ ಮಾಡಿಕೊಂಡು ನಿಗಾ ವಹಿಸಲಾಗುತ್ತಿದೆ
ಇ)	ತೋಟಗಾರಿಕೆ ಬೆಳೆಗಳನ್ನು ಬೆಳೆಯುವವರಿಗೆ ಸಮಸ್ಯೆಯಾಗದಂತೆ ಸಕಾಲಕ್ಕೆ ರಸಗೊಬ್ಬರ ಮತ್ತು ಕ್ರಿಮಿನಾಶಕ ಪೂರೈಸುವಲ್ಲಿ ಇಲಾಖೆಯ ನಿಲುವೇನು?	ತೋಟಗಾರಿಕೆ ಬೆಳೆಗಳನ್ನು ಬೆಳೆಯುವವರಿಗೆ ಸಮಸ್ಯೆಯಾಗದಂತೆ ಸಕಾಲಕ್ಕೆ ರಸಗೊಬ್ಬರ ಮತ್ತು ಕ್ರಿಮಿನಾಶಕ ಪೂರೈಸುವುದು ಅತ್ಯವಶ್ಯಕವೆಂಬುದು ತೋಟಗಾರಿಕೆ ಇಲಾಖೆಯ ನಿಲುವಾಗಿರುತ್ತದೆ. ಈ ಬಗ್ಗೆ ಇಲಾಖೆಯ ವಿವಿಧ ಯೋಜನೆಗಳಡಿ ಸಕಾಲದಲ್ಲಿ ರೈತರಿಗೆ ಕ್ರಿಮಿನಾಶಕ ಖರೀದಿಸಲು ಸಹಾಯಧನ ನೀಡಲಾಗುತ್ತಿದೆ. ಜಿಲ್ಲೆಗಳಿಂದ ಬೆಳೆಯುವ ಬೆಳೆಗಳ ಮಾಹಿತಿ, ವಿಸ್ತೀರ್ಣ ಹಾಗೂ ಅವಶ್ಯವಿರುವ ರಸಗೊಬ್ಬರದ ಬೇಡಿಕೆಯ ವಿವರಗಳನ್ನು ಪಡೆದು, ರಸಗೊಬ್ಬರ ತಯಾರಕರು/ ಸರಬರಾಜುದಾರರಿಗೆ ಜಿಲ್ಲಾವಾರು ಗುರಿಯನ್ನು ಹಂಚಿಕೆ ಮಾಡಿ ಅದರಂತೆ ಸರಬರಾಜು ಮಾಡಲು ತಿಳಿಸಿ ಈ ಬಗ್ಗೆ ಇಲಾಖೆಯ ವತಿಯಿಂದ ನಿಗಾ ವಹಿಸಲಾಗುತ್ತದೆ. ಗುರಿಗಳನ್ವಯ ಜಿಲ್ಲೆಗಳಿಗೆ ರಸಗೊಬ್ಬರವನ್ನು ಸಗಟು ಮತ್ತು ಚಿಲ್ಲರೆ ಮಾರಾಟಗಾರರ ಮುಖಾಂತರ ಸರಬರಾಜು ಮಾಡಲಾಗುತ್ತಿದ್ದು, ಪೂರೈಕೆಯಲ್ಲಿ ಯಾವುದೇ ಸಮಸ್ಯೆಗಳಿರುವುದಿಲ್ಲ. ಪೀಡೆನಾಶಕಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಕೀಟನಾಶಕ ಕಾಯ್ದೆ ಮತ್ತು ನಿಯಮದನ್ವಯ ಮಾರಾಟ ಮಾಡಲು ಅವಕಾಶ ಕಲ್ಪಿಸಿದ್ದು ಪೀಡೆನಾಶಕಗಳ ಪೂರೈಕೆಯಲ್ಲಿ ಯಾವುದೇ ಸಮಸ್ಯೆಗಳು ಕಂಡುಬಂದಿರುವುದಿಲ್ಲ.

ಸಂಖ್ಯೆ: HORTI 165 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1822
ಸದಸ್ಯರ ಹೆಸರು	ಶ್ರೀಮತಿ ಅಂಜಲಿ ಹೇಮಂತ್ ನಿಂಬಾಳ್ಕರ್
ಉತ್ತರಿಸುವ ದಿನಾಂಕ	17/03/2021
ಉತ್ತರಿಸುವವರು	ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆಗಳು	ಉತ್ತರ
ಅ)	ರೇಷ್ಮೆ ಇಲಾಖೆಯ ಯೋಜನೆಗಳು ಖಾನಾಪುರ ವಿಧಾನಸಭಾ ಕ್ಷೇತ್ರದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರೇಷ್ಮೆ ಇಲಾಖೆಯ ಯೋಜನೆಗಳನ್ನು ಖಾನಾಪುರ ವಿಧಾನಸಭಾ ಕ್ಷೇತ್ರದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ.
ಆ)	ರೇಷ್ಮೆ ಇಲಾಖೆಯಡಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು;	ರೇಷ್ಮೆ ಇಲಾಖೆಯು ವಿವಿಧ ಯೋಜನೆಗಳಡಿ ರೇಷ್ಮೆ ಬೆಳೆ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ರೂಪಿಸಿದೆ. 1.ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ. 2.ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3.ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ. 4.ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ. 5.ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. 6.ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 7.ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ 8.ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 9.ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಖರೀದಿಗೆ ಸಹಾಯಧನ. 10.ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 11.ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 12.ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ.

----2

<table>
<tr><td></td><td></td><td>13.ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.
14.ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ ನೀಡಲಾಗುತ್ತಿದೆ.
15.ರೀಲಿಂಗ್ ಶೆಡ್ ನಿರ್ಮಾಣಕ್ಕೆ ಸಹಾಯಧನ
16. ರೀಲಿಂಗ್ ಯಂತ್ರೋಪಕರಣಗಳ ಸ್ಥಾಪನೆಗೆ ಸಹಾಯಧನ,
17.ಬಾಯ್ಲರ್, ಸೋಲಾರ್ ವಾಟರ್ ಹೀಟರ್, ಜನರೇಟರ್, ಹೀಟ್ ರಿಕವರಿ ಯುನಿಟ್ ಖರೀದಿಗೆ ಸಹಾಯಧನ.
18.ಸ್ವಯಂಚಾಲಿತ ರೇಷ್ಮೆ ನೂಲು ಬಿಚ್ಚಾಣಿಕೆ ಘಟಕಗಳ (ARM) ಸ್ಥಾಪನೆಗೆ ಸಹಾಯಧನ.
19.ಪ್ಯೂಪಾ ಪ್ರೋಸೆಸಿಂಗ್ ಘಟಕ.</td></tr>
<tr><td>ಇ)</td><td>ಖಾನಾಪೂರ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿಗೆ ಭರಿಸಿದ ವೆಚ್ಚವೆಷ್ಟು;</td><td>ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿಗೆ ಭರಿಸಿದ ವೆಚ್ಚ ಕೆಳಕಂಡಂತ್ತಿದೆ:-
<table>
<tr><th>ವರ್ಷ</th><th>ಭರಿಸಿದ ವೆಚ್ಚ (ರೂ ಲಕ್ಷಗಳಲ್ಲಿ)</th></tr>
<tr><td>2017-18</td><td>3,37,744/-</td></tr>
<tr><td>2018-19</td><td>1,85,797/-</td></tr>
<tr><td>2019-20</td><td>39,604/-</td></tr>
<tr><td>2020-21 (ಡಿಸೆಂಬರ್-2020 ರ ಅಂತ್ಯಕ್ಕೆ</td><td>1,15,000/-</td></tr>
</table>
ಸದರಿ ತಾಲ್ಲೂಕಿನಲ್ಲಿ ಹೆಚ್ಚು ಮಳೆಯಾಗುತ್ತಿದ್ದ ಕಾರಣ ಹಿಪ್ಪುನೇರಳೆ ಸೊಪ್ಪಿನ ಗುಣಮಟ್ಟದ ಮೇಲೆ ಪರಿಣಾಮ ಬೀರಿ ರೇಷ್ಮೆ ಹುಳು ಸಾಕಾಣಿಕೆ ಮೇಲೆ ಪ್ರತಿಕೂಲ ಪರಿಣಾಮ ಬೀರಿರುತ್ತದೆ. ಮುಂಬರುವ ದಿನಗಳಲ್ಲಿ ರೇಷ್ಮೆ ಕೃಷಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.</td></tr>
<tr><td>ಈ)</td><td>ಈ ಕ್ಷೇತ್ರದಲ್ಲಿ ರೇಷ್ಮೆ ಇಲಾಖೆಯ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?</td><td>ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಇಲಾಖೆಯು ರೇಷ್ಮೆ ಬೆಳೆಗಾರರಲ್ಲಿ ನೂತನ ತಾಂತ್ರಿಕತೆಗಳ ಅರಿವು ಮೂಡಿಸಲು ಕಾರ್ಯಾಗಾರ / ಕ್ಷೇತ್ರೋತ್ಸವ ಮುಂತಾದ ಹಲವು ಕಾರ್ಯಕ್ರಮಗಳನ್ನು ಕ್ಷೇತ್ರಮಟ್ಟದಲ್ಲಿ ಹಮ್ಮಿಕೊಂಡು ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ತಾಂತ್ರಿಕ ಸಿಬ್ಬಂದಿ ಶ್ರಮವಹಿಸುತ್ತಿದ್ದಾರೆ.</td></tr>
</table>

ಸಂಖ್ಯೆ: ರೇಷ್ಮೆ 61 ರೇಕೃವಿ 2021

(ಆರ್.ಶಂಕರ್)

ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1836

ಸದಸ್ಯರ ಹೆಸರು : ಶ್ರೀ ಸಂಜೀವ ಮಠಂದೂರ್

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಪುತ್ತೂರು ವಿಭಾಗದ ವಿಭಾಗೀಯ ನಿಯಂತ್ರಣ ಕಛೇರಿ ವ್ಯಾಪ್ತಿಗೆ ಬರುವ ಘಟಕಗಳಲ್ಲಿ ಖಾಲಿ ಇರುವ ನಿರ್ವಾಹಕ, ಚಾಲಕ ಹಾಗೂ ತಾಂತ್ರಿಕ ಹುದ್ದೆಗಳ ಸಂಖ್ಯೆ ಎಷ್ಟು; ಈ ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಾಗುವುದು? (ವಿವರ ಒದಗಿಸುವುದು)	ಪುತ್ತೂರು ವಿಭಾಗದ ವಿಭಾಗೀಯ ನಿಯಂತ್ರಣ ಕಛೇರಿ ವ್ಯಾಪ್ತಿಯ 05 ಘಟಕಗಳಿದ್ದು, ಬಿ.ಸಿ.ರೋಡ್ ಘಟಕದಲ್ಲಿ ಮಾತ್ರ ಚಲನಾ ಸಿಬ್ಬಂದಿಗಳ 13 ಹುದ್ದೆಗಳು ಖಾಲಿ ಇರುತ್ತವೆ. 05 ಘಟಕಗಳಲ್ಲಿ 201 ತಾಂತ್ರಿಕ ಸಿಬ್ಬಂದಿ ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಇರುವ ಹುದ್ದೆಗಳ ವಿವರವನ್ನು <u>ಅನುಬಂಧ</u>ರಲ್ಲಿ ನೀಡಲಾಗಿದೆ. ಪ್ರಸ್ತುತ ಪುತ್ತೂರು ವಿಭಾಗದ ವತಿಯಿಂದ 525 ಅನುಸೂಚಿಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದ್ದು, ಚಾಲನಾ ಸಿಬ್ಬಂದಿಗಳ ಕೊರತೆ ಇರುವುದಿಲ್ಲ. ತಾಂತ್ರಿಕ ಸಿಬ್ಬಂದಿಗಳ ಕೊರತೆಯಲ್ಲಿ 5 ಹುದ್ದೆಗಳು ಮಾತ್ರ ಬಡ್ತಿಗೆ ಮೀಸಲಿದ್ದು, ಅವುಗಳನ್ನು ತುಂಬುವ ಪ್ರಕ್ರಿಯೆ ವಿಭಾಗದಲ್ಲಿ ಜಾರಿಯಲ್ಲಿರುತ್ತದೆ. ನೇಮಕಾತಿ ಪ್ರಕ್ರಿಯೆಗಳನ್ನು ಕೋವಿಡ್-19ರ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆಯನ್ವಯ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ನಿರ್ಬಂಧವನ್ನು ತೆರವುಗೊಳಿಸಿದ ನಂತರ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 98 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಅನುಬಂಧ

ಪುತ್ತೂರು ವಿಭಾಗದ ವ್ಯಾಪ್ತಿಯ ಘಟಕಗಳ ಚಾಲಕ, ನಿರ್ವಾಹಕ ಹಾಗೂ ತಾಂತ್ರಿಕ ಸಿಬ್ಬಂದಿಗಳ ಮಂಜೂರಾತಿ, ಕಾರ್ಯನಿರ್ವಹಣೆ ಹಾಗೂ ಕೊರತೆ ವಿವರ (ಜನವರಿ–2021ರಲ್ಲಿದ್ದಂತೆ)

ಕ್ರ ಸಂ.	ಘಟಕ	ಚಾಲನಾ ಸಿಬ್ಬಂದಿ (ಚಾಲಕ, ಚಾಲಕ–ಕಂ–ನಿರ್ವಾಹಕ ಹಾಗೂ ನಿರ್ವಾಹಕ)			ತಾಂತ್ರಿಕ		
		ಮಂಜೂರಾತಿ	ಕಾರ್ಯನಿರ್ವಹಣೆ	ಖಾಲಿ(–)/ ಹೆಚ್ಚುವರಿ(+)	ಮಂಜೂರಾತಿ	ಕಾರ್ಯನಿರ್ವಹಣೆ	ಖಾಲಿ(–)/ ಹೆಚ್ಚುವರಿ(+)
1	ಪುತ್ತೂರು	374	381	+07	118	62	–56
2	ಧರ್ಮಸ್ಥಳ	404	428	+24	118	64	–54
3	ಬಿ.ಸಿ.ರೋಡ್	332	319	–13	81	47	–34
4	ಮಡಿಕೇರಿ	358	365	+07	95	49	–46
5	ಸುಳ್ಯ	190	194	+04	38	27	–11
	ಒಟ್ಟು	**1658**	**1687**	**+29**	**450**	**249**	**–201**

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1841
ಸದಸ್ಯರ ಹೆಸರು : ಶ್ರೀ ಪುಟ್ಟರಂಗ ಶೆಟ್ಟಿ ಸಿ.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಚಾಮರಾಜನಗರ ಟೌನ್‌ನಲ್ಲಿ ನೂತನ ಬಸ್ ನಿಲ್ದಾಣದ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಚಾಮರಾಜನಗರ ಟೌನ್‌ನಲ್ಲಿ ನೂತನ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ.
ಆ)	ಬಂದಿದ್ದಲ್ಲಿ, ಬಸ್ ನಿಲ್ದಾಣದ ಕಾಮಗಾರಿಯನ್ನು ಪ್ರಾರಂಭಿಸಲು ಇರುವ ಸಮಸ್ಯೆಗಳೇನು; ಬಸ್ ನಿಲ್ದಾಣ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸುವ ಇಚ್ಛಾಶಕ್ತಿ ಸರ್ಕಾರಕ್ಕೆ ಇದೆಯೇ;	ಚಾಮರಾಜನಗರ ಪಟ್ಟಣದಲ್ಲಿ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕ.ರಾ.ರ.ಸಾ.ನಿಗಮದಿಂದ 1969ರಲ್ಲಿ 1 ಎಕರೆ 18 ಗುಂಟೆ ನಿವೇಶನದಲ್ಲಿ ಬಸ್ ನಿಲ್ದಾಣ ನಿರ್ಮಿಸಲಾಗಿದ್ದು, ಸದರಿ ಬಸ್ ನಿಲ್ದಾಣವನ್ನು ಅಭಿವೃದ್ಧಿಪಡಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ. ಪ್ರಸ್ತುತ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಇರುವುದಿಲ್ಲ. ಆದಾಗ್ಯೂ, ಮುಂದಿನ ದಿನಗಳ ಸಾರಿಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಚಾಮರಾಜನಗರದ ಸಂತೇಮರಳ್ಳಿ ವೃತ್ತದ ಬಳಿ ಇರುವ ರೇಷ್ಮೆ ಇಲಾಖೆಗೆ ಸೇರಿದ ಸರ್ವೆ ಸಂ.12, 13 ಮತ್ತು 14ರಲ್ಲಿ ಒಟ್ಟು 3 ಎಕರೆ 20 ಗುಂಟೆ ನಿವೇಶನವನ್ನು ಕ.ರಾ.ರ.ಸಾ.ನಿಗಮಕ್ಕೆ ಒದಗಿಸುವಂತೆ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಇವರನ್ನು ಕೋರಲಾಗಿದ್ದು, ನಿವೇಶನವನ್ನು ನಿಗಮಕ್ಕೆ ಪಡೆಯಲು ಪ್ರಕ್ರಿಯೆಗಳು ಪ್ರಗತಿಯಲ್ಲಿದೆ.
ಇ)	ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;	ಪ್ರಸ್ತುತ ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ನಿಗಮವು ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಯಾವುದೇ ನೂತನ ಬಸ್ ಘಟಕ ಮತ್ತು ಬಸ್ ನಿಲ್ದಾಣ ನಿರ್ಮಾಣ/ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಬಹಳ ಕಷ್ಟಕರವಾಗಿದೆ. ರೇಷ್ಮೆ ಇಲಾಖೆಯಿಂದ ನಿವೇಶನ ಲಭ್ಯವಾದ ನಂತರ ಹಾಗೂ ಮುಂದಿನ ದಿನಗಳಲ್ಲಿ ನಿಗಮದ ಆರ್ಥಿಕ ಪರಿಸ್ಥಿತಿಯು ಸುಧಾರಿಸಿದ ನಂತರ ನಿಗಮದಿಂದ ಬಸ್ ನಿಲ್ದಾಣ / ಬಸ್ ಘಟಕ ನಿರ್ಮಾಣ ಕೈಗೊಳ್ಳುವ ಕುರಿತಂತೆ ಹೊರಡಿಸಲಾದ ಮಾರ್ಗಸೂಚಿ ಸುತ್ತೋಲೆ ಸಂಖ್ಯೆ: 01/2015-16, ದಿನಾಂಕ: 06-06-2015ರ ಪ್ರಕಾರ ಸಾರಿಗೆ ಅವಶ್ಯಕತೆಗಳನ್ನು ಆಧರಿಸಿ ನೂತನ ಬಸ್ ನಿಲ್ದಾಣ ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

ಈ)	ಚಾಮರಾಜನಗರ KSRTC ಡಿಪೋನಲ್ಲಿ ಚಾಲ್ತಿಯಲ್ಲಿರುವ ಬಸ್ಸುಗಳ ಸಂಖ್ಯೆ ಎಷ್ಟು;	ಕ.ರಾ.ರ.ಸಾ.ನಿಗಮದ ಚಾಮರಾಜನಗರ ಡಿಪೋದಲ್ಲಿ ದಿನಾಂಕ: 09.03.2021ರಲ್ಲಿದ್ದಂತೆ ಒಟ್ಟು 137 ಬಸ್ಸುಗಳು ಚಾಲ್ತಿಯಲ್ಲಿರುತ್ತವೆ.
ಉ)	ಹೊಸದಾಗಿ ಬಸ್ಸುಗಳನ್ನು ಹಾಗೂ ಬಸ್ ಮಾರ್ಗಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು)	ನಿಗಮದ ಚಾಮರಾಜನಗರ ಡಿಪೋದಲ್ಲಿ ದಿನಾಂಕ: 09.03.2021ರಲ್ಲಿದ್ದಂತೆ ಒಟ್ಟು 119 ಅನುಸೂಚಿಗಳನ್ನು 137 ವಾಹನ ಬಲದಿಂದ ಕಾರ್ಯಾಚರಣೆ ಮಾಡಲಾಗುತ್ತಿದ್ದು, 18 ಹೆಚ್ಚುವರಿ ವಾಹನಗಳಿರುತ್ತವೆ. ಪ್ರಸ್ತುತ ಚಾಮರಾಜನಗರ ಘಟಕದಲ್ಲಿ ವಾಹನಗಳ ಕೊರತೆ ಇರುವುದಿಲ್ಲ. ಆದ್ಯಾಗ್ಯೂ, ವಾಹನಗಳ ಅವಶ್ಯಕತೆ ಇದ್ದಲ್ಲಿ ನಿಗಮದ ನಿಯಾಮಾವಳಿ ಅನುಸಾರ ಹೊಸ ವಾಹನಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಕೋವಿಡ್-19ರ ಹಿನ್ನೆಲೆಯಲ್ಲಿ ಲಾಕ್‌ಡೌನ್ ಘೋಷಿಸಿದ್ದರಿಂದ ಸಾರಿಗೆಗಳ ಕಾರ್ಯಾಚರಣೆ ಸ್ಥಗಿತಗೊಳಿಸಲಾಗಿತ್ತು. ಲಾಕ್‌ಡೌನ್ ತೆರವುಗೊಂಡ ನಂತರ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ ಪ್ರಯಾಣಿಕರು/ ವಿದ್ಯಾರ್ಥಿಗಳ ಲಭ್ಯತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಸಾರ್ವಜನಿಕ ಪ್ರಯಾಣಿಕರು ಮತ್ತು ವಿದ್ಯಾರ್ಥಿಗಳ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರಸುತ ಕಲ್ಪಿಸಿರುವ ಸಾರಿಗೆ ಸೌಲಭ್ಯ ಅವಶ್ಯಕತೆಗೆ ಅನುಗುಣವಾಗಿದೆ.

ಸಂಖ್ಯೆ: ಟಿಡಿ 99 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1853

ಸದಸ್ಯರ ಹೆಸರು : ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಘೋಷಿಸಿದ ಪರಿಹಾರ ಎಲ್ಲರಿಗೂ ತಲುಪಿದೆಯೇ; (ವಿವರ ನೀಡುವುದು)	ಸೇವಾ ಸಿಂಧು ವೆಬ್ ಪೋರ್ಟ್‌ಲ್‌ನಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಒಟ್ಟು 2,45,904 ಫಲಾನುಭವಿಗಳ ಅರ್ಜಿಗಳು ಸ್ವೀಕೃತವಾಗಿರುತ್ತದೆ. ಇಲ್ಲಿಯವರೆಗೆ **2,15,669** ಫಲಾನುಭವಿಗಳಿಗೆ ಪರಿಹಾರ ಧನವನ್ನು ವಿತರಿಸಲಾಗಿರುತ್ತದೆ.
(ಆ)	ಪರಿಹಾರ (ಸಹಾಯಧನ) ನೀಡಲು ಇರುವ ಮಾನದಂಡವೇನು;	ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಟಿಡಿ 121 ಟಿಡಿಒ 2020, ದಿನಾಂಕ:16-05-2020 ಹಾಗೂ ಮಾರ್ಪಾಡು ಆದೇಶ ದಿನಾಂಕ:29-05-2020 ರಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಮ್ಮೆ ಪರಿಹಾರವಾಗಿ ರೂ.5,000/-ಗಳ ಪರಿಹಾರ ಧನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ. 1. ಎಲ್ಲಾ ಅರ್ಜಿಗಳು ಸೇವಾ ಸಿಂಧು ಪೋರ್ಟಲ್ ಮೂಲಕವೇ ಸ್ವೀಕೃತವಾಗತಕ್ಕದ್ದು. 2. ದಿನಾಂಕ: 24-03-2020 ರಂದು ಚಾಲನೆ ಪರವಾನಗಿ ಪ್ರಮಾಣ ಪತ್ರ (Driving License) ಹೊಂದಿರುವ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಅನ್ವಯಿಸತಕ್ಕದ್ದು. ದಿನಾಂಕ:24-03-2020 ರಂದು ಚಾಲ್ತಿಯಲ್ಲಿದ್ದ ಚಾಲಕರ ಪರವಾನಗಿ (Driving License) ಸಂಖ್ಯೆಗಿಂತ ಹೆಚ್ಚು ಫಲಾನುಭವಿಗಳಿಲ್ಲದಂತೆ ಖಚಿತಪಡಿಸಿಕೊಳ್ಳತಕ್ಕದ್ದು. 3. ಆಧಾರ್ ಕಾರ್ಡ್ / ಚಾಲನಾ ಪರವಾನಗಿ / ವಾಹನ ನೋಂದಣಿ ಸಂಖ್ಯೆ ಮೂರು ಅಂಶಗಳು ಎಲ್ಲಾ ಫಲಾನುಭವಿಗಳಿಗೆ ಅನನ್ಯವಾಗಿರುವುದು ಕಡ್ಡಾಯವಾಗಿರತಕ್ಕದ್ದು. 4. ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಅನ್ವಯವಾಗತಕ್ಕದ್ದು. ಮ್ಯಾಕ್ಸಿ ಕ್ಯಾಬ್‌ಗಳಿಗೆ ಅನ್ವಯಿಸುವುದಿಲ್ಲ.

--2

		5. ಪರಿಹಾರ ಧನವು ಕೇವಲ ಚಾಲನೆ ಪರವಾನಗಿ ಪ್ರಮಾಣ ಪತ್ರವನ್ನು (Driving License) ಹೊಂದಿರುವ ಹಾಗೂ ಅಗತ್ಯವಿರುವ ಚಾಲಕರ ಬ್ಯಾಂಕ್ ಖಾತೆಗೆ DBT ಮುಖಾಂತರವೇ ಸಂದಾಯವಾಗಬೇಕು. 6. ಒಂದು ವೇಳೆ ಆಟೋ / ಟ್ಯಾಕ್ಸಿ ಮಾಲೀಕರಿಗೆ ಸಂದಾಯವಾದಲ್ಲಿ ಕೆಲವೊಂದು ಮಾಲೀಕರು ಹೆಚ್ಚಿನ ಸಂಖ್ಯೆಯ ಆಟೋ / ಟ್ಯಾಕ್ಸಿಗಳನ್ನು ಹೊಂದಿದ್ದು, ಅವರಿಗೆ ಪರಿಹಾರ ಧನ ಸಂದಾಯವಾದಲ್ಲಿ ಜೀವನ ನಿರ್ವಹಣೆಯನ್ನು ಎದುರಿಸುತ್ತಿರುವ ಚಾಲಕರಿಗೆ ಸಿಗದಂತೆಯಾಗುತ್ತದೆ. ಆದುದರಿಂದ Duplication or Double Payment ಆಗದಂತೆ, ಅವರುಗಳ ಆಧಾರ್ / ಪ್ಯಾನ್ ಕಾರ್ಡ್ ಬ್ಯಾಂಕ್ ಖಾತೆಗೆ ಅನನ್ಯವಾಗಿ ಲಿಂಕ್ ಆಗಿರುವ ಬಗ್ಗೆ ಗಮನಹರಿಸಿ ವರ್ಗಾಯಿಸತಕ್ಕದ್ದು. 7. ಈ ಹಂತದಲ್ಲಿ ಸರ್ಕಾರ ಮತ್ತು ಫಲಾನುಭವಿಗಳ ನೇರ ಸಂಪರ್ಕವಿರತಕ್ಕದ್ದು, ಯಾವುದೇ ಮಧ್ಯಂತರ ಸಂಪರ್ಕ ಇರಬಾರದು.
(ಇ)	ಬಾಡಿಗೆ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಪರಿಹಾರ ನೀಡದಿರಲು ಕಾರಣವೇನು;	ಅರ್ಹ ಆಟೋ ಮತ್ತು ಟ್ಯಾಕ್ಸಿ ಚಾಲಕರುಗಳಿಗೆ ಪರಿಹಾರ ಧನ ವಿತರಿಸುವ ದೃಷ್ಟಿಯಿಂದ ಆಧಾರ್ ಕಾರ್ಡ್ / ಚಾಲನಾ ಪರವಾನಗಿ / ವಾಹನ ನೋಂದಣಿ ಸಂಖ್ಯೆ ಮೂರು ಅಂಶಗಳು ಎಲ್ಲಾ ಫಲಾನುಭವಿಗಳಿಗೆ ಕಡ್ಡಾಯಗೊಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಬಾಡಿಗೆ ಆಟೋ ಮತ್ತು ಟ್ಯಾಕ್ಸಿ ಚಾಲಕರುಗಳಿಗೆ ಪರಿಹಾರ ನೀಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.
(ಈ)	ಇಂತಹವರಿಗೆ ಪರ್ಯಾಯವಾಗಿ ಯಾವ ರೀತಿ ಪರಿಹಾರ ನೀಡಲಾಗುವುದು? (ವಿವರ ನೀಡುವುದು)	

ಟಿಡಿ 49 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2522

ಸದಸ್ಯರ ಹೆಸರು : ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)

ಉತ್ತರಿಸುವ ದಿನಾಂಕ : 17.03.2021

ಉತ್ತರಿಸುವ ಸಚಿವರು : ಕೃಷಿ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೃಷಿ ಇಲಾಖೆ ಮುಖಾಂತರ ರೈತರಿಗೆ ಕೃಷಿ ಯಂತ್ರ ಖರೀದಿಗೆ ಸಹಾಯಧನ (ರಿಯಾಯತಿ) ನೀಡುವ ಯೋಜನೆ ಜಾರಿಯಲ್ಲಿದೆಯೇ;</td><td>ಕೃಷಿ ಇಲಾಖೆ ಮುಖಾಂತರ ರೈತರಿಗೆ ಕೃಷಿ ಯಂತ್ರ ಖರೀದಿಗೆ ಸಹಾಯಧನ (ರಿಯಾಯತಿ) ನೀಡುವ ಯೋಜನೆ ಜಾರಿಯಲ್ಲಿದೆ.</td></tr>
<tr><td>ಆ)</td><td>ಹಾಗಿದ್ದಲ್ಲಿ, ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ರೈತರಿಗೆ ಈ ಯೋಜನೆಯಡಿ ಸಹಾಯಧನ ನೀಡಲು ಅನುದಾನ ಲಭ್ಯವಿದೆಯೇ;</td><td>ಕಿತ್ತೂರು ವಿಧಾಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ರೈತರಿಗೆ ಈ ಯೋಜನೆಯಡಿ ಸಹಾಯಧನ ನೀಡಲು ನಿಗಧಿಪಡಿಸಲಾಗಿರುವ ಮತ್ತು ಬಿಡುಗಡೆ ಮಾಡಲಾಗಿರುವ ಅನುದಾನದ ವಿವರ ಕೆಳಕಂಡಂತಿದೆ:
(ಲಕ್ಷ ರೂ ಗಳಲ್ಲಿ)
<table>
<tr><th>ಕ್ರ.ಸಂ</th><th>ಕಿತ್ತೂರು ವಿಧಾನ ಸಭಾ ಕ್ಷೇತ್ರದ ತಾಲ್ಲೂಕುಗಳು</th><th>ವಿವರ</th><th>ಮೊತ್ತ</th></tr>
<tr><td rowspan="2">1</td><td rowspan="2">ಬೈಲಹೊಂಗಲ</td><td>ನಿಗಧಿಪಡಿಸಿರುವ ಅನುದಾನ</td><td>60.80</td></tr>
<tr><td>ಬಿಡುಗಡೆಯಾದ ಅನುದಾನ</td><td>60.80</td></tr>
</table>
</td></tr>
</table>

<table>
<tr><td></td><td></td><td><table><tr><td rowspan="2">2</td><td rowspan="2">ಕಿತ್ತೂರು</td><td>ನಿಗಧಿಪಡಿಸಿರುವ ಅನುದಾನ</td><td>57.92</td></tr><tr><td>ಬಿಡುಗಡೆಯಾದ ಅನುದಾನ</td><td>57.92</td></tr></table></td></tr>
<tr><td>ಇ)</td><td>ಇಲ್ಲದಿದ್ದಲ್ಲಿ, ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ರೈತರಿಗೆ ಕೃಷಿ ಯಂತ್ರ ಖರೀದಿಗೆ ಸಹಾಯಧನ (ರಿಯಾಯತಿ) ನೀಡುವ ಯೋಜನೆಗೆ ಅನುದಾನ ನೀಡಲು ಸರ್ಕಾರದ ಕ್ರಮವೇನು;</td><td>ಉದ್ಭವಿಸುವುದಿಲ್ಲ.</td></tr>
<tr><td>ಈ)</td><td>ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು?</td><td>ಉದ್ಭವಿಸುವುದಿಲ್ಲ.</td></tr>
</table>

ಸಂಖ್ಯೆ: AGRI-ASC/22/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2538
ಸದಸ್ಯರ ಹೆಸರು : ಶ್ರೀ ಹ್ಯಾರಿಸ್ ಎನ್.ಎ.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಸಾರಿಗೆ ನಿಗಮಗಳ ವ್ಯಾಪ್ತಿಯಲ್ಲಿ ಕಾರ್ಗೋ ಸೇವೆ ಒದಗಿಸಿಕೊಡುವ ಕುರಿತು ಸರ್ಕಾರದ ನಿಲುವೇನು;	ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳು ಪ್ರಯಾಣಿಕರಿಗೆ ಸಾರಿಗೆ ಸೇವೆ ಒದಗಿಸುವ ಜೊತೆಯಲ್ಲಿ ಬಸ್ಸಿನಲ್ಲಿ ಲಭ್ಯವಿರುವ ಲಗೇಜ್ ಸ್ಥಳಾವಕಾಶದಲ್ಲಿ ಲಗೇಜ್/ಪಾರ್ಸೆಲ್‌ಗಳನ್ನು ಸಾಗಣೆ ಮಾಡಲು ವ್ಯವಸ್ಥಿತ ಯೋಜನೆಯಾಗಿ, **ಪಾರ್ಸೆಲ್ ಸೇವಾ** ವ್ಯವಸ್ಥೆಯನ್ನು ದಿನಾಂಕ: 01.03.2021ರಿಂದ ಜಾರಿಗೆ ತರಲಾಗಿದೆ.
ಆ	ಸಾರಿಗೆ ನಿಗಮಗಳಿಗೆ ಆರ್ಥಿಕ ಚೇತನ ನೀಡುವಲ್ಲಿ ಕಾರ್ಗೋ ಯೋಜನೆಯು ಉಪಯುಕ್ತವಲ್ಲವೇ; (ವಿವರ ನೀಡುವುದು)	ಹೌದು. ರಸ್ತೆ ಸಾರಿಗೆ ನಿಗಮಗಳ ಸಾರಿಗೆಯೇತರ ಆದಾಯವನ್ನು ಹೆಚ್ಚಳಗೊಳಿಸುವ ನಿಟ್ಟಿನಲ್ಲಿ ಈ ನೂತನ ಮಾದರಿಯ ಯೋಜನೆಯನ್ನು ಜಾರಿಗೆ ತರಲಾಗಿರುತ್ತದೆ. ಪ್ರಸ್ತುತ ಮೂರು ನಿಗಮಗಳಲ್ಲಿ ಲಗೇಜ್ ಸಾಗಣೆ ಆದಾಯ ವಾರ್ಷಿಕ ರೂ.40.00 ಕೋಟಿ ಇದ್ದು, ಇದನ್ನು ದ್ವಿಗುಣಗೊಳಿಸುವ ಅಂದಾಜು ಇರುತ್ತದೆ.
ಇ	ಕಾರ್ಗೋ ಸೇವೆ ನೀಡಿಕೆ ಮೂಲಕ ಸಂಸ್ಥೆಗೆ ಆದಾಯ ಗಳಿಸಿಕೊಳ್ಳುವ ಸುಲಭ ಸಾಧ್ಯ ಯೋಜನೆ ಉಪಯುಕ್ತತೆ ಮತ್ತು ಕಾರ್ಗೋ ಸೇವೆಯ ರೀತಿ ನೀತಿಗಳೇನು? (ಮಾಹಿತಿ ನೀಡುವುದು)	ಪಾರ್ಸೆಲ್ ಸೇವೆಯನ್ನು ಜಾರಿಗೆ ತರುವುದರಿಂದ ಉಂಟಾಗಲಿರುವ ಉಪಯೋಗಗಳು ಈ ಕೆಳಕಂಡಂತಿವೆ: ➢ ರಸ್ತೆ ಸಾರಿಗೆ ನಿಗಮಗಳು ಸುರಕ್ಷಿತ ಸಮೂಹ ಸಾರಿಗೆ ವ್ಯವಸ್ಥೆಯೆಂದು ಜನಪ್ರಿಯತೆಯನ್ನು ಪಡೆದಿದ್ದು, ಲಗೇಜ್/ ವಸ್ತುಗಳನ್ನು ನಿಗಮದ ಬಸ್ಸುಗಳಲ್ಲಿ ಸಾಗಣೆ ಮಾಡಲು ಸಾರ್ವಜನಿಕರು ಮುಂದೆ ಬರುವ ನಿರೀಕ್ಷೆ ಇದೆ. ➢ ನಿಗಮಗಳ ವಾಹನಗಳಲ್ಲಿ ಲಭ್ಯವಿರುವ ಸ್ಥಳಾವಕಾಶದಲ್ಲಿ ಲಗೇಜ್ ಸಾಗಣೆ ಮಾಡುವುದರಿಂದ ರಸ್ತೆ ಸಾರಿಗೆ ನಿಗಮಗಳ ಸಾರಿಗೆಯೇತರ ಆದಾಯವು ಹೆಚ್ಚಳಗೊಳ್ಳುವುದೆಂದು ನಿರೀಕ್ಷಿಸಲಾಗಿದೆ. **ಪಾರ್ಸೆಲ್ ಸೇವೆಯ ನೀತಿ-ನಿಯಮಗಳು:** ➢ ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಹಾಗೂ ಈ.ಕ.ರ.ಸಾ.ಸಂಸ್ಥೆ ವ್ಯಾಪ್ತಿಯ ಆಯ್ದ ಬಸ್ ನಿಲ್ದಾಣಗಳಲ್ಲಿ ಪಾರ್ಸೆಲ್ ಸೇವಾ ಕೌಂಟರ್ ತೆರೆಯಲಾಗಿದ್ದು, ಸಾರ್ವಜನಿಕರು ತಮ್ಮ ಪಾರ್ಸೆಲ್ / ಲೈಟ್ ಪಾರ್ಸೆಲ್‌ಗಳನ್ನು ಈ ನೂತನ ಯೋಜನೆಯಡಿಯಲ್ಲಿ ಒಂದು ಬಸ್ ನಿಲ್ದಾಣದಿಂದ ಮತ್ತೊಂದು ಬಸ್ ನಿಲ್ದಾಣಕ್ಕೆ ಕಳುಹಿಸಬಹುದಾಗಿರುತ್ತದೆ. ಅಲ್ಲದೇ ಸಾರ್ವಜನಿಕರು ತಮ್ಮ ಪಾರ್ಸೆಲ್ ಸ್ವೀಕೃತಿ ಆಗುವ ಬಗ್ಗೆ ಎಸ್.ಎಂ.ಎಸ್. ಮೂಲಕ ಮಾಹಿತಿ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗಿರುತ್ತದೆ.

		➢ ಈ ವ್ಯವಸ್ಥೆಯಡಿಯಲ್ಲಿ 03 ರಸ್ತೆ ಸಾರಿಗೆ ನಿಗಮಗಳ ಆಯ್ದ ಬಸ್ ನಿಲ್ದಾಣಗಳಲ್ಲಿ ಲಗೇಜಗಳನ್ನು ಸ್ವೀಕರಿಸಿ ನಿಗಮದ ಬಸ್ಸುಗಳಲ್ಲಿ ಒಂದು ಬಸ್ ನಿಲ್ದಾಣದಿಂದ ಮತ್ತೊಂದು ಬಸ್ ನಿಲ್ದಾಣಕ್ಕೆ ಸಾಗಣೆ ಮಾಡಲಾಗುವುದು. ➢ ಈ ಯೋಜನೆಗಾಗಿ ಆಯ್ದ ಬಸ್ ನಿಲ್ದಾಣಗಳಲ್ಲಿ ಆಯಕಟ್ಟಿನ ಸ್ಥಳಗಳಲ್ಲಿ ಲಗೇಜು ಸ್ವೀಕರಣೆ/ವಿತರಣಾ ಕೌಂಟರಗಳನ್ನು ಸ್ಥಾಪಿಸಿ ಲಗೇಜು ಮತ್ತು ಲೈಟ್ ಪಾರ್ಸಲ್ ಸೇವೆಯನ್ನು ಪ್ರಾರಂಭಿಸುವುದು. ➢ ಈ ಯೋಜನೆಗೆ ಮಾರುಕಟ್ಟೆ ಆಧಾರಿತ ಸ್ಪರ್ಧಾತ್ಮಕವಾದ ದರಗಳನ್ನು ಪಾರ್ಸಲ್ ಸೇವೆಗಳ ಸಾಗಣೆಗೆ ನಿಗದಿಪಡಿಸಲಾಗಿರುತ್ತದೆ. ➢ ಈ ಯೋಜನೆಯ ಅನುಷ್ಠಾನ ಹಾಗೂ ಉತ್ತಮ ಗುಣಮಟ್ಟದ ನಿರ್ವಹಣೆಗೆ "ಕೆ.ಎಸ್.ಆರ್.ಟಿ.ಸಿ. ಲಾಜಿಸ್ಟಿಕ್ಸ್" ಎಂಬ ಪ್ರತ್ಯೇಕ ಸೆಲ್ ತೆರೆದು ಅಗತ್ಯ ಅಧಿಕಾರಿಗಳು/ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ. ➢ ಈ ಯೋಜನೆಯ ಅನುಷ್ಠಾನದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ನೇರ ಬಸ್ಸುಗಳ ಸೇವೆ ಇಲ್ಲದ ಮಾರ್ಗಗಳಿಗೆ ಪಾರ್ಸಲ್ ಸಾಗಣೆಗೆ ಯಾವುದೇ ವ್ಯತ್ಯಯವಾಗದಂತೆ, ಪಾರ್ಸಲ್ ಟ್ರಾನ್ಸ್-ಶಿಪ್.ಮೆಂಟ್ (ಬದಲಾವಣೆ ವ್ಯವಸ್ಥೆ) ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ. ➢ ಈ ಸಂಬಂಧ ಮೊದಲ ಹಂತದಲ್ಲಿ ರಾಜ್ಯದೊಳಗಿನ 88 ಕೌಂಟರ್‌ಗಳು ಹಾಗೂ ಅಂತರರಾಜ್ಯಗಳಲ್ಲಿನ 21 ಸ್ಥಳಗಳಲ್ಲಿ ಒಟ್ಟಾರೆ 109 ಕೌಂಟರ್‌ಗಳನ್ನು ತೆರೆಯಲು ಯೋಜಿಸಲಾಗಿರುತ್ತದೆ. ➢ ಮುಂದೆ, ಹಂತಹಂತವಾಗಿ ರಾಜ್ಯದ ಎಲ್ಲಾ ತಾಲ್ಲೂಕು ಹಾಗೂ ಪ್ರಮುಖ ಸ್ಥಳಗಳಲ್ಲಿ ಸೇವಾ ಕೇಂದ್ರಗಳನ್ನು ತೆರೆಯುವ ಉದ್ದೇಶ ಹೊಂದಿರುತ್ತದೆ.

ಸಂಖ್ಯೆ: ಟಿಡಿ 103 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2539

ಸದಸ್ಯರ ಹೆಸರು : ಶ್ರೀ. ಹ್ಯಾರಿಸ್ ಎನ್.ಎ. (ಶಾಂತಿನಗರ)

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17.03.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕೃಷಿಯೊಂದಿಗೆ ಆಧುನಿಕ ರೀತಿಯ ಸುಧಾರಿತ ತೋಟಗಾರಿಕೆ ಪ್ರೋತ್ಸಾಹ ನೀಡುವ ದಿಶೆಯಲ್ಲಿ ಇಲಾಖೆಯವರ ನೂತನ ಯೋಜನೆಗಳು ಯಾವುವು;	ಕೃಷಿಯೊಂದಿಗೆ ಆಧುನಿಕ ರೀತಿಯ ಸುಧಾರಿತ ತೋಟಗಾರಿಕೆ ಪ್ರೋತ್ಸಾಹ ನೀಡುವ ದಿಶೆಯಲ್ಲಿ ಇಲಾಖೆಯವರ ನೂತನ ಯೋಜನೆಗಳು ಈ ಕೆಳಗಿನಂತಿವೆ. 1.ಸಮಗ್ರ ಕೃಷಿ ಪದ್ಧತಿ 2.ತೋಟಗಾರಿಕೆ ಕ್ಷೇತ್ರಗಳ ಅಭಿವೃದ್ಧಿಗಾಗಿ ಸಮಗ್ರ ನೀತಿಯ ಕೃಷಿ ನೀತಿಯ ಅಳವಡಿಕೆ. 3.ಕೊಪ್ಪಳ ಜಿಲ್ಲೆಯ ಸಿರಿವಾರ ಗ್ರಾಮದಲ್ಲಿ ತೋಟಗಾರಿಕೆ ಪಾರ್ಕ ಸ್ಥಾಪನೆ.
ಆ)	ತೋಟಗಾರಿಕೆ ಮೇಳಗಳ ಮೂಲಕ ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಕೃಷಿಕರು ತೋಟಗಾರಿಕೆಯತ್ತ ಮುನ್ನಡೆಯಲು ಅರಿವು ಮೂಡಿಸುವಲ್ಲಿನ ಇಲಾಖೆಯ ಗುರಿ ಸಾಧನೆಗಳೇನು; (ವಿವರ ನೀಡುವುದು)	1.ತೋಟಗಾರಿಕೆ ಮೇಳವನ್ನು ಪ್ರತಿ ವರ್ಷ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ವತಿಯಿಂದ ಆಯೋಜಿಸಲಾಗುತ್ತಿದೆ. 2.ರಾಷ್ಟ್ರೀಯ ತೋಟಗಾರಿಕೆ ಮೇಳವನ್ನು (National Horticulture Fair) ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ (IIHR), ಬೆಂಗಳೂರು ರವರ ವತಿಯಿಂದ ಆಯೋಜಿಸಲಾಗುತ್ತಿದೆ. 3.ಕೃಷಿ ವಿಶ್ವವಿದ್ಯಾಲಯಗಳು ಆಯೋಜಿಸುವ ಕೃಷಿ ಮೇಳಗಳಲ್ಲಿಯೂ ತೋಟಗಾರಿಕೆ ತಂತ್ರಜ್ಞಾನಗಳ ಯಾಂತ್ರೀಕರಣ, ಹನಿ ನೀರಾವರಿ, ಹನಿ ನೀರಾವರಿಯಲ್ಲಿ ಸ್ವಯಂಚಾಲಿತ ಯಾಂತ್ರೀಕರಣ, ಸಂಯೋಜಿತ ಬೆಳೆಗಳ ಬೇಸಾಯ, ಹೊಸ ತಳಿಗಳ ಪರಿಚಯ, ಜೇನುಕೃಷಿ, ಅಣಬೆ ಕೃಷಿ, ಕೊಯ್ಲೋತ್ತರ ನಿರ್ವಹಣೆ ಮತ್ತು ಸಂಸ್ಕರಣೆ, ಸಾವಯವ ಪದ್ಧತಿ, ಕೀಟ ಮತ್ತು ರೋಗಗಳ ನಿರ್ವಹಣೆ, ಇತ್ಯಾದಿ ಕುರಿತು ತಾಂತ್ರಿಕ ಮಾಹಿತಿಯನ್ನು ನೀಡಲಾಗುತ್ತಿದೆ. ಈ ಬಗ್ಗೆ ಇಲಾಖೆಯಿಂದ ಅರಿವು ಮೂಡಿಸುವ ಕ್ರಮವನ್ನು ವಹಿಸಲಾಗುತ್ತಿರುತ್ತದೆ. 4. ಪ್ರತಿ ವರ್ಷ ಪ್ರತಿ ಜಿಲ್ಲೆ ಹಾಗೂ ಲಾಲ್ ಬಾಗ್ ನಲ್ಲಿ ಫಲಪುಷ್ಪ ಪ್ರದರ್ಶನಗಳನ್ನು ಏರ್ಪಡಿಸಿ, ತೋಟಗಾರಿಕೆಯಲ್ಲಿ ಆಗಿರುವ ಆವಿಷ್ಕಾರಗಳ ಕುರಿತು ಹಾಗೂ ಕೇಂದ್ರ, ರಾಜ್ಯ ಮತ್ತು ಜಿಲ್ಲಾ ಪಂಚಾಯತ್ ಯೋಜನೆಗಳ ಸೌಲಭ್ಯಗಳ ಮಾಹಿತಿಗಳನ್ನು ಪ್ರದರ್ಶಿಕೆಗಳ ಮೂಲಕ ಹೆಚ್ಚಿನ ಅರಿವು ಮೂಡಿಸಲಾಗುತ್ತಿದ್ದು, ರೈತರು/ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತೋಟಗಾರಿಕೆ ತಾಂತ್ರಿಕತೆಯ ಮತ್ತು ಸೌಲಭ್ಯಗಳ ಮಾಹಿತಿಯನ್ನು ಪಡೆಯುತ್ತಿದ್ದಾರೆ.

		ಇದರ ಪರಿಣಾಮವಾಗಿ ತೋಟಗಾರಿಕೆ ಬೆಳೆಗಳ ವಿಸ್ತೀರ್ಣವು 2013-14 ರಿಂದ 2018-19 ರವರೆಗೆ 19.22 ಲಕ್ಷ ಹೆಕ್ಟೇರ್ ನಿಂದ 23.25 ಲಕ್ಷ ಹೆಕ್ಟೇರ್ ವಿಸ್ತೀರ್ಣ ಹೆಚ್ಚಾಗಿದೆ, ಉತ್ಪಾದನೆ 162.57 ಲಕ್ಷ ಮೆಟ್ರಿಕ್ ಟನ್ ನಿಂದ 183.46 ಲಕ್ಷ ಮೆಟ್ರಿಕ್ ಟನ್ ರಷ್ಟು ಹೆಚ್ಚಾಗಿದೆ.
ಇ)	ತೋಟಗಾರಿಕೆಯ ಸೀಡ್ ಪೋರ್ಟಲ್ ಮೂಲಕ ದೇಶದಾದ್ಯಂತದ ತೋಟಗಾರಿಕಾ ನಿರತರಿಗೆ/ರೈತ ವರ್ಗದವರಿಗೆ ಬೀಜಗಳನ್ನು ಒದಗಿಸುವಂತಹ ಉಪಯುಕ್ತ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಇಲಾಖೆಯ ಮಾದರಿ ಯೋಜನೆಗಳು ಯಾವುವು; (ವಿವರ ನೀಡುವುದು)	ತೋಟಗಾರಿಕೆ ಇಲಾಖೆಯು ಈ ದಿಶೆಯಲ್ಲಿ 2021-22ನೇ ಆಯವ್ಯಯ ಭಾಷಣದ ಕಂಡಿಕೆ 58ರಲ್ಲಿ ಘೋಷಿಸಿರುವಂತ ಹೊಸ ಸಂಕರಣ ಬೀಜ ನೀತಿ ಜಾರಿಗೊಳಿಸುವ ಸಂದರ್ಭದಲ್ಲಿ ಈ ಕುರಿತಂತೆ ಪರಿಶೀಲಿಸಲಾಗುವುದು.
ಈ)	ಕೃಷಿ ಮತ್ತು ತೋಟಗಾರಿಕೆಯನ್ನುಹೆಚ್ಚಿನ ಪ್ರಮಾಣದಲ್ಲಿ ವಿಸ್ತರಿಸಲು ಇಲಾಖೆಯವರು ಜಂಟಿಯಾಗಿ ಹಮ್ಮಿಕೊಂಡ ಯೋಜನೆಗಳು ಯಾವುವು? (ಮಾಹಿತಿ ಒದಗಿಸುವುದು)	ಕೃಷಿ ಮತ್ತು ತೋಟಗಾರಿಕೆಯನ್ನು ಹೆಚ್ಚಿನ ಪ್ರಮಾಣದಲ್ಲಿ ವಿಸ್ತರಿಸಲು ಇಲಾಖೆಯವರು ಜಂಟಿಯಾಗಿ ಹಮ್ಮಿಕೊಂಡ ಯೋಜನೆಗಳು ವಿವರ ಈ ಕೆಳಕಂಡಂತಿದೆ. 1. ಪ್ರಧಾನ ಮಂತ್ರಿ ಕೃಷಿ ವಿಕಾಸ ಯೋಜನೆಯಡಿ ಹನಿನೀರಾವರಿ ಹಾಘೂ ತುಂತುರು ನೀರಾವರಿ. 2. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಯಾಂತ್ರಿಕರಣ ಹಾಗೂ ಕೃಷಿ ಹೊಂಡ ನಿರ್ಮಾಣ 3. ಕೃಷಿ ಯಾಂತ್ರೀಕರಣ ಉಪ ಅಭಿಯಾನದಡಿ ಯಾಂತ್ರಿಕರಣ ಖರಿಧಿಗೆ ಸಹಾಯಧನ.

ಸಂಖ್ಯೆ: HORTI 161 HGM 2021

(ಆರ್.ಶಂಕರ್)

ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2541
ಸದಸ್ಯರ ಹೆಸರು : ಶ್ರೀ ಹ್ಯಾರಿಸ್ ಎನ್.ಎ.
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಬಸ್ ಟರ್ಮಿನಲ್, ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಲು ಗುರುತಿಸಿರುವ ಪ್ರದೇಶಗಳಾವುವು:	ಪ್ರಸ್ತುತ ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಯಾವುದೇ ಹೊಸ ಬಸ್ ಟರ್ಮಿನಲ್ ಮತ್ತು ಬಸ್ ನಿಲ್ದಾಣವನ್ನು ನಿರ್ಮಾಣ ಮಾಡಲು ಯೋಜಿಸಿರುವುದಿಲ್ಲ ಹಾಗೂ ಈ ಬಗ್ಗೆ ಯಾವುದೇ ಪ್ರದೇಶಗಳನ್ನು ಗುರುತಿಸಿರುವುದಿಲ್ಲ.
ಆ)	ಇನ್ನಿತರೆ ಸಾರಿಗೆ ಸೌಲಭ್ಯಗಳ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ; (ಪ್ರಸ್ತಾವನೆಗಳವಾರು ವಿವರ ನೀಡುವುದು)	**ಸಾರಿಗೆ ಸೌಲಭ್ಯವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಸಂಸ್ಥೆಯ ಮುಂದಿರುವ ಪ್ರಸ್ತಾವನೆಗಳು ಈ ಕೆಳಕಂಡಂತಿವೆ:-** ➢ ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ 300 ಹವಾನಿಯಂತ್ರಿತ ಬಸ್ಸುಗಳು, ರಾಜ್ಯ ಸರ್ಕಾರದ ಯೋಜನೆಯಡಿಯಲ್ಲಿ ಹಾಗೂ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ಮೆಟ್ರೋ ಫೀಡರ್ ಬಸ್ಸುಗಳು ಒಟ್ಟಾರೆ 390 ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲು ಯೋಜಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ➢ 643 ಡೀಸಲ್ ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇಪರ್ಡೆಗೊಳಿಸಲು ಯೋಜಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ➢ ಸಾರ್ವಜನಿಕರನ್ನು ಸಮೂಹ ಸಾರಿಗೆದತ್ತ ಸೆಳೆಯಲು ಹಾಗೂ ನಗರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸಲು ನಿರ್ಭಯ ಯೋಜನೆಯಡಿ Vehicle Tracking System, Passenger Information System, Mobile app ಗಳನ್ನು ಅನುಷ್ಠಾನಗೊಳಿಸಲು ಯೋಜಿಸಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ➢ ನಗರದ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸುವ ಹಿನ್ನಲೆಯಲ್ಲಿ ಹೆಚ್ಚಿನ ಸಂಚಾರ ದಟ್ಟಣೆಯ ಕಾರಿಡಾರ್‌ಗಳಲ್ಲಿ ಬಸ್ ಆದ್ಯತಾ ಪಥವನ್ನು 2ನೇ ಹಂತದಲ್ಲಿ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ. ➢ ಬೆಂಗಳೂರಿನಲ್ಲಿ ಗಾರ್ಮೆಂಟ್ಸ್ ಉದ್ಯಮದ ಮಹಿಳಾ ಕಾರ್ಮಿಕರಿಗೆ ಬಿಎಂಟಿಸಿ 'ವನಿತಾ ಸಂಗಾತಿ' ಬಸ್ ಪಾಸ್ ನೀಡುವ ಯೋಜನೆ ಜಾರಿಯಲ್ಲಿದೆ. ➢ ಸಂಸ್ಥೆಯಲ್ಲಿ Automatic Fare Collection System (AFCS) ಯೋಜನೆಯನ್ನು ಅನುಷ್ಠಾನಗೊಳಿಸಿ, ಟಿಕೆಟಿಂಗ್ ವ್ಯವಸ್ಥೆಯನ್ನು ಆಧುನೀಕರಣಗೊಳಿಸುವುದು ಮತ್ತು ಮೆಟ್ರೋ ಹಾಗೂ ಬಸ್ಸುಗಳಲ್ಲಿ ಬಳಸಬಹುದಾದ National common mobility card (NCMC) ಗಳನ್ನು ಪರಿಚಯಿಸಲು ಯೋಜಿಸಿದೆ. ಬೆಂಗಳೂರು ನಗರದಲ್ಲಿ ಸಾರ್ವಜನಿಕ ಬಸ್ ಸೇವೆಗಳನ್ನು ಉತ್ತೇಜಿಸಲು ಹಾಗೂ ಸಾರಿಗೆ ವ್ಯವಸ್ಥೆಯನ್ನು ವಿಸ್ತರಿಸುವ ಸಲುವಾಗಿ ಏಷ್ಯನ್ ಡೆವಲಪ್ಮೆಂಟ್ ಬ್ಯಾಂಕಿನ (ADB) ಧನಸಹಾಯದೊಂದಿಗೆ ಬೆಂಗಳೂರು ಬಸ್ ಪುನಃಶ್ಚೇತನ ಕಾರ್ಯಕ್ರಮವನ್ನು (Bengaluru Bus Rejuvenation Programme) ಅನುಷ್ಠಾನಗೊಳಿಸಲು ಯೋಜಿಸಲಾಗಿದೆ.

ಇ)	ಕೋವಿಡ್ ದುಷ್ಪರಿಣಾಮದಿಂದ ಉಂಟಾದ ನಷ್ಟವನ್ನು ಸರಿಹೊಂದಿಸಲು ಇಲಾಖೆಯು ಕೈಗೊಂಡಿರುವ ಕ್ರಮಗಳು ಯಾವುವು;	**ಕೋವಿಡ್ ದುಷ್ಪರಿಣಾಮದಿಂದ ಉಂಟಾದ ನಷ್ಟವನ್ನು ಸರಿಹೊಂದಿಸಲು ಇಲಾಖೆಯು ಕೈಗೊಂಡಿರುವ ಕ್ರಮಗಳು :** ➢ ಸಂಚಾರ ದಟ್ಟಣೆ ಸಮಯಗಳಲ್ಲಿ ಹೆಚ್ಚು ಸುತ್ತುವಳಿಗಳನ್ನು ಅಳವಡಿಸಿ ಹಾಗೂ ಸಂಚಾರ ದಟ್ಟಣೆಯಿಲ್ಲದ ಸಮಯಗಳಲ್ಲಿ ಸುತ್ತುವಳಿಗಳನ್ನು ಕಡಿತಗೊಳಿಸಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ. ➢ ಆಗಿಂದಾಗ್ಗೆ, ಪ್ರಯಾಣಿಕರ ಬೇಡಿಕೆ ಮತ್ತು ಅವಶ್ಯಕತೆಗನುಗುಣವಾಗಿ ಅನುಸೂಚಿಗಳ ಪರಿಷ್ಕರಣೆ/ವಿಸ್ತರಣೆ/ರದ್ದತಿಗೊಳಿಸಲಾಗುತ್ತಿದೆ. ➢ ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸಿ ಸಾರಿಗೆ ಸೇವೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ. ➢ ಮೆಟ್ರೋ ರೈಲು ಪ್ರಯಾಣಿಕರಿಗೆ ಮೆಟ್ರೋ ರೈಲು ನಿಲ್ದಾಣದಿಂದ ವಾಸಸ್ಥಳಗಳಿಗೆ ತಲುಪಲು (first and last mile connectivity) ಮೆಟ್ರೋ ಫೀಡರ್ ಸೇವೆಗಳನ್ನು ಒದಗಿಸಲಾಗುತ್ತಿದೆ. ➢ ಮಾಸಿಕ ಮತ್ತು ದಿನದ ಪಾಸುಗಳ ಜೊತೆಗೆ ವಾರದ ಪಾಸುಗಳನ್ನು ಪರಿಚಯಿಸಲಾಗಿದೆ. ➢ ಸಂಸ್ಥೆಯ ಬಸ್ಸುಗಳ ಕಾರ್ಯಾಚರಣೆಗೆ ಪ್ರತ್ಯೇಕ ಪಥವನ್ನು ನಿರ್ಮಿಸಲಾಗಿದ್ದು, ಇದರಿಂದ ಪ್ರಯಾಣದ ಅವಧಿ ಕಡಿಮೆಗೊಂಡಿರುವುದಲ್ಲದೇ, ವಾಹನಗಳ ಉಪಯುಕ್ತತೆ ಹೆಚ್ಚಾಗಿ, ಅಧಿಕ ಸಂಖ್ಯೆಯಲ್ಲಿ ಸಾರ್ವಜನಿಕರು ಪ್ರಯಾಣಿಸುವಂತೆ ಉತ್ತೇಜಿಸಲಾಗುತ್ತಿದೆ. ➢ ಹವಾನಿಯಂತ್ರಿತ ವಜ್ರ ಸಾರಿಗೆಗಳಲ್ಲಿ ಸಾರ್ವಜನಿಕ ಪ್ರಯಾಣಿಕರನ್ನು ಆಕರ್ಷಿಸಲು, ವಜ್ರ ಸಾರಿಗೆಗಳ ಬಸ್ ಪ್ರಯಾಣ ದರ, ವಜ್ರ ದಿನದ ಪಾಸು ಮತ್ತು ಮಾಸಿಕ ಪಾಸುಗಳ ದರಗಳನ್ನು ದಿನಾಂಕ 01-01-2021 ರಿಂದ ಜಾರಿಗೆ ಬರುವಂತೆ ಕಡಿಮೆಗೊಳಿಸಿ ಪರಿಷ್ಕರಿಸಲಾಗಿದೆ. ➢ ವಜ್ರ ಸೇವೆಗಳಲ್ಲಿ ಸಾಮಾನ್ಯ ಸೇವೆಗಳ ಪಾಸುದಾರರು ಭಾನುವಾರಗಳಂದು ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.
ಈ)	ದೇಶದಲ್ಲಿಯೇ ಮಾದರಿ ಎಂದು ಖ್ಯಾತಿಗಳಿಸಿದ ಬಿಎಂಟಿಸಿ ಸಾರಿಗೆ ವ್ಯವಸ್ಥೆಯನ್ನು ಇನ್ನಷ್ಟು ಜನಪ್ರಿಯಗೊಳಿಸಲು ಇಲಾಖೆಯ ಮುಂದಿರುವ ಕ್ರಿಯಾಯೋಜನೆಗಳು ಯಾವುವು? (ವಿವರ ನೀಡುವುದು)	ಉಪ ಪ್ರಶ್ನೆ 'ಆ' ರಲ್ಲಿ ಉತ್ತರಿಸಲಾಗಿದೆ.

ಸಂಖ್ಯೆ: ಟಿಡಿ 104 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2547
ಸದಸ್ಯರ ಹೆಸರು	ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ)
ಉತ್ತರಿಸುವ ದಿನಾಂಕ	17.03.2021
ಉತ್ತರಿಸುವ ಸಚಿವರು	ಕೃಷಿ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಮುಂಗಾರು ಬಿತ್ತನೆಗಾಗಿ ಸೋಯಾಬಿನ್ ಮತ್ತು ಹೆಸರು ಪ್ರಮಾಣೀಕೃತ ಬೀಜಗಳ ಪೂರೈಕೆಯಲ್ಲಿ ಪದೇ ಪದೇ ಕೊರತೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ರಾಜ್ಯದಲ್ಲಿ ಮುಂಗಾರು ಬಿತ್ತನೆಗಾಗಿ ಸೋಯಾಬೀನ್ ಮತ್ತು ಹೆಸರು ಪ್ರಮಾಣೀಕೃತ ಬೀಜಗಳ ಪೂರೈಕೆಯಲ್ಲಿ ಯಾವುದೇ ಕೊರತೆಯಿರುವುದಿಲ್ಲ.
ಆ	ಹಾಗಿದ್ದಲ್ಲಿ, ರಾಜ್ಯದ್ಲಲಿ ಸೋಯಾಬಿನ್ ಮತ್ತು ಹೆಸರು ಬಿತ್ತನೆಯ ಜಿಲ್ಲೆಗಳಾವುವು?	ಸೋಯಾಬೀನ್ ಮತ್ತು ಹೆಸರು ಬಿತ್ತನೆಯ ಜಿಲ್ಲೆಗಳನ್ನು ಅನುಬಂಧ -1 ರಲ್ಲಿ ನೀಡಿದೆ.
ಇ	ರೈತರ ಬೇಡಿಕೆಗೆ ತಕ್ಕಂತೆ ಪ್ರಮಾಣೀಕೃತ ಬೀಜಗಳನ್ನು ಎಷ್ಟು ಪ್ರಮಾಣದಲ್ಲಿ ಸಂಗ್ರಹಿಸಿಡಲಾಗಿದೆ?(ಜಿಲ್ಲಾವಾರು ಮಾಹಿತಿ ನೀಡುವುದು)	ರಾಜ್ಯದಲ್ಲಿ 2021ರ ಮುಂಗಾರು ಹಂಗಾಮಿಗೆ ಸೋಯಾಅವರೆ ಮತ್ತು ಹೆಸರು ಬಿತ್ತನೆ ಬೀಜಗಳ ಸರಬರಾಜಿಗಾಗಿ ಟೆಂಡರ್ ಕರೆಯಲಾಗಿದೆ. ಮುಂಗಾರು ಹಂಗಾಮಿನ ಪ್ರಾರಂಭಕ್ಕಿಂತ ಮುಂಚೆ ಅವಶ್ಯವಿರುವ ಬಿತ್ತನೆ ಬೀಜಗಳನ್ನು ಜಿಲ್ಲಾವಾರು ದಾಸ್ತಾನು ಮಾಡಲಾಗುವುದು.

ಸಂಖ್ಯೆ: AGRI-ACT/50/ 2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಅನುಬಂಧ-1

ರಾಜ್ಯದಲ್ಲಿ ಸೋಯಾಅವರೆ ಮತ್ತು ಹೆಸರು ಬೆಳೆಯುವ ಜಿಲ್ಲೆಗಳು

ಕ್ರ.ಸಂ.	ಹೆಸರು ಬೆಳೆಯುವ ಜಿಲ್ಲೆಗಳು
1	ಬಾಗಲಕೋಟೆ
2	ಬೆಳಗಾವಿ
3	ಬಳ್ಳಾರಿ
4	ಬೀದರ್
5	ವಿಜಯಪುರ
6	ಚಾಮರಾಜನಗರ
7	ಚಿಕ್ಕಮಗಳೂರು
8	ಚಿತ್ರದುರ್ಗ
9	ಧಾರವಾಡ
10	ಗದಗ್
11	ಕಲಬುರ್ಗಿ
12	ಹಾಸನ
13	ಹಾವೇರಿ
14	ಕೊಪ್ಪಳ
15	ಮಂಡ್ಯ
16	ಮೈಸೂರು
17	ರಾಯಚೂರು
18	ತುಮಕೂರು
19	ಯಾದಗಿರಿ

ಕ್ರ.ಸಂ.	ಸೋಯಾಅವರೆ ಬೆಳೆಯುವ ಜಿಲ್ಲೆಗಳು
1	ಬಾಗಲಕೋಟೆ
2	ಬೆಳಗಾವಿ
3	ಬೀದರ್
4	ಧಾರವಾಡ
5	ಕಲಬುರ್ಗಿ
6	ಹಾವೇರಿ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2548
ಸದಸ್ಯರ ಹೆಸರು	ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ)
ಉತ್ತರಿಸುವ ದಿನಾಂಕ	17/03/2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಪ್ರತಿ ವರ್ಷ ಮುಂಗಾರು ಹಂಗಾಮಿನಲ್ಲಿ ಬೇವು ಮಿಶ್ರಿತ ಯೂರಿಯಾ ಗೊಬ್ಬರದ ಕೊರತೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕಳೆದ ಮುಂಗಾರು ಹಂಗಾಮಿನಲ್ಲಿ ರಾಜ್ಯದಲ್ಲಿ ಉತ್ತಮ ಮಳೆಯಾಗಿರುವ ಕಾರಣ ಬೆಳೆಗಳ ಬಿತ್ತನೆ ವಿಸ್ತೀರ್ಣ ಹೆಚ್ಚಾಗಿದ್ದು, ಜಿಲ್ಲೆಗಳಲ್ಲಿ ಬೇವು ಮಿಶ್ರಿತ ಯೂರಿಯಾ ರಸಗೊಬ್ಬರದ ಹೆಚ್ಚಿನ ಬೇಡಿಕೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ	ಮುಂಬರುವ ದಿನಗಳಲ್ಲಿ ಯೂರಿಯಾ ಗೊಬ್ಬರದ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಯೂರಿಯಾ ರಸಗೊಬ್ಬರವನ್ನು ಸಮರ್ಪಕವಾಗಿ ವಿತರಣೆ ಮಾಡಲು ವಹಿಸಲಾಗುತ್ತಿರುವ ಕ್ರಮಗಳು: ➢ ಸರ್ಕಾರದಿಂದ ಪ್ರತಿ ಹಂಗಾಮಿನ ಪೂರ್ವದಲ್ಲಿಯೇ ಬಿತ್ತನೆ ಕ್ಷೇತ್ರ, ಬಿತ್ತನೆ ಸಮಯ, ಬಿತ್ತನೆ ಮಳೆ ಪ್ರಮಾಣವನ್ನು ಆಧರಿಸಿ, ಬೇಡಿಕೆಯನ್ನು ಸಲ್ಲಿಸಲಾಗುತ್ತದೆ. ಅದರಂತೆ ಪ್ರಸ್ತುತ ವರ್ಷ ಮುಂಬರುವ ಹಂಗಾಮಿಗೆ ಈಗಾಗಲೇ ಜಿಲ್ಲೆಗಳಿಂದ ಕೇಂದ್ರ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಮಾಹೆವಾರು ಹಂಚಿಕೆ ಮಾಡಲಾಗುವ ವಿವಿಧ ರಸಗೊಬ್ಬರಗಳನ್ನು ಜಿಲ್ಲಾವಾರು ಬೇಡಿಕೆಗನುಗುಣವಾಗಿ ನಿಗಧಿಪಡಿಸಿ, ರಸಗೊಬ್ಬರ ತಯಾರಕಾ ಸಂಸ್ಥೆಯವರಿಂದ ನೇರವಾಗಿ ಮಹಾಮಂಡಳ, ಸಹಕಾರ ಸಂಘಗಳು ಹಾಗು ಚಿಲ್ಲರೆ ಪರಿಕರ ಮಾರಾಟಗಾರರ ಮುಖಾಂತರ ಸಮರ್ಪಕ ರೀತಿಯಲ್ಲಿ ರೈತರಿಗೆ ವಿತರಿಸಲು ಕ್ರಮ ವಹಿಸಲಾಗಿದೆ. ➢ ಪ್ರಸ್ತುತ ರಾಜ್ಯದಲ್ಲಿ ಮುಂಗಾರು ಹಂಗಾಮಿಗೆ ಕಾಪು ದಾಸ್ತಾನು ಯೋಜನೆಯಡಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯ ಗೋದಾಮಿನಲ್ಲಿ ಅವಶ್ಯವಿರುವ ಯೂರಿಯಾ ರಸಗೊಬ್ಬರವನ್ನು ದಾಸ್ತಾನು ಮಾಡಲು ಕ್ರಮ ವಹಿಸಲಾಗಿದೆ. ➢ ರಸಗೊಬ್ಬರ ತಯಾರಕ ಸಂಸ್ಥೆಗಳ ಪ್ರತಿನಿಧಿಗಳೊಡನೆ ಪ್ರತಿ ವಾರ ವಿಡಿಯೋ

		ಕಾನ್ಫರೆನ್ಸ್ ಮುಖಾಂತರ ಸಭೆ ನಡೆಸಿ ರಾಜ್ಯಕ್ಕೆ ರಸಗೊಬ್ಬರದ ಸಮರ್ಪಕ ನಿರ್ವಹಣೆಗೆ ಕ್ರಮವಹಿಸಲಾಗುವುದು. ಸಭೆಯಲ್ಲಿ ಚರ್ಚಿಸಿ ರಸಗೊಬ್ಬರದ ರೇಕುಗಳು ನಿಲುಗಡೆಯಾಗಿದ್ದಲ್ಲಿ ರೈಲ್ವೆ ಇಲಾಖಾಧಿಕಾರಿಗಳೊಡನೆ ಸಂಪರ್ಕ ಪಡೆದು ರಾಜ್ಯಕ್ಕೆ ಸಕಾಲದಲ್ಲಿ ರಸಗೊಬ್ಬರ ಸರಬರಾಜಾಗಲು ಕ್ರಮವಹಿಸಲಾಗುವುದು. ➢ ಪ್ರತಿ ಜಿಲ್ಲೆಯಲ್ಲಿಯೂ ಸಹಾಯಕ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ವಿಜಿಲೆನ್ಸ್ ತಂಡಗಳನ್ನು ರಚಿಸಲಾಗಿದ್ದು, ತಂಡದ ಸದಸ್ಯರು ಮತ್ತು ರಾಜ್ಯದಲ್ಲಿ ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ಅವರ ವ್ಯಾಪ್ತಿಯಲ್ಲಿನ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಮಾರಾಟ ಮಳಿಗೆಗಳು ನಿಗದಿತ ದರಕ್ಕಿಂತ ಹೆಚ್ಚಿನ ಮಾರಾಟ ದರಕ್ಕೆ ಮಾರಾಟ ಮಾಡುವುದು ಮತ್ತು ಕೃತಕ ಅಭಾವ ಸೃಷ್ಟಿಯಾಗುವುದನ್ನು ತಡೆಯಲು ಮಳಿಗೆದಾರರ ಮೇಲೆ ರಸಗೊಬ್ಬರ ನಿಯಂತ್ರಣ ಆದೇಶ 1985 ರನ್ವಯ ಸೂಕ್ತ ಕ್ರಮ ವಹಿಸಲಾಗುತ್ತಿದೆ. ➢ ರಾಜ್ಯದಲ್ಲಿ, ಇಲಾಖೆಯ ರಸಗೊಬ್ಬರ ಪರಿವೀಕ್ಷಕರು ಮಳಿಗೆಗಳ ತಪಾಸಣೆ ನಡೆಸಿ ಯೂರಿಯಾ ರಸಗೊಬ್ಬರವನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವ 612 ರಸಗೊಬ್ಬರ ಮಳಿಗೆದಾರರ ಪರವಾನಗಿಯನ್ನು ಅಮಾನತು/ ರದ್ದುಗೊಳಿಸಲಾಗಿದೆ.

ಸಂಖ್ಯೆ: AGRI-ACT/49/ 2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2549
ಸದಸ್ಯರ ಹೆಸರು	:	ಶ್ರೀಮತಿ ಸೌಮ್ಯ ರೆಡ್ಡಿ (ಜಯನಗರ)
ಉತ್ತರಿಸುವ ಸಚಿವರು	:	ತೋಟಗಾರಿಕೆ ಮತ್ತು ರೇಷ್ಮೆ ಸಚಿವರು
ಉತ್ತರಿಸಬೇಕಾದ ದಿನಾಂಕ	:	17.03.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಉದ್ಯಾನವನಗಳ ಸಮರ್ಪಕ ನಿರ್ವಹಣೆಗೆ ತೋಟಗಾರಿಕೆ ಇಲಾಖೆಯು ಕೈಗೊಂಡಿರುವ ಕ್ರಮಗಳೇನು;	ಉದ್ಯಾನವನಗಳ ಸಮರ್ಪಕ ನಿರ್ವಹಣೆಗೆ ತೋಟಗಾರಿಕೆ ಇಲಾಖೆಯು ಕೈಗೊಂಡಿರುವ ಕ್ರಮಗಳ ವಿವರಗಳು ಕೆಳಕಂಡಂತಿವೆ. 1. ಉದ್ಯಾನವನಗಳ ಸಮರ್ಪಕ ನಿರ್ವಹಣೆಗೆ ತೋಟಗಾರಿಕೆ ಉದ್ಯಾನವನಗಳು ಮತ್ತು ತೋಟಗಳು ಯೋಜನೆಯನ್ನು ರೂಪಿಸಲಾಗಿದೆ. 2. ಉದ್ಯಾನವನದಲ್ಲಿ ಗಿಡಗಳ ಸುತ್ತ ಪಾತಿ ಮಾಡುವುದು, ನಾಟಿ ಮಾಡುವುದು, ಕಸಿ ಕಟ್ಟುವುದು, ಗೊಬ್ಬರ ಹಾಕುವುದು, ಟ್ರಿಮ್ಮಿಂಗ್ ಕಾರ್ಯ ಮತ್ತು ಉದ್ಯಾನವನಗಳ ಸಸ್ಯಾಗಾರಗಳಲ್ಲಿ ಗಿಡಗಳ ಪಾಲನೆ ಸಂಬಂಧಿತ ಚಟುವಟಿಕೆ ಕಾರ್ಯಗಳನ್ನು ಕೈಗೊಳ್ಳಲು ತೋಟಗಾರರಿಂದ ಕಾರ್ಯ ನಿರ್ವಹಿಸಲಾಗುತ್ತಿದೆ. 3. ಉದ್ಯಾನವನಗಳಲ್ಲಿ ಶುಚಿತ್ವವನ್ನು ಕಾಪಾಡಲು ಸ್ವಚ್ಛತಾ ನಿರ್ವಹಣಾ ಸೇವೆಯನ್ನು ಮತ್ತು ಸುರಕ್ಷತೆಗಾಗಿ ಭದ್ರತಾ ಸೇವೆಯನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲಾಗುತ್ತಿದೆ. 4. ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಆಗ್ಗಿಂದಾಗ್ಯೆ ಉದ್ಯಾನವನಗಳಲ್ಲಿ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. 5. ಉದ್ಯಾನವನಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದೆ. 6. ಅವಶ್ಯ ನಾಮ ಫಲಕಗಳು ಮತ್ತು ಸೂಚನಾ ಫಲಕಗಳನ್ನು ಪ್ರಮುಖ ಸ್ಥಳಗಳಲ್ಲಿ ಅಳವಡಿಸಲಾಗಿದೆ. 7. ಉದ್ಯಾನವನಗಳಲ್ಲಿ ಪರಿಸರವನ್ನು ಕಾಪಾಡಲು ವಾಹನಗಳ ಓಡಾಟವನ್ನು ನಿಷೇಧಿಸಲಾಗಿದೆ ಹಾಗೂ ಪರಿಸರ ಸ್ನೇಹಿ ಇಕೋ ವಾಹನಗಳನ್ನು ಪರಿಚಯಿಸಲಾಗಿದೆ. 8. ಮಳೆ ನೀರು ಸಂಗ್ರಹಿಸುವ ಮೂಲಕ ಅಂತರ್ಜಲ ವೃದ್ಧಿಸಲು ಇಂಗು ಗುಂಡಿಗಳನ್ನು ನಿರ್ಮಿಸಲಾಗಿದೆ. 9. ಲಾಲ್ ಬಾಗ್ ಮತ್ತು ಕಬ್ಬನ್ ಉದ್ಯಾನವನಗಳಲ್ಲಿ ತ್ಯಾಜ್ಯ ನೀರು ಶುದ್ಧೀಕರಣ ಘಟಕದಿಂದ ಉದ್ಯಾನವನಕ್ಕೆ ಸ್ಪ್ರಿಂಕ್ಲರ್ ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. 10. ಸೂಕ್ತ ಪ್ರದೇಶಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.

		11. ಅಲಂಕಾರಿಕ ಗಿಡಗಳಿಗಾಗಿ ಅವಶ್ಯ ಗೊಬ್ಬರ, ಬೇವಿನಹಿಂಡಿ, ರೋಗನಾಶಕ, ಕೀಟನಾಶಕಗಳನ್ನು ಒದಗಿಸಲಾಗುತ್ತಿದೆ. 12. ವಿದ್ಯುತ್ ದೀಪಗಳು, ನೀರಾವರಿ ಪೈಪ್ ಲೈನ್ ಗಳ ದುರಸ್ತಿ ಕಾರ್ಯ ಮತ್ತು ಇತರೆ ಅವಶ್ಯ ನಿರ್ವಹಣಾ ಕಾರ್ಯಗಳನ್ನು ಕಾಲಕಾಲಕ್ಕೆ ಕೈಗೊಳ್ಳಲಾಗುತ್ತಿದೆ. 13. ಉದ್ಯಾನವನಗಳಲ್ಲಿ ಸಸ್ಯಸಂಪತ್ತನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಎಲ್ಲಾ ಅವಶ್ಯ ನಿರ್ವಹಣಾ ಕಾರ್ಯಗಳನ್ನು ಕಾಲಕಾಲಕ್ಕೆ ಕೈಗೊಳ್ಳಲಾಗುತ್ತಿದೆ.
ಆ)	ಉದ್ಯಾನವನಗಳ ನಿರ್ವಹಣೆ ಮಾಡುತ್ತಿರುವ ನೌಕರರಿಗೆ ಇಲ್ಲಿಯ ತನಕ ಯಾವುದೇ ರೀತಿಯ ವೇತನ ಮಂಜೂರಾಗಿಲ್ಲದಿರುವುದಕ್ಕೆ ಕಾರಣವೇನು; ಈ ನೌಕರರಿಗೆ ಯಾವಾಗ ವೇತನವನ್ನು ನೀಡಲಾಗುವುದು?	ಉದ್ಯಾನವನಗಳ ನಿರ್ವಹಣೆ ಮಾಡುತ್ತಿರುವ ನೌಕರರಿಗೆ ಕಾಲಕಾಲಕ್ಕೆ ವೇತನ ಮಂಜೂರು ಮಾಡಲಾಗುತ್ತಿದೆ.

ಸಂಖ್ಯೆ: HORTI 153 HGM 2021

(ಆರ್. ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2552
2. ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಸೌಮ್ಯಾರೆಡ್ಡಿ (ಜಯನಗರ)
3. ಉತ್ತರಿಸಬೇಕಾದ ದಿನಾಂಕ : 17/3/2021
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
1	ಮನೆ ಕೆಲಸ ಮಾಡುವ ಮಹಿಳೆಯರಿಗೆ ಇದುವರೆಗೆ ಸರ್ಕಾರದಿಂದ ಯಾವುದೇ ರೀತಿಯ ಸೌಲಭ್ಯ ನೀಡದೇ ಅವರಿಗೆ ಕಾರ್ಡ್ ಮಾತ್ರ ವಿತರಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?	ಮನೆಗೆಲಸ ಮಾಡುವ ಮಹಿಳೆಯರಿಗೆ ಸೌಲಭ್ಯಗಳನ್ನು ಒದಗಿಸಲು **"ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ"** ಉದ್ದಿಮೆಯನ್ನು 2000 ನೇ ಸಾಲಿನಲ್ಲಿ ಕನಿಷ್ಠ ವೇತನ ಕಾಯ್ದೆ 1948ರ ಅನುಸೂಚಿಗೆ ಸೇರ್ಪಡೆಗೊಳಿಸಿ, 2004 ರಲ್ಲಿ ಪ್ರಥಮ ಬಾರಿಗೆ ಕನಿಷ್ಠ ವೇತನ ದರಗಳನ್ನು ನಿಗಧಿಪಡಿಸಿ, ಕಾಲಕಾಲಕ್ಕೆ ಪರಿಷ್ಕರಣೆ ಮಾಡಲಾಗುತ್ತದೆ. ಪ್ರಸ್ತುತ, 2020-21 ನೇ ಸಾಲಿನ ಕನಿಷ್ಠ ವೇತನ ದರಗಳ ಪಟ್ಟಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ, ಮನೆಗೆಲಸದವರು ಸೇರಿದಂತೆ ಒಟ್ಟು 5 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ 'ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ'ಯಡಿ ನೊಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಈವರೆಗೆ 39,394 ಮನೆಗೆಲಸದಲ್ಲಿ ತೊಡಗಿರುವ ಮಹಿಳೆಯರನ್ನು ನೊಂದಾಯಿಸಲಾಗಿದೆ. ಪ್ರಸ್ತುತ ಮನೆಗೆಲಸ ಮಾಡುವ ಮಹಿಳೆಯರಿಗೆ ಪ್ರತ್ಯೇಕವಾಗಿ ಯಾವುದೇ ಯೋಜನೆಯನ್ನು ಈ ಮಂಡಳಿಯ ಮೂಲಕ ಜಾರಿಗೊಳಿಸುತ್ತಿಲ್ಲ.

ಸಂಖ್ಯೆ: ಕಾಇ 128 ಎಲ್‌ಇಟಿ 2021

16/3/2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

28. Employment in Residential Houses including Domestic Helpers, Child Care Assistants, Home Nurses and Allied Domestic Works.

Notification No. KAE 1 LMW 2015, dated 16.09.2016

Published in Gazette dated 06.10.2016.

Minimum Wages With effect from 16-09-2016.

Cost of Living Allowance to be paid over and above 5780 point

Cost of Living Index: 7616 – 5780 = 1836 points

Minimum wages and VDA from 01-04-2020 to 31-03-2021

SCHEDULE

Sl. No	Class of Employment		Minimum Rates of Wages					
			Zone-1		Zone-2		Zone-3	
			Per Day	Per Month	Per Day	Per Month	Per Day	Per Month
1	2		3	4	5	6	7	8
1	Washing and cleaning and cutting of vegitables/Non Veg Items, Grinding, cooking and Cleaning of Kitchen etc	Basic VDA Total	435.00 84.74 519.74	11830.00 2203.20 14033.20	445.00 84.74 529.74	11570.00 2203.20 13773.20	415.00 84.74 499.74	10790.00 2203.20 12993.20
2	Washing the clothes/ Washing the Utensils/ House keeping and cleaning of house and looking after Childrens.	Basic VDA Total	395.00 84.74 479.74	10270.00 2203.20 12473.20	385.00 84.74 469.74	10010.00 2203.20 12213.20	360.00 84.74 444.74	9360.00 2203.20 11563.20
3	Washing the clothes / House keeping and Cleaning amd other related works	Basic VDA Total	385.00 84.74 469.74	10010.00 2203.20 12213.20	375.00 84.74 459.74	9750.00 2203.20 11953.20	350.00 84.74 434.74	9100.00 2203.20 11303.20

Zone-I: Bruhat Bangalore Mahanagara Palike and Agglomeration Areas and other

Zone-II: Shall Comprise all District Head Quarters Except Zone-I

Zone-III: Shall Comprise other areas, which are not covered in Zone-I & Zone-II

V.D.A : In addition to the basic wages, all Category of Employees in the State shall be paid V.D.A. at the rate of 4 Paise per point over and above 5780 points.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2565

ಸದಸ್ಯರ ಹೆಸರು : ಡಾ|| ಯತೀಂದ್ರ ಸಿದ್ದರಾಮಯ್ಯ (ವರುಣ),

ಉತ್ತರಿಸುವ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಲ್ಲಿ ಎಷ್ಟು ಜನ ರೈತರಿಗೆ ಕೃಷಿ ಸಲಕರಣೆಗಳನ್ನು ಒದಗಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)	ಕಳೆದ ಎರಡು ವರ್ಷಗಳಲ್ಲಿ ಎಸ್.ಸಿ.ಪಿ ಯೋಜನೆಯಡಿ 23240 ರೈತರಿಗೆ ಹಾಗೂ ಟಿ.ಎಸ್.ಪಿ ಯೋಜನೆಯಡಿ 15508 ರೈತರಿಗೆ (ಫೆಬ್ರುವರಿ-2021 ರ ಅಂತ್ಯಕ್ಕೆ) ಕೃಷಿ ಸಲಕರಣೆಗಳನ್ನು ಒದಗಿಸಲಾಗಿದೆ. ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಿದೆ.
ಆ.	ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ ಒದಗಿಸಿದ ಸಲಕರಣೆಗಳು ದುರುಪಯೋಗವಾಗಿರುವ ಬಗ್ಗೆ ದಾಖಲಾಗಿರುವ ಪ್ರಕರಣಗಳು ಎಷ್ಟು;	ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ.
ಇ.	ದುರುಪಯೋಗ ಪಡಿಸಿಕೊಂಡವರ ವಿರುದ್ಧ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)	ಉದ್ಭವಿಸುವುದಿಲ್ಲ.

ಸಂಖ್ಯೆ: AGRI-AML/79/2021

(ಬಿ.ಸಿ. ಪಾಟೀಲ)
ಕೃಷಿ ಸಚಿವರು

ಅನುಬಂಧ

(ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2565)

2019-20 ಮತ್ತು 20-21ನೇ ಸಾಲಿಗೆ (ಫೆಬ್ರುವರಿ-2021 ರ ಅಂತ್ಯಕ್ಕೆ) ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ ವಿತರಿಸಲಾದ ಕೃಷಿ ಯಂತ್ರೋಪಕರಣಗಳ ಜಿಲ್ಲಾವಾರು ಫಲಾನುಭವಿಗಳ ಸಂಖ್ಯೆಯ ವಿವರ

ಕ್ರ. ಸಂ.	ಜಿಲ್ಲೆ	2019-20		2020-21 (ಫೆಬ್ರುವರಿ ಅಂತ್ಯಕ್ಕೆ)	
		ಎಸ್.ಸಿ.ಪಿ	ಟಿ.ಎಸ್.ಪಿ	ಎಸ್.ಸಿ.ಪಿ	ಟಿ.ಎಸ್.ಪಿ
1	ಬಾಗಲಕೋಟೆ	206	151	232	330
2	ಬೆಂಗಳೂರು	464	583	83	15
3	ಬೆಳಗಾವಿ	461	480	544	502
4	ಬಳ್ಳಾರಿ	477	690	512	529
5	ಬೀದರ್	152	77	118	48
6	ವಿಜಯಪುರ	853	65	1797	64
7	ಚಾಮರಾಜನಗರ	314	361	269	77
8	ಚಿಕ್ಕಬಳ್ಳಾಪುರ	369	218	205	167
9	ಚಿಕ್ಕಮಗಳೂರು	302	26	245	25
10	ಚಿತ್ರದುರ್ಗ	637	1550	805	1010
11	ದಕ್ಷಿಣ ಕನ್ನಡ	151	70	41	37
12	ದಾವಣಗೆರೆ	1353	1082	709	611
13	ಧಾರವಾಡ	45	78	135	359
14	ಗದಗ	173	161	535	522
15	ಕಲಬುರಗಿ	726	83	742	75
16	ಹಾಸನ	614	58	540	84
17	ಹಾವೇರಿ	193	262	267	226
18	ಕೊಡಗು	286	70	49	27
19	ಕೋಲಾರ	331	137	277	70
20	ಕೊಪ್ಪಳ	212	225	151	182
21	ಮಂಡ್ಯ	1642	149	74	11
22	ಮೈಸೂರು	1024	660	597	79
23	ರಾಯಚೂರು	472	897	447	1188
24	ರಾಮನಗರ	191	29	99	17
25	ಶಿವಮೊಗ್ಗ	306	91	146	47
26	ತುಮಕೂರು	357	293	376	176
27	ಉಡುಪಿ	71	43	46	54
28	ಉತ್ತರ ಕನ್ನಡ	102	26	44	35
29	ಯಾದಗಿರಿ	359	284	312	42
	ಒಟ್ಟು	12843	8899	10397	6609

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2572
ಸದಸ್ಯರ ಹೆಸರು	ಶ್ರೀ ಖಾದರ್ ಯು.ಟಿ. (ಮಂಗಳೂರು)
ಉತ್ತರಿಸುವ ದಿನಾಂಕ	17.03.2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಭತ್ತದ ಬೇಸಾಯಕ್ಕೆ ಪ್ರೋತ್ಸಾಹ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು)	ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ -ಅಕ್ಕಿ ಯೋಜನೆಯಡಿ ವಾರ್ಷಿಕ ಕಾರ್ಯಕ್ರಮವಿದ್ದು, ನೂತನ ಹಾಗೂ ಸುಧಾರಿತ ಕೃಷಿ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವ ಮೂಲಕ ಬೆಳೆ ಉತ್ಪಾದನೆ ಹೆಚ್ಚಿಸಲು ಹಾಗೂ ಮಣ್ಣಿನ ಫಲವತ್ತತೆಯ ಸಂರಕ್ಷಣೆ ನಿರ್ವಹಿಸಲು ಆಯ್ದ 7 ಜಿಲ್ಲೆಗಳಲ್ಲಿ ಅಂದರೆ ಬೆಳಗಾವಿ, ಹಾವೇರಿ, ದಕ್ಷಿಣ ಕನ್ನಡ, ಶಿವಮೊಗ್ಗ, ಉತ್ತರ ಕನ್ನಡ, ಉಡುಪಿ, ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಭತ್ತದ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ರೈತರಿಗೆ ಪ್ರಾತ್ಯಕ್ಷತೆಗಳನ್ನು ಹಾಗೂ ಬಿತ್ತನೆ ಬೀಜ, ಪರಿಕರ, ಹಸಿರೆಲೆ ಗೊಬ್ಬರ, ಸಮರ್ಥ ನೀರಾವರಿ ಸಾಧನಗಳು ಹಾಗೂ ಯಂತ್ರೋಪಕರಣಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ವಿತರಿಸಲು ಕ್ರಮವಹಿಸಲಾಗಿರುತ್ತದೆ ವಿವರಗಳನ್ನು ಅನುಬಂಧದಲ್ಲಿ ನೀಡಿದೆ.

ಸಂಖ್ಯೆ: AGRI-ACT/46/ 2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಅನುಬಂಧ

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ -ಅಕ್ಕಿ ಯೋಜನೆಯಡಿ ರೈತರಿಗೆ ನೀಡಲಾಗುವ ಘಟಕಗಳ ವಿವರಗಳು

ಕ್ರ. ಸಂ	ಘಟಕಗಳು	ವಿವರಗಳು	ಶೇ. 50 ರ ಅನುಮೋದಿತ ಗರಿಷ್ಠ ಸಹಾಯಧನ
1	ಬಿತ್ತನೆ ಬೀಜ	ಸಂಕರಣ/ಅಧಿಕ ಇಳುವರಿ ತಳಿಗಳ ಬಿತ್ತನೆ ಬೀಜಗಳ ವಿತರಣೆ	ರೂ.100/ರೂ.10 ಪ್ರತಿ ಕೆಜಿಗೆ
2	ಪ್ರಾತ್ಯಕ್ಷತೆಗಳು	ಭತ್ತದ ನೇರ ಬಿತ್ತನೆ ಪ್ರಾತ್ಯಕ್ಷಿಕೆ	ರೂ.9000/ಹೆ
		ಅಕ್ಕಿ ಬೆಳೆಯಲ್ಲಿ ಯಾಂತ್ರೀಕೃತ ನಾಟಿ ಪ್ರಾತ್ಯಕ್ಷಿಕೆ	
		ಅಕ್ಕಿ ಬೆಳೆಯಲ್ಲಿ SRI ಪ್ರಾತ್ಯಕ್ಷಿಕೆ	
		ಒತ್ತಡ ಸಹಿಷ್ಣುತೆ (ಬರ ನಿರೋಧಕ) ತಳಿ ಪ್ರಾತ್ಯಕ್ಷಿಕೆ	
3	ಸಮಗ್ರ ಪೋಷಕಾಂಶ ನಿರ್ವಹಣೆ	ಅ) ಲಘು ಪೋಷಕಾಂಶಗಳು	ಪ್ರತಿ ಹೆಕ್ಟೇರ್ ಗೆ ರೂ.500/-
		ಆ) ಕೃಷಿ ಸುಣ್ಣ	ಪ್ರತಿ ಹೆಕ್ಟೇರ್ ಗೆ ರೂ.1000/-
4	ಸಸ್ಯ ಸಂರಕ್ಷಣೆ ನಿರ್ವಹಣೆ	ಅ) ಸಸ್ಯ ಸಂರಕ್ಷಣಾ ಔಷಧಿಗಳು	ಪ್ರತಿ ಹೆಕ್ಟೇರ್ ಗೆ ರೂ.500/-
		ಆ) ಕಳೆನಾಶಕಗಳು	ಪ್ರತಿ ಹೆಕ್ಟೇರ್ ಗೆ ರೂ.500/-
5	ಸಂಪನ್ಮೂಲ ಸಂರಕ್ಷಣಾ ತಾಂತ್ರಿಕತೆಗಳು/ ಸಾಧನಗಳು	ಅ) ಕೋನೊವಿಡರ್	ಪ್ರತಿ ಘಟಕಕ್ಕೆ ರೂ.1000 -1200/-
		ಆ) ಪವರ್ ಸ್ಪ್ರೇಯರ್	ಪ್ರತಿ ಘಟಕಕ್ಕೆ ರೂ.2500 -3100/-
		ಇ)ಸೆಲ್ಫ್ ಪ್ರೊಪೆಲ್ಡ್ ಭತ್ತದ ನಾಟಿ ಯಂತ್ರ	ಪ್ರತಿ ಘಟಕಕ್ಕೆ ರೂ.120000-150000/-
		ಈ)ರೋಟೊವೇಟರ್	ಪ್ರತಿ ಘಟಕಕ್ಕೆ ರೂ. 34000-42000/-
		ಉ) ಪವರ್ ವೀಡರ್	ಪ್ರತಿ ಘಟಕಕ್ಕೆ ರೂ. 20000-25000/-
		ಊ) ಭತ್ತದ ರೀಪರ್	ಪ್ರತಿ ಘಟಕಕ್ಕೆ ರೂ. 38800 48500/-
		ಋ) ಚಾಪ್ ಕಟರ್ (ಕೈ ಚಾಲಿತ)	ಪ್ರತಿ ಘಟಕಕ್ಕೆ ರೂ. 4000 5000/-
		ಒ) ಭತ್ತದ ಬೇಲರ್	ಪ್ರತಿ ಘಟಕಕ್ಕೆ ರೂ. 120000 150000/-
	ಸಮರ್ಥ ನೀರಾವರಿ ಸಾಧನಗಳು	ಅ) ಪಂಪ್ ಸೆಟ್‌ಗೆ ಪ್ರೋತ್ಸಾಹ ಧನ	ಪ್ರತಿ ಘಟಕಕ್ಕೆ ರೂ.10000/-
	ಸ್ಥಳೀಯ ಪ್ರೇರಕಗಳು	ಅ) ಹಸಿರೆಲೆ ಗೊಬ್ಬರ ಬೀಜ ವಿತರಣೆ	ಶೆ.50 ರ ರಿಯಾಯಿತಿ, ಗರಿಷ್ಟ ಪ್ರತಿ ಹೆಕ್ಟೇರ್ ಗೆ ರೂ.2000/-

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2722
ಸದಸ್ಯರ ಹೆಸರು	ಶ್ರೀ ಬಾಲಕೃಷ್ಣ ಸಿ.ಎನ್
ಉತ್ತರಿಸುವ ದಿನಾಂಕ	17/03/2021
ಉತ್ತರಿಸುವವರು	ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆಗಳು	ಉತ್ತರ
ಅ)	ರಾಜ್ಯದಲ್ಲಿ ರೇಷ್ಮೆ ಬೆಳೆ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡಿರುವ ಯೋಜನೆಗಳೇನು; (ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)	ರಾಜ್ಯದಲ್ಲಿ ರೇಷ್ಮೆ ಬೆಳೆ ಅಭಿವೃದ್ಧಿಗಾಗಿ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಂಡಿದೆ. 1. ರೇಷ್ಮೆ ಅಭಿವೃದ್ಧಿ ಯೋಜನೆ 2. ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕರ್ತೃತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತು ಯೋಜನೆ 3. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 4. ಬೆಲೆ ಸ್ಥಿರೀಕರಣ ನಿಧಿಯ ಅನುದಾನದಿಂದ ಅನುಷ್ಠಾನಗೊಳ್ಳುವ ಕಾರ್ಯಕ್ರಮಗಳು 5. ಕಟ್ಟಡ ಕಾಮಗಾರಿಗಳು ಯೋಜನೆ 6. ರೇಷ್ಮೆ ಗೂಡು ಮಾರುಕಟ್ಟೆಯ ನಿರ್ಮಾಣ ಯೋಜನೆ (ನಬಾರ್ಡ್) 7. ರೇಷ್ಮೆ ಉದ್ಯಮಗಳು ಯೋಜನೆ - (ವಸ್ತ್ರೋದ್ಯಮಗಳು) 8. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ 9. ಜಿಲ್ಲಾ / ತಾಲ್ಲೂಕು ವಲಯ ಯೋಜನೆಗಳು ಈ ಮೇಲ್ಕಂಡ ವಿವಿಧ ಯೋಜನೆಗಳಡಿ ಈ ಕೆಳಕಂಡ ಕಾರ್ಯಕ್ರಮಗಳನ್ನು ರೂಪಿಸಿ ರೇಷ್ಮೆ ಭಾಗೀದಾರರಿಗೆ ಸಹಾಯಧನ ಹಾಗೂ ಪ್ರೋತ್ಸಾಹಧನ ಸೌಲಭ್ಯಗಳನ್ನು ನೀಡಲಾಗುತ್ತಿದೆ. 1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ. 2.ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 3.ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ. 4.ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆ, ಹಿಪ್ಪುನೇರಳೆ ಸೊಪ್ಪಿನ ಇಳುವರಿ ಹಾಗೂ ಗುಣಮಟ್ಟ ಹೆಚ್ಚಿಸುವ ಸಲುವಾಗಿ ಸಸ್ಯ ಸಂವರ್ಧಕ ಹಾಗೂ ಬೇರು ಕೊಳೆ ನಿಯಂತ್ರಣಕ್ಕಾಗಿ ಸಹಾಯಧನ. 5.ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ.

----2

		6.ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ. 7.ರೋಟರಿ ಚಂದ್ರಿಕೆಗಳ ಖರೀದಿಗೆ ಸಹಾಯಧನ 8.ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ. 9.ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಖರೀದಿಗೆ ಸಹಾಯಧನ. 10.ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ. 11.ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ. 12.ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ. 13.ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. 14.ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ ನೀಡಲಾಗುತ್ತಿದೆ. 15.ರೀಲಿಂಗ್ ಶೆಡ್ ನಿರ್ಮಾಣಕ್ಕೆ ಸಹಾಯಧನ 16. ರೀಲಿಂಗ್ ಯಂತ್ರೋಪಕರಣಗಳ ಸ್ಥಾಪನೆಗೆ ಸಹಾಯಧನ, 17.ಬಾಯ್ಲರ್, ಸೋಲಾರ್ ವಾಟರ್ ಹೀಟರ್, ಜನರೇಟರ್, ಹೀಟ್ ರಿಕವರಿ ಯುನಿಟ್ ಖರೀದಿಗೆ ಸಹಾಯಧನ. 18.ಸ್ವಯಂಚಾಲಿತ ರೇಷ್ಮೆ ನೂಲು ಬಿಚ್ಚಾಣಿಕೆ ಘಟಕಗಳ (ARM) ಸ್ಥಾಪನೆಗೆ ಸಹಾಯಧನ. 19.ಪ್ಯೂಪಾ ಪ್ರೋಸೆಸಿಂಗ್ ಘಟಕ.
ಆ)	ರಾಜ್ಯದಲ್ಲಿ ರೇಷ್ಮೆ ಬೆಳೆ ಹೆಚ್ಚಳಗೊಳಿಸಲು ವಿಶೇಷ ಅನುದಾನ ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಕೇಂದ್ರ ಪುರಸ್ಕೃತ ಸಿಲ್ಕ್ ಸಮಗ್ರ ಯೋಜನೆಯಡಿ ವಿವಿಧ ಫಲಾನುಭವಿ ಆಧಾರಿತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ರೇಷ್ಮೆ ಮಂಡಳಿಯು ಅನುದಾನವನ್ನು ಒದಗಿಸಿರುತ್ತದೆ. ರಾಜ್ಯ ವಲಯ ಯೋಜನೆಗಳಡಿ ಒದಗಿಸಿರುವ ಅನುದಾನ ಹಾಗೂ ಕೇಂದ್ರ ರೇಷ್ಮೆ ಮಂಡಳಿಯು ಒದಗಿಸಿರುವ ಅನುದಾನವನ್ನು ಬಳಸಿಕೊಂಡು ವಿವಿಧ ಫಲಾನುಭವಿ ಆಧಾರಿತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ರಾಜ್ಯದಲ್ಲಿ ರೇಷ್ಮೆ ಬೆಳೆ ಹೆಚ್ಚಳಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಸಂಖ್ಯೆ: ರೇಷ್ಮೆ 07 ರೇಯೋವಿ 2021

(ಆರ್.ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 2726
2. ಸದಸ್ಯರ ಹೆಸರು : ಶ್ರೀ ದೇವಾನಂದ್ ಫುಲಸಿಂಗ್ ಚವಾಣ್(ನಾಗಠಾಣ)
3. ಉತ್ತರಿಸಬೇಕಾದ ದಿನಾಂಕ :17.03.2021
4. ಉತ್ತರಿಸುವ ಸಚಿವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ಹಜ್ ಮತ್ತು ವಕ್ಫ್ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ	ನಾಗಠಾಣ ಮತ ಕ್ಷೇತ್ರವು ವಾಣಿಜ್ಯ ಹಾಗೂ ಕೈಗಾರಿಕೆಗಳ ಪ್ರದೇಶವಾಗಿದ್ದು, ಅಂತರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಎಲ್ಲಾ ಅರ್ಹತೆಗಳನ್ನು ಹೊಂದಿದ್ದರೂ ಸಹ ಮದಬಾವಿ-ಬುರಣಾಪೂರ ಗ್ರಾಮದ ಹತ್ತಿರ ಅತ್ಯಂತ ಸಣ್ಣ ಪ್ರಮಾಣದ ATR-72 ವಿಮಾನ ನಿಲ್ದಾಣ ಮಾಡುತ್ತಿರುವುದಕ್ಕೆ ಕಾರಣವೇನು;	ಲೋಕೋಪಯೋಗಿ ಇಲಾಖೆಯ ವತಿಯಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ಮೆ:ರೈಟ್ಸ್ ಸಂಸ್ಥೆಯನ್ನು ಸಮಾಲೋಚಕರಾಗಿ ನೇಮಿಸಿದ್ದು, ಸದರಿ ವರದಿಯನ್ವಯ ಪ್ರಸ್ತುತವಾಗಿ ನಾಗರೀಕ ವಿಮಾನಯಾನ ಅನುಕೂಲಕ್ಕಾಗಿ ಹಂತ-1ರ ವಿನ್ಯಾಸವನ್ನು ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಬೇಡಿಕೆಯನ್ನು ಅನುಸರಿಸಿ, ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ಮೇಲ್ದರ್ಜೆಗೆರಿಸುವ ಬಗ್ಗೆ ಪರಿಶೀಲಿಸಲಾಗುವುದು.
ಆ	ಸರ್ವ ಋತುವಿನಲ್ಲಿ ಸಂಚಾರ ಮಾಡುವ 24*7 ಏರ್ ಬಸ್ ಬೋಯಿಂಗ್ ವಿಮಾನ ಹಾರಾಟದ ನಿಲ್ದಾಣ ನಿರ್ಮಾಣ ಮಾಡಲು ಇರುವ ಮಾನದಂಡಗಳೇನು;(ವಿವರವಾದ ಮಾಹಿತಿ ನೀಡುವುದು)	ಸರ್ವ ಋತುವಿನಲ್ಲಿ ಸಂಚಾರ ಮಾಡುವ 24*7 ಏರ್ ಬಸ್ / ಬೋಯಿಂಗ್ ವಿಮಾನ ಹಾರಾಟದ ನಿಲ್ದಾಣ ನಿರ್ಮಾಣ ಮಾಡಲು DGCA, BCAS ನ ಮಾರ್ಗಸೂಚಿ ಮತ್ತು ನೀತಿಯ ಮಾನದಂಡಗಳಿಗೆ ಒಳಪಟ್ಟಿರುತ್ತದೆ.
ಇ	ಶಿವಮೊಗ್ಗ ಜಿಲ್ಲೆಯಲ್ಲಿ ನಿರ್ಮಾಣ ಮಾಡುತ್ತಿರುವ ಎಲ್ಲಾ ಹವಾಮಾನಗಳಲ್ಲು ಸಂಚಾರ ಮಾಡುವ 24*7 ಏರ್ ಬಸ್ 320 ಬೋಯಿಂಗ್ ವಿಮಾನ ಹಾರಾಟದ ಹೈಟೆಕ್ ನಿಲ್ದಾಣದ ಮಾದರಿಯಲ್ಲಿಯೇ ವಿಜಯಪುರ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ನಿಲುವೇನು; (ವಿವರವಾದ ಮಾಹಿತಿ ನೀಡುವುದು)	ಲೋಕೋಪಯೋಗಿ ಇಲಾಖೆಯ ವತಿಯಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ಮೆ:ರೈಟ್ಸ್ ಸಂಸ್ಥೆಯನ್ನು ಸಮಾಲೋಚಕರಾಗಿ ನೇಮಿಸಿದ್ದು ಸದರಿ ವರದಿಯನ್ವಯ ಪ್ರಸ್ತುತ ನಾಗರೀಕ ವಿಮಾನಯಾನ ಅನುಕೂಲಕ್ಕಾಗಿ ಹಂತ-1ರ ವಿನ್ಯಾಸವನ್ನು ಮಾಡಲಾಗಿದೆ. ಭವಿಷ್ಯದಲ್ಲಿ ವಿಮಾನ ನಿಲ್ದಾಣದ ಕಾರ್ಯಪ್ರಗತಿಯನ್ನು ಹಾಗೂ ಬೇಡಿಕೆಯನ್ನಾಧರಿಸಿ ಏರ್‌ಬಸ್/ಬೋಯಿಂಗ್ ವಿಮಾನ ಮಾದರಿಗಳ ವಿಮಾನಯಾನಕ್ಕೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ನಿರ್ಣಯ ತೆಗೆದುಕೊಳ್ಳಲಾಗುವುದು.
ಈ	ಶಿವಮೊಗ್ಗ ಮಾದರಿಯಲ್ಲಿ ವಿಜಯಪುರ ಜಿಲ್ಲೆಯಲ್ಲಿಯೂ ವಿಮಾನ ನಿಲ್ದಾಣ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)	ಪ್ರಸ್ತುತ ಎಟಿಆರ್-72 ಮಾದರಿಯ ವಿಮಾನಗಳ ಕಾರ್ಯಾಚರಣೆಗೆ ವಿಮಾನ ನಿಲ್ದಾಣವನ್ನು ವಿನ್ಯಾಸಗೊಳಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಬೇಡಿಕೆಯನ್ನು ಅನುಸರಿಸಿ, ವಿಮಾನ ನಿಲ್ದಾಣದ ಕಾರ್ಯಾಚರಣೆಯನ್ನು ಮೇಲ್ದರ್ಜೆಗೆ ಏರಿಸಲು ಪ್ರಯತ್ನಿಸಲಾಗುವುದು.

ಉ	ವಿಜಯಪುರ ಜಿಲ್ಲೆಯಲ್ಲಿ ನಿರ್ಮಾಣ ಮಾಡುತ್ತಿರುವ ವಿಮಾನ ನಿಲ್ದಾಣದ ಒಟ್ಟು ಅನುದಾನವೆಷ್ಟು; ಎಷ್ಟು ಎಕರೆ ಪ್ರದೇಶದಲ್ಲಿ ನಿರ್ಮಾಣವಾಗುತ್ತಿದೆ? (ಮಾಹಿತಿ ನೀಡುವುದು).	ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿಗೆ ರೂ.220 ಕೋಟಿ ವೆಚ್ಚ ಅಂದಾಜಿಸಲಾಗಿದೆ. ವಿಮಾನ ನಿಲ್ದಾಣಕ್ಕಾಗಿ ಸುಮಾರು 727 ಎಕರೆ ಜಮೀನನ್ನು ಸ್ವಾಧೀನಪಡಿಸಲಾಗಿದೆ.

ಸಂಖ್ಯೆ:ಮೂಲಅಇ 38 ರಾಅವಿ 2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ, ಹಜ್ ಮತ್ತು
ವಕ್ಫ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2728
ಸದಸ್ಯರ ಹೆಸರು : ಶ್ರೀ ದೇವಾನಂದ್ ಫುಲಸಿಂಗ್ ಚವಾಣ್
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರಗಳು
ಅ)	ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ವಿಜಯಪುರ ವಿಭಾಗದಲ್ಲಿ ಸುಮಾರು 200ಕ್ಕೂ ಅಧಿಕ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಸರ್ಕಾರ ಸಿಬ್ಬಂದಿಗಳ ನೇಮಕ ಮಾಡಲು ಕೈಗೊಂಡಿರುವ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)	ವಿಜಯಪುರ ವಿಭಾಗದಲ್ಲಿ 169 ಸಿಬ್ಬಂದಿಗಳ ಕೊರತೆ ಇದ್ದು, ಪ್ರಸ್ತುತ ಈಕರಸಾ ಸಂಸ್ಥೆಯಿಂದ ವಿವಿಧ ವೃಂದದ 2539 ಹುದ್ದೆಗಳನ್ನು ಭರ್ತಿ ಮಾಡಲು, ಸದರಿ ಹುದ್ದೆಗಳೊಂದಿಗೆ ಎಲ್ಲಾ ವಿಭಾಗಗಳ ಖಾಲಿ ಹುದ್ದೆಗಳನ್ನು ಪರಿಗಣಿಸಿ ಕೇಂದ್ರ ಕಚೇರಿ ಮಟ್ಟದಲ್ಲಿ ನೇರ ನೇಮಕಾತಿಗೆ ಕ್ರಮ ವಹಿಸಲಾಗುತ್ತಿದ್ದು, ಈ ಕುರಿತು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದ್ದ ಸಂದರ್ಭದಲ್ಲಿ, ಕೋವಿಡ್-19ರ ಹಿನ್ನೆಲೆಯಲ್ಲಿ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯುವಂತೆ ಆರ್ಥಿಕ ಇಲಾಖೆಯಿಂದ ನಿರ್ಬಂಧ ವಿಧಿಸಲಾಗಿದೆ. ಸದರಿ ನಿರ್ಬಂಧ ತೆರವುಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲಾಗುವುದು.
ಆ)	ವಿಜಯಪುರ ವಿಭಾಗವನ್ನು ಎರಡು ವಿಭಾಗಗಳನ್ನಾಗಿ ವಿಂಗಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು;	ವಿಜಯಪುರ ವಿಭಾಗವನ್ನು ಎರಡು ವಿಭಾಗಗಳನ್ನಾಗಿ ವಿಂಗಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಇ)	ಪ್ರಸಕ್ತ ಸಾಲಿನಲ್ಲಿ ಅಂತರ ಘಟಕ/ ವಿಭಾಗದ ವರ್ಗಾವಣೆಗಾಗಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಇತ್ಯರ್ಥಗೊಳಿಸಲಾದ ಅರ್ಜಿಗಳೆಷ್ಟು; ಅಂತರ ವಿಭಾಗ ಹಾಗೂ ಘಟಕಗಳ ವರ್ಗಾವಣೆಗೆ ಸರ್ಕಾರ ಕ್ರಮ ಕೈಗೊಂಡಿದೆಯೇ;	2020ನೇ ಸಾಲಿನಲ್ಲಿ ಈ.ಕ.ರ.ಸಾ.ಸಂಸ್ಥೆಯ ಎಲ್ಲಾ ವಿಭಾಗಗಳಿಂದ ವಿಜಯಪುರ ವಿಭಾಗಕ್ಕೆ ವರ್ಗಾವಣೆ ಕೋರಿದ ಆಡಳಿತ, ತಾಂತ್ರಿಕ ಹಾಗೂ ಚಾಲನಾ ಸಿಬ್ಬಂದಿಗಳ ಮಾಹಿತಿ ಈ ಕೆಳಗಿನಂತಿದೆ: (see table 1 below)

ಸಿಬ್ಬಂದಿ	ಸಂಸ್ಥೆಯ ಬೇರೆ ವಿಭಾಗದಿಂದ ವಿಜಯಪುರ ವಿಭಾಗಕ್ಕೆ ವರ್ಗಾವಣೆ ಕೋರಿ ಸ್ವೀಕೃತವಾದ ಒಟ್ಟು ಅರ್ಜಿಗಳು	ವಿಶೇಷ ಪ್ರಕರಣಗಳಡಿ / ಖಾಲಿ ಹುದ್ದೆಗಳಿಗನುಸಾರವಾಗಿ ಪರಿಗಣಿಸಿ ವರ್ಗಾಯಿಸಿದ ಪ್ರಕರಣಗಳು
ಆಡಳಿತ	17	5
ತಾಂತ್ರಿಕ	79	5
ಚಾಲನಾ	701	15

ವಿಜಯಪುರ ವಿಭಾಗದ ಅಂತರ ಘಟಕ ವರ್ಗಾವಣೆ ಮಾಹಿತಿ ವಿವರ ಈ ಕೆಳಗಿನಂತಿದೆ:-

ಸಿಬ್ಬಂದಿ	ವಿಜಯಪುರ ವಿಭಾಗದ ಅಂತರ ಘಟಕ ವರ್ಗಾವಣೆ ಕೋರಿ ಸ್ವೀಕೃತವಾದ ಒಟ್ಟು ಅರ್ಜಿಗಳು	ಅರ್ಹ/ಖಾಲಿ ಹುದ್ದೆಗಳಿಗನುಸಾರವಾಗಿ ಪರಿಗಣಿಸಿ ವರ್ಗಾಯಿಸಿದ ಪ್ರಕರಣಗಳು
ಆಡಳಿತ	11	6
ತಾಂತ್ರಿಕ	18	7
ಚಾಲನಾ	56	28

2021ನೇ ಸಾಲಿನ ಅಂತರ ಘಟಕ / ವಿಭಾಗಗಳ ವರ್ಗಾವಣೆ ಪ್ರಕ್ರಿಯೆ ಪ್ರಾರಂಭಿಸಿರುವುದಿಲ್ಲ. ಮಾರ್ಚ್-2021ರ ಮಾಹೆಯ ಅಂತ್ಯದಲ್ಲಿ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸಲು ಯೋಜಿಸಲಾಗಿದೆ.

ಈ)	ಹೊಸದಾಗಿ ಘೋಷಣೆಯಾದ ವಿಜಯಪುರ ಜಿಲ್ಲೆಯ ಚಡಚಣ ಬಸ್ ಡಿಪೋ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಈ ಕಾಮಗಾರಿಗೆ ಮೀಸಲಿರಿಸಿದ ಅನುದಾನವೆಷ್ಟು? (ಮಾಹಿತಿ ನೀಡುವುದು)	ಹೊಸ ತಾಲ್ಲೂಕಾಗಿ ಘೋಷಣೆಯಾದ ವಿಜಯಪುರ ಜಿಲ್ಲೆಯ ಚಡಚಣದಲ್ಲಿ ಬಸ್ ಘಟಕ ನಿರ್ಮಾಣಕ್ಕಾಗಿ ನಿವೇಶನವು ಸಂಸ್ಥೆಯ ಹೆಸರಿಗೆ ವರ್ಗಾವಣೆಯಾಗಿರುತ್ತದೆ. ಚಡಚಣದಲ್ಲಿ ಬಸ್ ಘಟಕ ನಿರ್ಮಿಸುವುದರ ಅಧ್ಯಯನ ವರದಿ ಆಧರಿಸಿ ಹಾಗೂ ಅನುದಾನದ ಲಭ್ಯತೆಯ ಅನುಸಾರ ಕ್ರಮ ವಹಿಸಲಾಗುವುದು.

ಸಂಖ್ಯೆ: ಟಿಡಿ 107 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು	:	ಶ್ರೀ ದೇವಾನಂದ್ ಫುಲಸಿಂಗ್ ಚವಾಣ್ (ನಾಗಠಾಣ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	:	2730
ಉತ್ತರಿಸಬೇಕಾದ ಸಚಿವರು	:	ಮಾನ್ಯ ಕೃಷಿ ಸಚಿವರು
ಉತ್ತರಿಸಬೇಕಾದ ದಿನಾಂಕ	:	17-03-2021

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ನಾಗಠಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ವಿಜಯಪುರ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರುವನ್ನು ಮುದ್ದೇಬಿಹಾಳಕ್ಕೆ ಸ್ಥಳಾಂತರ ಮಾಡುತ್ತಿರುವ ಕುರಿತು ರೈತರು ಆತಂಕಕ್ಕೆ ಒಳಗಾಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, 2015 ರಲ್ಲಿ ಕೃಷಿ ವಿಸ್ತರಣಾ ಕೇಂದ್ರುವನ್ನು ಮುದ್ದೇಬಿಹಾಳಕ್ಕೆ ಸ್ಥಳಾಂತರ ಮಾಡಿದ್ದ ಸಂದರ್ಭದಲ್ಲಿ ಜಿಲ್ಲೆಯ ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಆದೇಶ ರದ್ದುಗೊಳಿಸಲಾಗಿದ್ದರೂ ಸಹ ಪುನ: ಮುದ್ದೇಬಿಹಾಳಕ್ಕೆ ಸ್ಥಳಾಂತರ ಮಾಡಲು ಯೋಜಿಸಿರುವ ಉದ್ದೇಶವೇನು; (ವಿವರವಾದ ಮಾಹಿತಿ ನೀಡುವುದು)	2015 ರಲ್ಲಿ ಕೃಷಿ ವಿಸ್ತರಣಾ ಕೇಂದ್ರುವನ್ನು ಮುದ್ದೇಬಿಹಾಳಕ್ಕೆ ಸ್ಥಳಾಂತರ ಮಾಡುವುದನ್ನು ಸ್ಥಗಿತಗೊಳಿಸಲಾಗಿದ್ದು, ತದನಂತರದಲ್ಲಿ ಕೃಷಿ ವಿಸ್ತರಣಾ ಕೇಂದ್ರುವನ್ನು ಮುದ್ದೇಬಿಹಾಳಕ್ಕೆ ಸ್ಥಳಾಂತರಿಸಲು ಉದ್ದೇಶಿಸಿರುವುದಿಲ್ಲ.
ಇ)	ಈ ಕೇಂದ್ರುವು ಸಿಬ್ಬಂದಿಗಳ ಕೊರತೆಯ ನಡುವೆಯು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ	ಈ ಕೇಂದ್ರುವು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಮುಂಬರುವ ದಿನಗಳಲ್ಲಿ ಸಿಬ್ಬಂದಿಗಳ ನೇಮಕಕ್ಕೆ ಕ್ರಮ

	ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಿಬ್ಬಂದಿಗಳ ನೇಮಕಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)	ಕೈಗೊಳ್ಳಲಾಗುವುದು.
ಈ)	ಕೃಷಿ ವಿಸ್ತರಣಾ ಕೇಂದ್ರವನ್ನು ವಿಜಯಪುರದಲ್ಲಿಯೇ ಮುಂದುವರೆಸಿ ಮುದ್ದೇಬಿಹಾಳಕ್ಕೆ ಹೊಸ ಕೃಷಿ ವಿಸ್ತರಣಾ ಕೇಂದ್ರವನ್ನು ಮಂಜೂರು ಮಾಡುವ ಕುರಿತು ಸರ್ಕಾರದ ನಿಲುವೇನು? (ವಿವರವಾದ ಮಾಹಿತಿ ನೀಡುವುದು)	ಪ್ರಸ್ತುತ ಮುದ್ದೇಬಿಹಾಳದಲ್ಲಿ ಹೊಸ ಕೃಷಿ ವಿಸ್ತರಣಾ ಕೇಂದ್ರವನ್ನು ಸ್ಥಾಪಿಸುವ ಕುರಿತಾದ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಸಂಖ್ಯೆ: AGRI-AUD/14/2021

(ಬಿ.ಸಿ ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2735

ಸದಸ್ಯರ ಹೆಸರು : ಶ್ರೀ ರೇವಣ್ಣ ಹೆಚ್.ಡಿ.(ಹೊಳೆನರಸೀಪುರ)

ಉತ್ತರಿಸುವ ದಿನಾಂಕ : 17.03.2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	2020-21 ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಸಬ್ಸಿಡಿ ದರದಲ್ಲಿ ಟಾರ್ಪಲ್ ವಿತರಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದಕ್ಕಾಗಿ ಕಡಿಮೆ ಅನುದಾನ ಬಿಡುಗಡೆಯಾಗಿರುವುದು ಹಾಗೂ ರೈತರುಗಳಿಂದ ಬೇಡಿಕೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	2020-21 ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಸಬ್ಸಿಡಿ ದರದಲ್ಲಿ ಟಾರ್ಪಲೀನ್ ವಿತರಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. 2019-20ನೇ ಸಾಲಿನಲ್ಲಿ ರೂ.3935.12 ಲಕ್ಷಗಳ ಅನುದಾನವನ್ನು ಮತ್ತು 2020-21ನೇ ಸಾಲಿನಲ್ಲಿ ರೂ.3930.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದ್ದರಿಂದ, ಪ್ರಸಕ್ತ ಸಾಲಿನಲ್ಲಿ ಕಡಿಮೆ ಅನುದಾನ ಬಿಡುಗಡೆಯಾಗಿರುವುದಿಲ್ಲ. ರೈತರುಗಳಿಂದ ಬೇಡಿಕೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.
ಆ).	ಹಾಗಿದ್ದಲ್ಲಿ, 2020-21 ನೇ ಸಾಲಿನಲ್ಲಿ ಟಾರ್ಪಲ್ ವಿತರಣೆಗೆ ಹೆಚ್ಚುವರಿ ಅನುದಾನವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ಸಂಪೂರ್ಣ ಮಾಹಿತಿ ನೀಡುವುದು)	ರೈತರಿಂದ ಹಾಗೂ ಜನ ಪ್ರತಿನಿಧಿಗಳಿಂದ ಟಾರ್ಪಲೀನ್ ಗೆ ಹೆಚ್ಚಿನ ಬೇಡಿಕೆ ಬಂದಿರುವ ಹಿನ್ನೆಲೆಯಲ್ಲಿ ಟಾರ್ಪಲೀನ್ ವಿತರಣೆಗಾಗಿ ಹೆಚ್ಚುವರಿಯಾಗಿ ಪ್ರಸ್ತುತ ರೂ.4023.16 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿರುತ್ತದೆ : (see table below)

ಯೋಜನೆ	(ರೂ.ಲಕ್ಷಗಳಲ್ಲಿ)
ಮೂಲ ನಿಗಧಿಪಡಿಸಿದ ಅನುದಾನ	3930.00
ಹೆಚ್ಚುವರಿಯಾಗಿ ನೀಡಿದ ಅನುದಾನ	4023.16

ಇ)	ರಾಜ್ಯದಲ್ಲಿ 03 ಹಂಗಾಮಿನಲ್ಲಿ ಬೆಳೆ ಸಮೀಕ್ಷೆ ನಡೆಯುತ್ತಿದ್ದು, ಕೃಷಿ ಇಲಾಖೆಯ ಎಲ್ಲಾ ಸಿಬ್ಬಂದಿಗಳನ್ನು ವರ್ಷಪೂರ್ತಿ ಬೆಳೆ ಸಮೀಕ್ಷೆಯ ಕಾರ್ಯದಲ್ಲಿಯೇ ತೊಡಗಿಸಿಕೊಳ್ಳುವುದರಿಂದ, ಇಲಾಖೆಯ ಇತರೆ ಯೋಜನೆಗಳ/ಕೆಲಸ ಕಾರ್ಯಗಳ ಅನುಷ್ಠಾನಕ್ಕೆ ತೊಂದರೆಯಾಗುತ್ತಿಲ್ಲವೆ;	ಪ್ರಸ್ತುತ ಸಾಲಿನಲ್ಲಿ ರೈತರೇ ಸ್ವತಂತ್ರವಾಗಿ ರೈತರ ಮೊಬೈಲ್ ಆಪ್ ಮೂಲಕ, ಸಮೀಕ್ಷೆ ಕೈಗೊಳ್ಳಬಹುದಾಗಿದೆ. ಉಳಿದ ತಾಕುಗಳನ್ನು ಸ್ಥಳೀಯ ವಿದ್ಯಾವಂತ ಖಾಸಗಿ ನಿವಾಸಿಗಳ ಸಹಾಯದೊಂದಿಗೆ ಸಮೀಕ್ಷೆ ಕೈಗೊಂಡು ಕೇವಲ ಮೇಲಿನಂತೆ ತಿಳಿಸಿರುವ ಎರಡು ಸಂದರ್ಭಗಳಲ್ಲಿ ಅನಿವಾರ್ಯವಾಗಿ ಉಳಿಯುವ ತಾಕುಗಳನ್ನು ಮಾತ್ರ ಇಲಾಖಾ ಅಧಿಕಾರಿಗಳ ಮೂಲಕ ಸಮೀಕ್ಷೆ ಕೈಗೊಳ್ಳಲು ಹಾಗೂ ಸಮೀಕ್ಷೆ ಕೈಗೊಂಡ ತಾಕುಗಳ ಮೇಲ್ವಿಚಾರಣಾ ಕಾರ್ಯವನ್ನು ಕಚೇರಿಗಳಲ್ಲಿ ಕುಳಿತು ಪರಿಶೀಲಿಸಿ ಅನುಮೋದಿಸಲು ಕೃಷಿ ಇಲಾಖಾ ಅಧಿಕಾರಿಗಳ ಜೊತೆಗೆ ಕಂದಾಯ, ತೋಟಗಾರಿಕೆ, ರೇಷ್ಮೆ ಮತ್ತು ಇತರೆ ಇಲಾಖೆಗಳ ಅಧಿಕಾರಿಗಳಿಗೆ ಜವಾಬ್ದಾರಿಯನ್ನು ನೀಡಿರುವುದರಿಂದ ಕೃಷಿ ಇಲಾಖೆಯ ಇತರೆ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಯಾವುದೇ ರೀತಿಯ ಅಡಚಣೆಗಳು/ತೊಂದರೆಗಳು ಉಂಟಾಗಿರುವುದಿಲ್ಲ. ಪ್ರಸ್ತುತ ಅಧಿಕಾರಿಗಳಿಂದಲೇ ಯಾವುದೇ ರೀತಿಯ ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿಲ್ಲ.
ಈ)	ಹಾಗಿದ್ದಲ್ಲಿ, ರೈತರಿಗೆ ತೊಂದರೆಯಾಗದಂತೆ ಕೃಷಿ ಇಲಾಖೆಯ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಬೆಳೆ ಸಮೀಕ್ಷೆ ಕಾರ್ಯದಿಂದ ಕೃಷಿ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ರೈತರಿಗೆ ಯಾವುದೇ ರೀತಿಯಾಗಿ ತೊಂದರೆಯಾಗದಿರುವ ಸಲುವಾಗಿ ಬೆಳೆ ಸಮೀಕ್ಷೆ ಕಾರ್ಯವನ್ನು ಅಧಿಕಾರಿಗಳ ಮೂಲಕ ಕೈಗೊಳ್ಳದೆ, ರೈತರಿಂದಲೇ ಕೈಗೊಳ್ಳಲು ಹೆಚ್ಚಿನ ಒತ್ತನ್ನು ನೀಡಿರುವುದರ ಜೊತೆಗೆ ಸ್ಥಳೀಯ ವಿದ್ಯಾವಂತ ಖಾಸಗಿ ನಿವಾಸಿಗಳ ಮೂಲಕ ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: AGRI-ASC/24/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2744
ಸದಸ್ಯರ ಹೆಸರು	:	ಶ್ರೀ ಅಭಯ್ ಪಾಟೀಲ್ (ಬೆಳಗಾಂ ದಕ್ಷಿಣ)
ಉತ್ತರಿಸಬೇಕಾದ ಸಚಿವರು	:	ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸಬೇಕಾದ ದಿನಾಂಕ	:	17-03-2021

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಳೆದ 3 ವರ್ಷದ ಅವಧಿಯಲ್ಲಿ ನೂತನವಾಗಿ ಆರಂಭಿಸಲ್ಪಟ್ಟಿರುವ ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಕಚೇರಿಗಳು ಎಷ್ಟು; ಅವು ಯಾವುವು; (ಮತ ಕ್ಷೇತ್ರವಾರು ಮತ್ತು ವರ್ಷವಾರು ವಿವರ ನೀಡುವುದು)	ದಿನಾಂಕ:01-01-2018 ರಿಂದ 31-12-2020 ರ ಅವಧಿಯಲ್ಲಿ ರಾಜ್ಯದಲ್ಲಿ ಹೊಸದಾಗಿ ಈ ಕೆಳಕಂಡ ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿಗಳು ಕಾರ್ಯರೂಪಕ್ಕೆ ಬಂದಿರುತ್ತವೆ.

ಕ್ರಸಂ.	ಕಛೇರಿಯ ಹೆಸರು	ಪ್ರಾರಂಭಿಸಿದ ದಿನಾಂಕ
1.	ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ರಾಣೇಬೆನ್ನೂರು	24-02-2018
2.	ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ಬಂಟ್ವಾಳ	03-03-2018
3.	ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ಚಿಂತಾಮಣಿ	16-07-2018
4.	ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ರಾಮದುರ್ಗ	19-07-2018
5.	ಸಹಾಯಕ ಪ್ರಾದೇಶಿಕ ಸಾರಿಗೆ ಕಛೇರಿ, ಅಥಣಿ	03-08-2020

ಕ್ರ ಸಂ.	ಪ್ರಶ್ನೆ	ಉತ್ತರ
(ಆ)	ಈ ಅವಧಿಯಲ್ಲಿ ನೂತನ ಕಚೇರಿಗಳ ಆರಂಭಕ್ಕೆ ಸ್ವೀಕೃತವಾದ ಪ್ರಸ್ತಾವನೆಗಳಲ್ಲಿ ಅಂಗೀಕೃತ ಮತ್ತು ತಿರಸ್ಕೃತ ಪ್ರಸ್ತಾವನೆಗಳು ಎಷ್ಟು; ಯಾವ ಕಾರಣಕ್ಕೆ ತಿರಸ್ಕೃತಗೊಳಿಸಲಾಗಿದೆ;	ಕಳೆದ 3 ವರ್ಷಗಳಲ್ಲಿ ನೂತನ ಕಛೇರಿಗಳ ಆರಭಕ್ಕೆ ಸ್ವೀಕೃತವಾದ ಪ್ರಸ್ತಾವನೆಗಳಲ್ಲಿ ಅಂಗೀಕೃತಗೊಂಡ ಮತ್ತು ತಿರಸ್ಕೃತಗೊಂಡ ಪ್ರಸ್ತಾವನೆಗಳ ವಿವರ ಈ ಕೆಳಕಂಡಂತಿದೆ:

ಕ್ರಸಂ.	ಅಂಗೀಕೃತ	ತಿರಸ್ಕೃತ	ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗಿದೆ
1	ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕು.	ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕು	ನಿಗದಿತ ಮಾನದಂಡಗಳು ಪೂರ್ಣಗೊಳ್ಳದ ಕಾರಣಕ್ಕಾಗಿ.
2	–	ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕು	ಮುಂದಿನ ಆರ್ಥಿಕ ವರ್ಷಕ್ಕೆ ಮುಂದೂಡಲಾಗಿದೆ.
3	–	ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕು	ಮುಂದಿನ ಆರ್ಥಿಕ ವರ್ಷಕ್ಕೆ ಮುಂದೂಡಲಾಗಿದೆ.

(ಇ)	ಬೆಳಗಾವಿ ನಗರವು ಅತ್ಯಂತ ದೊಡ್ಡ ನಗರವಾಗಿದ್ದು, ಬೆಳಗಾವಿ ದಕ್ಷಿಣ ಮತ ಕ್ಷೇತ್ರದಲ್ಲಿ ಇನ್ನೊಂದು ಪ್ರಾದೇಶಿಕ ಸಾರಿಗೆ ಕಚೇರಿಯನ್ನು ಆರಂಭಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು;	ಬೆಳಗಾವಿ ನಗರದ ದಕ್ಷಿಣ ಮತ ಕ್ಷೇತ್ರದ ವ್ಯಾಪ್ತಿಯ ಅನಗೋಳ, ಟಿಳಕವಾಡಿ, ಉದ್ಯಮಬಾಗ, ಹಿಂದವಾಡಿ ಪ್ರದೇಶದಲ್ಲಿ ಮತ್ತೊಂದು ಪ್ರಾದೇಶಿಕ ಸಾರಿಗೆ ಕಛೇರಿಯನ್ನು ತೆರೆಯುವ ಕುರಿತಂತೆ ಕೋರಿಕೆ ಇರುತ್ತದೆ. ಬೆಳಗಾವಿ ಜಿಲ್ಲೆಯ ತಾಲ್ಲೂಕುಗಳನ್ನೊಳಗೊಂಡಂತೆ ಈಗಾಗಲೇ ಐದು ಸಾರಿಗೆ ಕಛೇರಿಗಳು ಕಾರ್ಯ ನಿರ್ವಹಿಸುತ್ತಿವೆ. ಬೆಳಗಾವಿ ಕಛೇರಿಯು ಖಾನಾಪುರ ತಾಲ್ಲೂಕನ್ನು ಒಳಗೊಂಡಂತೆ ಕಾರ್ಯ ನಿರ್ವಹಿಸುತ್ತಿದ್ದು, ಖಾನಾಪುರ ತಾಲ್ಲೂಕಿನ ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಪ್ರತಿ ಬುಧವಾರದಂದು ಶಿಬಿರವನ್ನು ಏರ್ಪಡಿಸುತ್ತಿದ್ದು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕಾರ್ಯನಿರ್ವಹಿಸುತ್ತಿರುತ್ತದೆ. ಬೆಳಗಾವಿ ನಗರದಿಂದ ಅನಗೋಳ ಸುಮಾರು 4 ಕಿ.ಮೀ., ಟಿಳಕವಾಡಿ 2.3 ಕಿ.ಮೀ., ಉದ್ಯಮಭಾಗ 5.5 ಕಿ.ಮೀ. ಮತ್ತು ಹಿಂದವಾಡಿ 3.6 ಕಿ.ಮೀ. ಅಂತರದಲ್ಲಿ ಇದ್ದು ಸಾರ್ವಜನಿಕರಿಗೆ ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಸಾರಿಗೆ ಕಛೇರಿಯು ಹತ್ತಿರವಿರುವುದರಿಂದ ಮತ್ತು ಬೆಳಗಾವಿ ನಗರದ ಮಧ್ಯಭಾಗದಲ್ಲಿರುವುದರಿಂದ ಯಾವುದೇ ತೊಂದರೆ ಯಾಗುವುದಿಲ್ಲ. ಅಲ್ಲದೆ, ಈಗಾಗಲೇ ಕಛೇರಿಯಲ್ಲಿ ಪೂರ್ಣ ಪ್ರಮಾಣದ ಅಧಿಕಾರಿ ಮತ್ತು ಪ್ರವರ್ತನ, ಲಿಪಿಕ ಸಿಬ್ಬಂದಿಯ ಹುದ್ದೆಗಳು ಮಂಜೂರಾಗಿರುವುದರಿಂದ ಪ್ರಸ್ತುತ ಪರಿಸ್ಥಿತಿಯಲ್ಲಿ ಹೊಸ ಕಛೇರಿಯನ್ನು ಪ್ರಾರಂಭಿಸುವುದು ಸೂಕ್ತವಾಗಿರುವುದಿಲ್ಲ ಹಾಗೂ ಮುಂಬರುವ ದಿನಗಳಲ್ಲಿ ವಾಹನ ಸಂಖ್ಯೆ ಮತ್ತು ಸಂಗ್ರಹಿಸಬಹುದಾದ ರಾಜಸ್ವವನ್ನು ಗಮನದಲ್ಲಿ ಇಟ್ಟುಕೊಂಡು ಹೊಸ ಕಛೇರಿಯನ್ನು ಪ್ರಾರಂಭಿಸುವ ಬಗ್ಗೆ ಪರಿಗಣಿಸಬಹುದಾಗಿರುತ್ತದೆ.
(ಈ)	ಈ ಕುರಿತು ಸಲ್ಲಿಸಲಾದ ಪ್ರಸ್ತಾವನೆಯನ್ನು ಈವರೆಗೆ ಪರಿಗಣಿಸದೇ ಇರಲು ಕಾರಣಗಳೇನು?	

ಟಿಡಿ 45 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು : ಶ್ರೀ ಹಾಲಪ್ಪ ಹರತಾಳ್ ಹೆಚ್ (ಸಾಗರ)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2759
3. ಉತ್ತರಿಸಬೇಕಾದ ದಿನಾಂಕ : 17.03.2021
4. ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಕಿರಿಯ ಹಾಗೂ ಸಹಾಯಕ ಇಂಜಿನಿಯರ್ ಗಳ ಕೊರತೆಯಿಂದಾಗಿ ಇಲಾಖೆಯಲ್ಲಿ ಕಾಮಗಾರಿಗಳ ಪ್ರಗತಿ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇಂಜಿನಿಯರ್‌ಗಳನ್ನು ಖಾಲಿ ಇರುವ ಹುದ್ದೆಗಳಲ್ಲಿ ಅಧಿಕ ಪ್ರಭಾರದಲ್ಲಿರಿಸಿ ಕಾಮಗಾರಿಗಳ ಅನುಷ್ಠಾನದಲ್ಲಿ ಕುಂಠಿತವಾಗದಂತೆ ಕ್ರಮವಹಿಸಲಾಗುತ್ತಿದೆ. ಅಲ್ಲದೆ ಮೂಲತಃ ಲೋಕೋಪಯೋಗಿ ಇಲಾಖೆಗೆ ಸೇರಿದ ಸುಮಾರು 308 ಸಹಾಯಕ ಇಂಜಿನಿಯರ್ ಹಾಗೂ ಕಿರಿಯ ಇಂಜಿನಿಯರ್ ಗಳನ್ನು ಗ್ರಾ.ಅ.ಪಂ.ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪಂ.ರಾ.ಇಂ. ಇಲಾಖೆ ಹಾಗೂ ಗ್ರಾ.ಕು.ನೀ ಮತ್ತು ನೈ ಇಲಾಖೆಯಲ್ಲಿ ಶಾಶ್ವತವಾಗಿ ವಿಲೀನಾತಿಗೊಳಿಸಿ ಸದರಿಯಯವರುಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.
ಆ)	ಹಾಗಿದ್ದಲ್ಲಿ, ಹೊರಗುತ್ತಿಗೆ ಆಧಾರದ ಮೇಲೆ ಹಿರಿಯ ಮತ್ತು ಕಿರಿಯ ಇಂಜಿನಿಯರ್ ಗಳನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;	ಗ್ರಾ.ಅ.ಪಂ.ರಾಜ್ ಇಲಾಖಾ ವ್ಯಾಪ್ತಿಯ ಗ್ರಾ.ಕು.ನೀ. ಮತ್ತು ನೈ. ಇಲಾಖೆಯ ವಿವಿಧ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಅಧಿಕಾರಿಗಳ ಅವಶ್ಯಕತೆ ಹೆಚ್ಚಾಗಿರುವ ಕಾರಣ ನೇರ ನೇಮಕಾತಿಗಾಗಿ ಲಭ್ಯವಾಗುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿದೆ.
ಇ)	ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಇರುವ ತೊಡಕುಗಳೇನು;	ಅನ್ವಯಿಸುವುದಿಲ್ಲ

..2

ಈ)	ಇಲಾಖೆಯಲ್ಲಿ ಹಿರಿಯ ಮತ್ತು ಕಿರಿಯ ಇಂಜಿನಿಯರ್‌ಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಂಡು ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಕೈಗೊಂಡ ಕ್ರಮಗಳೇನು? (ಪೂರ್ಣ ವಿವರ ಒದಗಿಸುವುದು)	ಸಾಧ್ಯವಾದಷ್ಟು ನೇರ ನೇಮಕಾತಿ, ಮುಂಬಡ್ತಿ / ವಿಲೀನಾತಿ ಮೂಲಕ ಭರ್ತಿ ಮಾಡುವ ಬಗ್ಗೆ ಕ್ರಮವಹಿಸಲಾಗುತ್ತಿದೆ.

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2764
ಸದಸ್ಯರ ಹೆಸರು	ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)
ಉತ್ತರಿಸಬೇಕಾದ ದಿನಾಂಕ	17.03.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ಗ್ರಾಮಾಂತರ ಅಗಸಕೇರಿ ಮತ್ತು ಮರಿತೊಟ್ಲು ಗ್ರಾಮ ಪಂಚಾಯತಿಯ ಹುಲುಗಾರು ದೊಡ್ಡಿನ ಕೊಡುಗೆ ಎಂಬಲ್ಲಿ ರಸ್ತೆ ಹದಗೆಟ್ಟಿರುವುದು ಮತ್ತು ಹುಲ್ಲುಗಾರಿನ ಹಕ್ಲು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ, 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಸುರಿದ ಬಾರಿ ಮಳೆಯಿಂದ ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ಗ್ರಾಮಾಂತರ ಅಗಸಕೇರಿ ಮತ್ತು ಮರಿತೊಟ್ಲು ಗ್ರಾಮ ಪಂಚಾಯತಿಯ ಹುಲುಗಾರು ದೊಡ್ಡಿನ ಕೊಡುಗೆ ರಸ್ತೆಯು ಹಾನಿಗೊಳಗಾಗಿರುತ್ತದೆ. ಅಗಸಕೇರಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರೂ.10.00 ಲಕ್ಷಗಳು ಹಾಗೂ ಮರಿತೊಟ್ಲು ಗ್ರಾಮ ಪಂಚಾಯತಿಯ ಹುಲಿಗಾರು ದೊಡ್ಡಿ ಕೊಡುಗೆ ರಸ್ತೆ ಅಭಿವೃದ್ಧಿಗೆ ರೂ.25.00 ಲಕ್ಷಗಳನ್ನು ಒಳಗೊಂಡಂತೆ ಚಿಕ್ಕಮಗಳೂರು ಜಿಲ್ಲೆಗೆ ಒಟ್ಟು ರೂ.10268.00 ಲಕ್ಷಗಳಿಗೆ ಅನುದಾನ ಬಿಡುಗಡೆ ಕೋರಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. • ಮರಿತೊಟ್ಲು ಗ್ರಾಮ ಪಂಚಾಯತಿಯ ಹುಲುಗಾರುವಿನ ಹಕ್ಲು ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸಾರ್ವಜನಿಕ ಬಾವಿ ನಿರ್ಮಾಣ ಮಾಡಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. • ಅಗಸರಕೇರಿಗೆ ಬಾವಿಯಿಂದ ಮೋಟಾರ್ ಮೂಲಕ ಶುದ್ಧಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. • ಗ್ರಾಮದಲ್ಲಿ 125.ಮೀಟರ್ ಅಂತರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸಹಾ ಕಾರ್ಯನಿರ್ವಹಿಸುತ್ತಿದೆ.

ಆ.	ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ರಸ್ತೆ ದುರಸ್ತಿಪಡಿಸಿ ಶುದ್ಧಕುಡಿಯುವ ನೀರಿನ ವ್ಯವಸ್ಥೆಗೆ ಕ್ರಮವಹಿಸಲಾಗುತ್ತದೆ?	ಕಂದಾಯ ಇಲಾಖೆ ಆದೇಶ ದಿನಾಂಕ: 13.01.2021 ರಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ರಸ್ತೆ ಮತ್ತು ಸೇತುವೆಗಳ ದುರಸ್ತಿಗಾಗಿ ರೂ.871.12 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ರವರಿಗೆ ಬಿಡುಗಡೆ ಮಾಡಿರುತ್ತಾರೆ. ಜಿಲ್ಲಾಧಿಕಾರಿಗಳು ಕ್ರಿಯಾಯೋಜನೆಯನ್ನು ತಯಾರಿಸಿ ಅನುಮೋದನೆ ನೀಡಿದ ನಂತರ ದುರಸ್ಥಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಮವಹಿಸಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:ಅಧಿ-15-9/27:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2805

ಸದಸ್ಯರ ಹೆಸರು : ಶ್ರೀ ಲಿಂಗೇಶ್ ಕೆ.ಎಸ್.

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 17-03-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ಬೇಲೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವೈ.ಡಿ.ಡಿ ಪದವಿ ಪೂರ್ವ ಕಾಲೇಜು ಹಾಗೂ ಸರ್ಕಾರಿ ಐ.ಟಿ.ಐ ಕಾಲೇಜುಗಳಿಗೆ ಸರಿಯಾದ ಬಸ್ಸಿನ ವ್ಯವಸ್ಥೆ ಇಲ್ಲದೇ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;	ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವೈ.ಡಿ.ಡಿ ಪದವಿ ಪೂರ್ವ ಕಾಲೇಜಿನ ಮತ್ತು ಸರ್ಕಾರಿ ಐ.ಟಿ.ಐ ಕಾಲೇಜಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕ್ರಮವಾಗಿ ಬೇಲೂರು-ಮೂಡಿಗೆರೆ ಮಾರ್ಗದ 28 ಅನುಸೂಚಿಗಳಿಂದ 66 ಸುತ್ತುವಳಿಗಳಲ್ಲಿ ಹಾಗೂ ಬೇಲೂರು-ಸಕಲೇಶಪುರ ಮಾರ್ಗದ 24 ಅನುಸೂಚಿಗಳಿಂದ 54 ಸುತ್ತುವಳಿಗಳಲ್ಲಿ ಸದರಿ ಕಾಲೇಜುಗಳ ಬಳಿ ನಿಲುಗಡೆ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಸದರಿ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳುತಿದ್ದು, ಅವಶ್ಯಕತೆಗೆ ಅನುಗುಣವಾಗಿದೆ.
ಆ)	ಬಂದಿದ್ದಲ್ಲಿ, ಸದರಿ ಕಾಲೇಜುಗಳಿಗೆ ಬಸ್ಸಿನ ವ್ಯವಸ್ಥೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವಾಗ ಮಾಡಲಾಗುವುದು; (ವಿವರ ನೀಡುವುದು)	
ಇ)	ಬೇಲೂರಿನಲ್ಲಿರುವ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಪ್ರತಿನಿತ್ಯ ಸುಮಾರು 7000ರಷ್ಟು ವಿದ್ಯಾರ್ಥಿಗಳು ಹಾಗೂ ಸುಮಾರು 8000ರಷ್ಟು ಮಾಸಿಕ ಪಾಸ್ ಪಡೆದಿರುವ ನೌಕರರು, ಪ್ರಯಾಣಿಕರು ಹಾಗೂ ಬೇಲೂರು ಚೆನ್ನಕೇಶವ ದೇವಸ್ಥಾನಕ್ಕೆ ಬರುವ ಪ್ರವಾಸಿಗರ ಸಂಚಾರಕ್ಕೆ ಅನುಕೂಲವಾಗುವಂತೆ, ಬೇಲೂರು ಬಸ್ ಘಟಕಕ್ಕೆ ಹೊಸದಾಗಿ 10 ಬಸ್‌ಗಳನ್ನು ಹಾಗೂ 60 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ಬೇಲೂರಿಗೆ ವಿವಿಧ ಸ್ಥಳಗಳಿಂದ 570 ಸುತ್ತುವಳಿಗಳ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರು ಸದರಿ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ. ಅಲ್ಲದೇ, ಬೇಲೂರು ಬಸ್ ನಿಲ್ದಾಣಕ್ಕೆ ಹೊಂದಿಕೊಂಡಂತೆ ಚೆನ್ನಕೇಶವ ದೇವಸ್ಥಾನವಿದ್ದು, ದೇವಸ್ಥಾನಕ್ಕೆ ಬರುವ ಪ್ರವಾಸಿಗರು ಸಹ ಸದರಿ ಸುತ್ತುವಳಿಗಳ ಸಾರಿಗೆ ಸೌಲಭ್ಯವನ್ನು ಪಡೆದುಕೊಳ್ಳುತ್ತಿದ್ದು, ಅವಶ್ಯಕತೆಗೆ ಅನುಗುಣವಾಗಿದೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ ಪ್ರಯಾಣಿಕರು/ ವಿದ್ಯಾರ್ಥಿಗಳ ಲಭ್ಯತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಕೋವಿಡ್-19ರ ಆರ್ಥಿಕ ಸಂಕಷ್ಟದ ಹಿನ್ನೆಲೆಯಲ್ಲಿ 2020-21ನೇ ಸಾಲಿನಲ್ಲಿ ಯಾವುದೇ ಹೊಸ ಮಾರ್ಗಗಳನ್ನು ಘಟಕಕ್ಕೆ ನೀಡಿರುವುದಿಲ್ಲ.
ಈ)	ಇದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಬೇಲೂರು ಬಸ್ ಘಟಕಕ್ಕೆ ಹೊಸದಾಗಿ 10 ಬಸ್‌ಗಳನ್ನು ಯಾವಾಗ ಮಂಜೂರು ಮಾಡಲಾಗುವುದು ಹಾಗೂ 60 ಚಾಲನಾ ಮತ್ತು ತಾಂತ್ರಿಕ ಸಿಬ್ಬಂದಿಗಳನ್ನು ಯಾವಾಗ ನಿಯೋಜಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)	

		ಚಿಕ್ಕಮಗಳೂರು ವಿಭಾಗದ ಬೇಲೂರು ಘಟಕದಲ್ಲಿ 38 ಅನುಸೂಚಿಗಳನ್ನು 41 ವಾಹನಗಳಿಂದ ಕಾರ್ಯಾಚರಣೆ ಮಾಡಲಾಗುತ್ತಿದ್ದು, ಶೇಕಡ 7.5% ರಷ್ಟು ಹೆಚ್ಚುವರಿ ವಾಹನಗಳಿರುತ್ತದೆ. ಕಳೆದ ನಾಲ್ಕು ವರ್ಷಗಳಲ್ಲಿ ಬೇಲೂರು ಘಟಕಕ್ಕೆ 17 ಹೊಸ ವಾಹನಗಳನ್ನು ನಿಯೋಜಿಸಲಾಗಿರುತ್ತದೆ. ಪ್ರಸ್ತುತ ಬೇಲೂರು ಘಟಕದಲ್ಲಿ ವಾಹನಗಳ ಕೊರತೆ ಇರುವುದಿಲ್ಲ. ಆದಾಗ್ಯೂ, ವಾಹನಗಳ ಅವಶ್ಯಕತೆ ಇದ್ದಲ್ಲಿ ನಿಗಮದ ನಿಯಾಮಾವಳಿ ಅನುಸಾರ ಹೊಸ ವಾಹನಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಮುಂದೆ ಹೆಚ್ಚುವರಿ ಅನುಸೂಚಿಗಳನ್ನು ಅಗತ್ಯತೆಗೆ ತಕ್ಕಂತೆ ಪ್ರಾರಂಭಿಸಿದಾಗ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು.

ಸಂಖ್ಯೆ: ಟಿಡಿ 114 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2822
ಮಾನ್ಯ ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ಮಂಜುನಾಥ ಹೆಚ್.ಪಿ (ಹುಣಸೂರು)
ಉತ್ತರಿಸಬೇಕಾದ ದಿನಾಂಕ	:	17.03.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಮೈಸೂರು ಜಿಲ್ಲೆ ಹುಣಸೂರು ವಿಧಾನ ಸಭಾ ಕ್ಷೇತ್ರಕ್ಕೆ ವಿಕಲಚೇತನರ ಕಲ್ಯಾಣ ಇಲಾಖೆಯಿಂದ ಎಷ್ಟು ಜನ ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ. (ವರ್ಷವಾರು ಮಾಹಿತಿ ನೀಡುವುದು)	ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಮೈಸೂರು ಜಿಲ್ಲೆ ಹುಣಸೂರು ವಿಧಾನ ಸಭಾ ಕ್ಷೇತ್ರದ ವಿಕಲಚೇತನರಿಂದ ತ್ರಿಚಕ್ರವಾಹನಗಳಿಗೆ ಬೇಡಿಕೆ ಇರದ ಕಾರಣ ತ್ರಿಚಕ್ರವಾಹನಗಳನ್ನು ನೀಡಿರುವುದಿಲ್ಲ.
ಆ	ಈ ಮತ ಕ್ಷೇತ್ರದಲ್ಲಿರುವ ಅಂಗವಿಕಲರುಗಳು ಎಷ್ಟು? (ಶೇಕಡಾವಾರು ಅಂಗವೈಫಲ್ಯತೆಯ ಮಾಹಿತಿ ನೀಡುವುದು)	ಮೈಸೂರು ಜಿಲ್ಲೆಯ ಹುಣಸೂರು ವಿಧಾನ ಸಭಾ ಮತ ಕ್ಷೇತ್ರದಲ್ಲಿ ಈ ಕೆಳಕಂಡ ಅಂಗವಿಕಲರು ಇರುತ್ತರೆ. (ಕೆಳಗಿನ ಕೋಷ್ಟಕ)
ಇ	ಇದುವರೆಗೆ ತ್ರಿಚಕ್ರ ವಾಹನಗಳಿಗೆ ಈ ಮತ ಕ್ಷೇತ್ರದಿಂದ ಬಂದಿರುವ ಬೇಡಿಕೆಗಳೆಷ್ಟು; (ವಿವರ ನೀಡುವುದು)	ತ್ರಿಚಕ್ರ ವಾಹನಗಳಿಗೆ ಬೇಡಿಕೆ ಬಂದಿರುವುದಿಲ್ಲ.
ಈ	ಅಂಗವಿಕಲ ವಾಹನ ಪಡೆಯಲು ಅರ್ಹವಿರುವ ಫಲಾನುಭವಿಗಳಿಗೆ ಶೀಘ್ರವಾಗಿ ತ್ರಿಚಕ್ರವಾಹನ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು)	ತ್ರಿಚಕ್ರವಾಹನಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲು ಯಾವುದೇ ತೊಂದರೆಗಳಿರುವುದಿಲ್ಲ.

ದೈಹಿಕ ವಿಕಲಚೇತನರು	1855	52.10%
ದೃಷ್ಠಿದೋಷವುಳ್ಳವರು	690	19.38%
ವಾಕ್ ಶ್ರವಣದೋಷವುಳ್ಳವರು	430	12.07%
ಬುದ್ಧಿಮಾಂದ್ಯರು	302	8.48%
ಮಾನಸಿಕ ಅಸ್ವಸ್ಥರು	43	1.20%
ಕುಷ್ಠರೋಗ ನಿವಾರಿತರು	79	2.21%
ಬಹುವಿಧ ವಿಕಲಚೇತನರು	161	4.52%
ಒಟ್ಟು	3560	

ಉ	ತ್ರಿಚಕ್ರ ವಾಹನಗಳನ್ನು ವಿತರಿಸಲು ಇದುವರೆಗೆ ಮಂಜೂರಾದ ಅನುದಾನ ಎಷ್ಟು; ಎಷ್ಟು ವಾಹನಗಳನ್ನು ವಿತರಿಸಲಾಗಿದೆ; (ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಅಂಗವಿಕಲರಿಗೆ ಸಾಧನ ಸಲಕರಣೆಗಳು (2235-02-101-0-52) ಯೋಜನೆಯಡಿ ನಿಗದಿ, ಬಿಡುಗಡೆ ಹಾಗೂ ವೆಚ್ಚದ ವಿವರಗಳು

ಕ್ರ ಸಂ	ವರ್ಷ	ಆಯವ್ಯಯ ನಿಗದಿ	ಪರಿಷ್ಕೃತ ಆಯವ್ಯಯ ನಿಗದಿ	ಆಯವ್ಯಯ ಬಿಡುಗಡೆ	ಮಾರ್ಚ್-ಅಂತ್ಯದ ವರೆಗಿನ ವೆಚ್ಚ
1	2017-18	3000.00	3000.00	3000.00	2783.43
2	2018-19	1300.00	1268.00	1268.00	240.85
3	2019-20	1960.00	1960.00	1960.00	862.47

ಸಂಖ್ಯೆ: ಮಮಇ 79 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2841
ಸದಸ್ಯರ ಹೆಸರು	:	ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)
ಉತ್ತರಿಸಬೇಕಾದ ದಿನಾಂಕ	:	17-03-2021.
ಉತ್ತರಿಸುವ ಸಚಿವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಲ್ಪಸಂಖ್ಯಾತರಿಗೆ ಹಜ್ ಮತ್ತು ವಕ್ಫ್ ಇಲಾಖೆಯ ವತಿಯಿಂದ ಹಜ್ ಯಾತ್ರೆಗಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು, ತಾಲ್ಲೂಕವಾರು ಮಾಹಿತಿ ಒದಗಿಸುವುದು)	ಹಜ್ ಯಾತ್ರೆಗೆ ತೆರಳುವ ಯಾತ್ರಿಕರು ತಮ್ಮ ಸ್ವಂತ ಖರ್ಚಿನಿಂದ ಹಜ್ ಯಾತ್ರೆ ಕೈಗೊಳ್ಳಬೇಕು. ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಹಜ್ ಸಮಿತಿಯ ನಿರ್ವಹಣೆ ಹಾಗೂ ಹಜ್ ಕ್ಯಾಂಪ್‌ಗಳನ್ನು ಆಯೋಜಿಸಲು ಅನುದಾನವನ್ನು ನೀಡುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ರಾಜ್ಯ ಹಜ್ ಸಮಿತಿಗೆ ನೀಡಿರುವ ಅನುದಾನ ಈ ಕೆಳಕಂಡಂತಿದೆ. 2018-19 – ರೂ.240.00 ಲಕ್ಷಗಳು 2019-20 – ರೂ.240.00 ಲಕ್ಷಗಳು 2020-21 – ರೂ.250.00 ಲಕ್ಷಗಳು
ಆ.	ರಾಜ್ಯದಲ್ಲಿ ವಕ್ಫ್ ಇಲಾಖೆಯಡಿ ನೋಂದಣಿಯಾಗಿರುವ ಎಲ್ಲಾ ಅಲ್ಪಸಂಖ್ಯಾತರ ಸಂಘ ಮತ್ತು ಸಂಸ್ಥೆಗಳು ಎಷ್ಟು? (ಜಿಲ್ಲಾವಾರು, ತಾಲ್ಲೂಕವಾರು ವಿವರ ಒದಗಿಸುವುದು)	ರಾಜ್ಯದಲ್ಲಿ ವಕ್ಫ್ ಇಲಾಖೆಯಡಿ 105 ಸಂಘ ಸಂಸ್ಥೆಗಳು ವಕ್ಫ್ ಆಸ್ತಿಗಳೆಂದು ನೋಂದಾಯಿಸಲ್ಪಟ್ಟಿರುತ್ತದೆ. ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.

ಸಂಖ್ಯೆ: MWD 95 LMQ 2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ನೋಂದಣಿಯಾಗಿರುವ ಅಲ್ಪಸಂಖ್ಯಾತರ ಮುಸ್ಲಿಂ ಸಂಘ ಮತ್ತು ಸಂಸ್ಥೆಗಳ ಜಿಲ್ಲಾವಾರು ವಿವರ

ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ನೋಂದಣಿಯಾದ ಸಂಘ/ಸಂಸ್ಥೆಗಳ ಸಂಖ್ಯೆ
1	ಬೆಂಗಳೂರು ನಗರ	28
2	ಬೆಂಗಳೂರು ಗ್ರಾಮಾಂತರ	1
3	ಚಿಕ್ಕಬಳ್ಳಾಪುರ	2
4	ಚಿತ್ರದುರ್ಗ	0
5	ದಾವಣಗೆರೆ	0
6	ಕೋಲಾರ	3
7	ರಾಮನಗರ	2
8	ಶಿವಮೊಗ್ಗ	6
9	ತುಮಕೂರು	2
10	ಬೆಳಗಾವಿ	19
11	ಬಾಗಲಕೋಟೆ	17
12	ಧಾರವಾಡ	1
13	ಗದಗ	0
14	ಹಾವೇರಿ	5
15	ಉತ್ತರ ಕನ್ನಡ	0
16	ವಿಜಯಪುರ	6
17	ಕಲಬುರಗಿ	0
18	ಬಳ್ಳಾರಿ	0
19	ಬೀದರ	0
20	ಕೊಪ್ಪಳ	0
21	ರಾಯಚೂರು	2
22	ಯಾದಗಿರಿ	0
23	ಮೈಸೂರು	2
24	ಚಾಮರಾಜನಗರ	0
25	ಚಿಕ್ಕಮಗಳೂರು	0
26	ದಕ್ಷಿಣ ಕನ್ನಡ	2
27	ಕೊಡಗು	5
28	ಹಾಸನ	1
29	ಮಂಡ್ಯ	1
30	ಉಡುಪಿ	0
	ಒಟ್ಟು	**105**

<u>ಕರ್ನಾಟಕ ವಿಧಾನ ಸಭೆ</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2843

ಮಾನ್ಯ ಸದಸ್ಯರ ಹೆಸರು : ಶ್ರೀ.ಶ್ರೀನಿವಾಸ್ ಎಂ. (ಮಂಡ್ಯ)

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಉತ್ತರಿಸಬೇಕಾದ ದಿನಾಂಕ : 17-03-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಮಂಡ್ಯ ಜಿಲ್ಲೆಯಲ್ಲಿರುವ ತೋಟಗಾರಿಕೆ ಇಲಾಖೆಯ ಭೂ ಪ್ರದೇಶ ಎಷ್ಟು; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)	ಮಂಡ್ಯ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 1841 ಎಕರೆ 21 ಗುಂಟೆ ಭೂ ಪ್ರದೇಶವಿರುತ್ತದೆ. ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಈ ಕೆಳಕಂಡಂತಿದೆ.

ಕ್ರ.ಸಂ	ತೋಟಗಾರಿಕೆ ಸಸ್ಯಾಗಾರದ ಹೆಸರು	ವಿಧಾನ ಸಭಾ ಕ್ಷೇತ್ರದ ಹೆಸರು	ವಿಸ್ತೀರ್ಣ (ಎಕರೆ: ಗುಂಟೆಗಳಲ್ಲಿ)
1	ಮಂಡ್ಯ ತೋ.ಕ್ಷೇ.	ಮಂಡ್ಯ ವಿಧಾನ ಸಭಾ ಕ್ಷೇತ್ರ	12.03
2	ದುದ್ದ ತೋ.ಕ್ಷೇ.		7.08
3	ಶಿವಳ್ಳಿ ತೋ.ಕ್ಷೇ.		51.00
4	ಎಂ ಹೊಸಹಳ್ಳಿ ತೋ.ಕ್ಷೇ.		49.08
5	ಸುಂಡಹಳ್ಳಿ ತೋ.ಕ್ಷೇ.		0.17
6	ಪುರ ತೋ.ಕ್ಷೇ.		16.25
7	ಬೇಲೂರು ತೋ.ಕ್ಷೇ.		5.00
8	ಬಿ.ಗೌಡಗೆರೆ ತೋ.ಕ್ಷೇ.		4.05
9	ಜವರನಹಳ್ಳಿ ತೋ.ಕ್ಷೇ.	ನಾಗಮಂಗಲ ವಿಧಾನ ಸಭಾ ಕ್ಷೇತ್ರ	59.06
10	ಮಲ್ಲಸಂದ್ರು ಕಾವಲ್ ತೋ.ಕ್ಷೇ.		879.13
11	ಕಚೇರಿ ಸಸ್ಯಾಗಾರ		1.10
12	ನಾಯಕನಹಳ್ಳಿ ತೋ.ಕ್ಷೇ.	ಕೆ.ಆರ್.ಪೇಟೆ ವಿಧಾನ ಸಭಾ ಕ್ಷೇತ್ರ	190.00
13	ಮುರುಕನಹಳ್ಳಿ ತೋ.ಕ್ಷೇ.		47.06
14	ಶೀಳನೆರೆ ತೋ.ಕ್ಷೇ.		53.00
15	ನಗುವನ ತೋ.ಕ್ಷೇ.	ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರ	37.24
16	ಕಚೇರಿ ಸಸ್ಯಾಗಾರ		2.38
17	ಗಾಮನಹಳ್ಳಿ ತೋ.ಕ್ಷೇ.		17.01
18	ಗಂಜಾಂ ತೋ.ಕ್ಷೇ.		3.13
19	ಕಚೇರಿ ಸಸ್ಯಾಗಾರ	ಮಳವಳ್ಳಿ ವಿಧಾನ ಸಭಾ ಕ್ಷೇತ್ರ	3.20
20	ಪೂರಿಗಾಲಿ ತೋ.ಕ್ಷೇ.		179.36
21	ಹಿಟ್ಟನಹಳ್ಳಿ ತೋ.ಕ್ಷೇ.		3.17
22	ದೇವಿಪುರ ಸಸ್ಯಾಗಾರ		1.22
23	ಹಳೇಬೀಡು ತೋ.ಕ್ಷೇ.	ಪಾಂಡವಪುರ	49.37

24	ಕಚೇರಿ ಸಸ್ಯಾಗಾರ	ವಿಧಾನ ಸಭಾ ಕ್ಷೇತ್ರ	0.22
25	ಸರ್ಕಾರಿ ಹಣ್ಣಿನ ತೋಟ		74.00
26	ಕನಗನಹಳ್ಳಿ ತೋ.ಕ್ಷೇ.		34.24
27	ಕಚೇರಿ ಸಸ್ಯಾಗಾರ	ಮದ್ದೂರು ವಿಧಾನ ಸಭಾ ಕ್ಷೇತ್ರ	1.28
28	ಜವರಾಯಿ/ಮದ್ದೂರು ತೋ.ಕ್ಷೇ.		26.00
29	ನವಿಲೆ ತೋ.ಕ್ಷೇ.		9.38
30	ಚಿಕ್ಕಅಂಕನಹಳ್ಳಿ ತೋ.ಕ್ಷೇ.		20.00
	ಒಟ್ಟು		**1841.21**

ಆ)	ಮಂಡ್ಯ ವಿಧಾನಸಭಾ ಕ್ಷೇತ್ರದ ಬಿ.ಗೌಡಗೆರೆ ಗ್ರಾಮದಲ್ಲಿ ತೋಟಗಾರಿಕೆ ಇಲಾಖೆಗೆ ಸೇರಿರುವ ಒಟ್ಟು ಭೂ ಪ್ರದೇಶವೆಷ್ಟು; ಸದರಿ ಜಾಗದ ಪ್ರಸ್ತುತ ಸ್ಥಿತಿಯೇನು; (ವಿವರ ನೀಡುವುದು)	ಮಂಡ್ಯ ವಿಧಾನಸಭಾ ಕ್ಷೇತ್ರದ ಬಿ.ಗೌಡಗೆರೆ ಗ್ರಾಮದಲ್ಲಿ ತೋಟಗಾರಿಕೆಗೆ ಇಲಾಖೆಗೆ ಸೇರಿರುವ 4 ಎಕರೆ 05 ಗುಂಟೆ ಭೂ ಪ್ರದೇಶವಿರುತ್ತದೆ. ಸದರಿ ಕ್ಷೇತ್ರವು ಕೆರೆಯಿಂದ ಕೂಡಿದ್ದು, ಕೆರೆಯನ್ನು ಮುಚ್ಚಿಸಿ ಭೂಮಿಯನ್ನು ಸಮತಟ್ಟು ಮಾಡಿ ಕ್ಷೇತ್ರಕ್ಕೆ ಅವಶ್ಯವಿರುವ ನೀರಿನ ವ್ಯವಸ್ಥೆಗಾಗಿ ಬೋರ್ ವೆಲ್, ಪೈಪ್ ಲೈನ್ ಅಳವಡಿಸಿ, ತೆಂಗು ಸಸ್ಯಾಭಿವೃದ್ಧಿ ಮತ್ತು ಇತರೆ ತೋಟಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.
ಇ)	ಬಿ.ಗೌಡಗೆರೆ ಗ್ರಾಮದಲ್ಲಿ ಶೀಥಲೀಕರಣ ಘಟಕ ನಿರ್ಮಾಣ ಮಾಡುವ ಸಂಬಂಧದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ.?	ಬಿ.ಗೌಡಗೆರೆ ಗ್ರಾಮದಲ್ಲಿ ಶೀಥಲೀಕರಣ ಘಟಕ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ: HORTI 149 HGM 2021

(ಆರ್. ಶಂಕರ್)

ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2857

